ಸಂಪುಟ: 04 ಸಂಚಿಕೆ: 90 ಪುಟಗಳು: 08 ಗುರುವಾರ 13 ಜೂನ್ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸೋಲೆಂಬ ರೋಗಕ್ಕೆ ಆತ್ಮವಿಶ್ವಾಸ ಮತ್ತು ಕಠಿಣ ಪರಿಶ್ರಮವೇ ಮದ್ದು, ಇದು ಯಾರಲ್ಲಿರುತ್ತದೆಯೋ ಅವರಿಗೆ ಯಶಸ್ಸು ಕಟ್ಟಿಟ್ಟ ಬುತ್ತಿ

# ಆಂಧ್ರಪ್ರದೇಶ ಸಿಎಂ ಆಗಿ ಚಂದ್ರಬಾಬು ನಾಯ್ಡು ಪದಗ್ರಹಣ





## ಪವನ್ ಕಲ್ಯಾಣ್ ಸೇರಿ 24 ಸಚಿವರು ಸಂಪುಟಕ್ಕೆ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಜೆಪಿ ನಡ್ಡಾ, ಚಿರಂಜೀವಿ, ರಜನಿಕಾಂತ್ ಇತರರು ಭಾಗಿ

**ಮರಳಿ ಅಧಿಕಾರಕ್ಕೆ ಬಂದಿರುವ ಟಿಡಿಪಿ**

• ಉದಯವಾಹಿನಿ, ವಿಜಯವಾಡ

ಆಂಧ್ರಪ್ರದೇಶದ ಮುಖ್ಯಮಂತ್ರಿಯಾಗಿ ತೆಲುಗು ದೇಶಂ ಪಕ್ಷದ (ಟಿಡಿಪಿ) ಮುಖ್ಯಸ್ಥ ಎನ್ ಚಂದ್ರಬಾಬು ನಾಯ್ಡು ಅವರು ಪ್ರಮಾಣ ವಚನ ಸ್ವೀಕರಿಸಿದರು. ಈ ಮೂಲಕ ನಾಲ್ಕನೇ ಅವಧಿಗೆ ಗದ್ದುಗೆ ಏರಿದರು. ಜನಸೇನಾ ಪಕ್ಷದ ಮುಖ್ಯಸ್ಥ ಹಾಗೂ 'ಪವರ್ ಸ್ಟಾರ್' ಪವನ್ ಕಲ್ಯಾಣ್ ಅವರು ಸಂಪುಟ ಸಚಿವರಾಗಿ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ವಿಜಯವಾಡದ ಹೊರವಲಯದಲ್ಲಿ ನಡೆದ ಭವ್ಯ ಪ್ರಮಾಣ ವಚನ ಸಮಾರಂಭದಲ್ಲಿ, ಪವನ್ ಕಲ್ಯಾಣ್ ಅವರ ಜತೆ, ಚಂದ್ರಬಾಬು ನಾಯ್ಡು ಅವರ ಮಗ ಮತ್ತು ಟಿಡಿಪಿ ಪ್ರಧಾನ ಕಾರ್ಯದರ್ಶಿ ನಾರಾ ಲೋಕೇಶ್ ಸೇರಿದಂತೆ 23 ಮಂದಿ ಪ್ರಮಾಣ ವಚನ ಸ್ವೀಕರಿಸಿದರು. ಎನ್‌ಡಿಎ ಮೈತ್ರಿಕೂಟದ ಬಿಜೆಪಿ 8 ಸ್ಥಾನಗಳಲ್ಲಿ ಜಯಗಳಿಸಿತ್ತು. ಅವರಲ್ಲಿ ಆಂಧ್ರ ಪ್ರದೇಶ ಸಂಪುಟಕ್ಕೆ ಸತ್ಯ ಕುಮಾರ್ ಯಾದವ್ ಮಾತ್ರ ಆಯ್ಕೆಯಾಗಿದ್ದಾರೆ. ಜನಸೇನಾದ ಒಟ್ಟು ಮೂವರು ಸಂಪುಟ ಸೇರಿದ್ದಾರೆ. ಪವನ್ ಕಲ್ಯಾಣ್ ಅವರಿಗೆ ಉಪ ಮುಖ್ಯಮಂತ್ರಿ ಹುದ್ದೆ ನೀಡುವ ನಿರೀಕ್ಷೆ ಇದೆ.

ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಕೇಂದ್ರ ಆರೋಗ್ಯ ಸಚಿವ ಜೆಪಿ ನಡ್ಡಾ, ನಟ ರಜನಿಕಾಂತ್, ಪವನ್ ಕಲ್ಯಾಣ್ ಅವರ ಅಣ್ಣ ಚಿರಂಜೀವಿ, ತೆಲಂಗಾಣದ ಮಾಜಿ ರಾಜ್ಯಪಾಲೆ ತಮಿಳ್ ಸಾಯಿ ಸೌಂದರರಾಜನ್ ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಪ್ರಮಾಣ ವಚನದ ಬಳಿಕ ಚಂದ್ರಬಾಬು ನಾಯ್ಡು ಅವರನ್ನು ಅಪ್ಪಿಕೊಂಡು ಪ್ರಧಾನಿ ಮೋದಿ ಅವರು ಅಭಿನಂದಿಸಿದರು.

**ಯಾವ ಸಮುದಾಯಕ್ಕೆ ಮನ್ನಣೆ?**

ವಿಜಯವಾಡದ ಗನ್ನಾವರಂ ವಿಮಾನ ನಿಲ್ದಾಣದ ಸಮೀಪದ ಕೇಸರಪಲ್ಲಿ ಐಟಿ ಪಾರ್ಕ್‌ನಲ್ಲಿ ಪ್ರಮಾಣ ವಚನ ಸಮಾರಂಭ ನಡೆಯಿತು. ರಾಜ್ಯಪಾಲ ಎಸ್ ಅಬ್ದುಲ್ ನಜೀರ್ ಅವರು ನಾಯ್ಡು ಸೇರಿದಂತೆ ಎಲ್ಲಾ 25 ಸಚಿವರಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಆಂಧ್ರಪ್ರದೇಶ ರಾಜ್ಯ ಟಿಡಿಪಿ ಅಧ್ಯಕ್ಷ ಕೆ ಅಚನ್ ನಾಯ್ಡು, ಜನಸೇನಾ ಪಕ್ಷದ ರಾಜಕೀಯ ವ್ಯವಹಾರಗಳ ಸಮಿತಿ ಅಧ್ಯಕ್ಷ ನಾಡೆಂಡ್ಲಾ ಮನೋಹರ್, ರಾಜಮುಂಡ್ರಿ ಗ್ರಾಮೀಣ ಕ್ಷೇತ್ರದ ಜನಸೇನಾ ಶಾಸಕ ಕಂಡುಲಾ ದುರ್ಗೇಶ್ ಅವರಿಗೆ ಸಚಿವ ಸ್ಥಾನ ದೊರಕಿದೆ. 25 ಮಂದಿಯಲ್ಲಿ 17 ಸಚಿವರು ಹೊಸಬರಾಗಿದ್ದಾರೆ. ಮೂವರು ಮಹಿಳೆಯರು ಸಂಪುಟ ಸೇರಿದ್ದು, ಹಿರಿಯ ನಾಯಕ ಎನ್ ಮೊಹಮ್ಮದ್ ಫಾರೂಕ್ ಅವರು ಸಂಪುಟದಲ್ಲಿ ಸ್ಥಾನ ಪಡೆದ ಏಕೈಕ ಮುಸ್ಲಿಂ ಸಚಿವರೆನಿಸಿದ್ದಾರೆ.


ಮಂತ್ರಿಮಂಡಲದಲ್ಲಿ ಎಂಟು ಮಂದಿ ಹಿಂದುಳಿದ ವರ್ಗದವರು, ಮೂವರು ಪರಿಶಿಷ್ಟ ಜಾತಿ ಹಾಗೂ ಒಬ್ಬ ಪರಿಶಿಷ್ಟ ಪಂಗಡದ ಸಚಿವರಿದ್ದಾರೆ. ಕಮ್ಮ ಹಾಗೂ ಕಾಪು ಸಮುದಾಯದ ತಲಾ ನಾಲ್ವರಿಗೆ, ರೆಡ್ಡಿ ಸಮುದಾಯದ ಮೂವರು, ವೈಶ್ಯ ಸಮುದಾಯದ ಒಬ್ಬರಿಗೆ ನಾಯ್ಡು ಸ್ಥಾನ ಕಲ್ಪಿಸಿದ್ದಾರೆ. ನಾಯ್ಡು ಅವರು ಸಾಮಾಜಿಕ ಹಾಗೂ ರಾಜಕೀಯವಾಗಿ ಪ್ರಬಲವಾಗಿರುವ ಕಮ್ಮ ಸಮುದಾಯಕ್ಕೆ ಸೇರಿದ್ದರೆ, ಪವನ್ ಕಲ್ಯಾಣ್ ಕಾಪು ಸಮುದಾಯದವರು.

**1** ಚಂದ್ರಬಾಬು ನಾಯ್ಡು ಅವರ ಸಂಪುಟದಲ್ಲಿ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಪವನ್ ಕಲ್ಯಾಣ್

**2** ಈ ಬಾರಿ ಆಂಧ್ರದಲ್ಲಿ ಎನ್ ಡಿಎ ಅತ್ಯಧಿಕ ಸ್ಥಾನ ಗಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದ ಪವರ್ ಸ್ಟಾರ್

**3** ರಾಜ್ಯದಲ್ಲಿ ಎನ್ ಡಿಎ ಬಲಪಡಿಸುವ ಸಲುವಾಗಿ ಪವನ್ ಗೆ ನೀಡಲಾಗುತ್ತಾ ಉಪಮುಖ್ಯಮಂತ್ರಿ ಹುದ್ದೆ?

### ನಾಯ್ಡುವನ್ನು ಬಿಗಿದಪ್ಪಿದ ಮೋದಿ



ನೂತನ ಸಿಎಂ-ಡಿಸಿಎಂ ಪ್ರಮಾಣವಚನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ಚಂದ್ರಬಾಬುನಾಯ್ಡು ಅವರು ಪ್ರಮಾಣವಚನ ಸ್ವೀಕರಿಸಿದ ತಕ್ಷಣವೇ ಅವರನ್ನು ಅಭಿನಂದಿಸಿ ಬಿಗಿದಪ್ಪಿ ಶುಭಾಶಯ ಕೋರಿದ್ದು ವಿಶೇಷವಾಗಿತ್ತು. ಹಾಗೆಯೇ ಡಿಸಿಎಂ ಆಗಿರುವ ನಟ ಪವನ್ ಕಲ್ಯಾಣ್ ಹಾಗೂ ಅವರ ಸಹೋದರ ಚಿರಂಜೀವಿ ಅವರಿಗೂ ಹಸ್ತಲಾಘವ ನೀಡಿ ಅವರಿಬ್ಬರ ಜತೆ ವೇದಿಕೆಯ ಮುಂಭಾಗಕ್ಕೆ ಬಂದು ಕೈ ಎತ್ತಿ ಶುಭಾಶಯ ಕೋರಿದ್ದು ಗಮನ ಸೆಳೆಯಿತು.

| ಸಚಿವರುಗಳ ಪಟ್ಟಿ | |
|---|---|
| ಪವನ್ ಕಲ್ಯಾಣ್ | ಜೆಎಸ್‌ಪಿ |
| ನಾರಾ ಲೋಕೇಶ್ | ಟಿಡಿಪಿ |
| ಕಿಂಜಾರಪು ಅಕ್ಕಿನೇನಿ ನಾಯ್ಡು | ಟಿಡಿಪಿ |
| ಕೊಲು ರವೀಂದ್ರ | ಟಿಡಿಪಿ |
| ನಾದೆಂಡ್ಲ ಮನೋಹರ್ | ಜೆಎಸ್‌ಪಿ |
| ಪಿ. ನಾರಾಯಣ | ಟಿಡಿಪಿ |
| ವಂಗಲಪ್ಪುಡಿ ಅನಿತಾ | ಟಿಡಿಪಿ |
| ಸತ್ಯಕುಮಾರ್ ಯಾದವ್ | ಬಿಜೆಪಿ |
| ನಿಮ್ಮಾಲ ರಾಮನಾಯ್ಡು | ಟಿಡಿಪಿ |
| ಎನ್.ಎಂ.ಡಿ ಫರೂಕ್ | ಟಿಡಿಪಿ |
| ಅನ್ನಮ್ ರಾಮನಾರಾಯಣ ರೆಡ್ಡಿ | ಟಿಡಿಪಿ |
| ಪಯ್ಯಾವುಲ ಕೇಶವ | ಟಿಡಿಪಿ |
| ಅಗ್ನಿ ಸತ್ಯಪ್ರಸಾದ್ | ಟಿಡಿಪಿ |
| ಕೊಲುಸು ಪಾರ್ಥಸಾರಥಿ | ಟಿಡಿಪಿ |
| ದೊಲಾ ಬಾಲವೀರಾಂಜನೇಯಸ್ವಾಮಿ | ಟಿಡಿಪಿ |
| ಗೊಟ್ಟಿಪತಿ ರವಿ | ಟಿಡಿಪಿ |
| ಕಂದುಲಾ ದುರ್ಗೇಶ್ | ಜೆಎಸ್‌ಪಿ |
| ಗುಮ್ಮಾಡಿ ಸಂಧ್ಯಾರಾಣಿ | ಟಿಡಿಪಿ |
| ಬಿ.ಸಿ ಜನಾರ್ಧನ ರೆಡ್ಡಿ | ಟಿಡಿಪಿ |
| ಪಿ.ಜಿ ಭರತ್ | ಟಿಡಿಪಿ |
| ಎಸ್.ಸವಿತಾ | ಟಿಡಿಪಿ |
| ವಾಸಂ ಶೆಟ್ಟಿ ಶುಭಾಷ್ | ಟಿಡಿಪಿ |
| ಕೊಂಡಪಲ್ಲಿ ಶ್ರೀನಿವಾಸ್ | ಟಿಡಿಪಿ |
| ಮಂಡಿಪಲ್ಲಿ ರಾಮ್‌ಪ್ರಸಾದ್ ರೆಡ್ಡಿ | ಟಿಡಿಪಿ |

### ಸಹೋದರ ಚಿರಂಜೀವಿ ಸಂತಸ



ಪವನ್ ಕಲ್ಯಾಣ್ ಅವರು ತೆಲುಗಿನ ಮೆಘಾಸ್ಟಾರ್ ಚಿರಂಜೀವಿ ಅವರ ಸಹೋದರ. ಚುನಾವಣಾ ಪ್ರಚಾರದ ವೇಳೆ ಚಿರಂಜೀವಿ ಅವರು ತಮ್ಮ ತಮ್ಮನನ್ನು ನವಯುಗದ ರಾಜಕಾರಣಿ ಎಂದು ಬಣ್ಣಿಸಿದ್ದರು. ಪವನ್ ತನ್ನ ಒತ್ತಾಯಕ್ಕೆ ಚಲನಚಿತ್ರ ರಂಗ ಪ್ರವೇಶಿದ್ದ, ಆದರೆ ಸ್ವ ಇಚ್ಚೆಯಿಂದ ರಾಜಕೀಯಕ್ಕೆ ಬಂದ ಎಂದು ತಿಳಿಸಿದ್ದರು. ಚಿರಂಜೀವಿ ಅವರು ರಾಜಕೀಯ ಪಕ್ಷ ರಚಿಸಿದ್ದರಾದರೂ ಅದರಲ್ಲಿ ಅವರು ದೊಡ್ಡ ಮಟ್ಟದ ಯಶಸ್ಸು ಗಳಿಸಿರ ಲಿಲ್ಲ. ಆದರೆ ಪವನ್ ಕಲ್ಯಾಣ್ ಅಧಿಕಾರವನ್ನೇ ಹಿಡಿದರು. ತಮ್ಮನ ಈ ಸಾಧನೆ ಬಗ್ಗೆ ಚಿರಂಜೀವಿ ಅವರು ಸಂತಸ ವ್ಯಕ್ತಪಡಿ ಸಿದ್ದಾರೆ. ಇನ್ನು ಪ್ರಮಾಣವಚನಕ್ಕೂ ಮುನ್ನ ಅವರು ತಮ್ಮ ಸಹೋದರ ಚಿರಂಜೀವಿ ಅವರ ಕಾಲು ಮುಟ್ಟಿ ನಮಸ್ಕರಿಸಿದ್ದು ಚಿರಂಜೀವಿ ಬಗ್ಗೆ ಅವರಿಗಿದ್ದ ಗೌರವದ ದ್ಯೋತಕವಾಗಿತ್ತು. ಈ ವಿಡಿಯೋ ಇದೀಗ ವೈರಲ್ ಆಗುತ್ತಿದೆ.



ನೀವಿಬ್ಬರೂ ಜಾತ್ಯಾತೀತ ವ್ಯಕ್ತಿಗಳು. ಆದರೆ, ನಿಮ್ಮ ಜೊತೆಗಿರುವ ನಾಯಕ ಜಾತ್ಯತೀತರಲ್ಲ. ಆದರೂ, ನೀವಿಬ್ಬರೂ ನಿಮ್ಮ ಜಾತ್ಯಾತೀತತೆ ಉಳಿಸಿಕೊಂಡು, ಕೋಮವಾದದ ವ್ಯೂಹದೊಳಗೆ ಒಳಗಾಗದಂತೆ ರಾಜ್ಯಭಾರ ಮಾಡುತ್ತೀರಿ ಎಂದು ನಂಬಿದ್ದೇನೆ.

-ಪ್ರಕಾಶ್ ರೈ, ಹಿರಿಯ ನಟ

### ಉಪ ಮುಖ್ಯಮಂತ್ರಿ ಸ್ಥಾನದ ಬೇಡಿಕೆ

ಸರ್ಕಾರ ರಚನೆ ಹಿನ್ನೆಲೆಯಲ್ಲಿ ಟಿಡಿಪಿ, ಜನಸೇನಾ ಹಾಗೂ ಬಿಜೆಪಿ ನಡುವೆ ಖಾತೆ ಹಂಚಿಕೆ ಜೋರಾಗಿ ನಡೆಯುತ್ತಿದೆ. ಇದೇ ಸಂದರ್ಭದಲ್ಲಿ ಜನಸೇನಾ ಪಾರ್ಟಿಯ ಅಧ್ಯಕ್ಷರಾದ ಪವನ್ ಕಲ್ಯಾಣ್ ಅವರು, ಉಪ ಮುಖ್ಯಮಂತ್ರಿ ಸ್ಥಾನದ ಬೇಡಿಕೆಯಿಟ್ಟಿದ್ದಾರೆಂದು ಹೇಳಲಾಗಿದೆ. ಅಷ್ಟೇ ಅಲ್ಲದೆ, ಅವರು ಐದು ಸಚಿವ ಸ್ಥಾನಕ್ಕೂ ಬೇಡಿಕೆಯಿಟ್ಟಿದ್ದಾರೆ ಎಂದು ಹೇಳಲಾಗಿದೆ. ಆಂಧ್ರಪ್ರದೇಶ ವಿಧಾನಸಭಾ ಚುನಾವಣೆಯಲ್ಲಿ ತೆಲುಗುದೇಶಂ ಪಾರ್ಟಿ ಭರ್ಜರಿ 135 ಸ್ಥಾನ ಗೆದ್ದಿದ್ದರೆ, ಜನಸೇನಾ ಪಾರ್ಟಿ 21 ಸ್ಥಾನ, ವೈಎಸ್ ಆರ್ ಸಿಪಿ 11 ಸ್ಥಾನ ಹಾಗೂ ಬಿಜೆಪಿ 8 ಸ್ಥಾನ ಗೆದ್ದಿವೆ. ಆಂಧ್ರ ವಿಧಾನಸಭೆಯಲ್ಲಿ ಒಟ್ಟು 175 ಸ್ಥಾನಗಳಿದ್ದು, ಅವುಗಳಲ್ಲಿ ಸರ್ಕಾರ ರಚನೆಗೆ 88 ಸ್ಥಾನ ಬೇಕು. ಟಿಡಿಪಿ, ಜನಸೇನಾ ಹಾಗೂ ಬಿಜೆಪಿ ಸೇರಿ ಒಟ್ಟು 164 ಸ್ಥಾನಗಳನ್ನು ಗೆದ್ದಿವೆ.

### ಗಮನಾರ್ಹ ಸಾಧನೆ ತೋರಿದ ಎನ್‌ಡಿಎ

ಕೌಶಲ ಅಭಿವೃದ್ಧಿ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಅಕ್ರಮ ಹಣ ವರ್ಗಾವಣೆ ಆರೋಪದ ತನಿಖೆ ನಡೆಸಿದ್ದ ಜಾರಿ ನಿರ್ದೇಶನಾಲಯವು ಕೆಲವು ತಿಂಗಳ ಹಿಂದೆ ಚಂದ್ರಬಾಬು ನಾಯ್ಡು ಅವರನ್ನು ಬಂಧಿಸಿತ್ತು. ಜೈಲಿನಲ್ಲಿ ಕಳೆದ ಕೆಲವೇ ತಿಂಗಳ ಬಳಿಕ ನಾಯ್ಡು ಅವರು ಗಮನಾರ್ಹ ಸಾಧನೆ ಮೂಲಕ ಅಧಿಕಾರಕ್ಕೆ ಬಂದಿದ್ದಾರೆ. 175 ಸೀಟುಗಳ ಆಂಧ್ರ ವಿಧಾನಸಭೆಯಲ್ಲಿ ಟಿಡಿಪಿ, ಜನಸೇನಾ ಮತ್ತು ಬಿಜೆಪಿ ಜತೆಗೂಡಿ ಸ್ಪರ್ಧಿಸಿದ್ದವು. ಇದರಲ್ಲಿ ಟಿಡಿಪಿ 135, ಜನಸೇನಾ 21 ಹಾಗೂ ಬಿಜೆಪಿ 8 ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದವು. ಹಿಂದಿನ ಸಿಎಂ ವೈಎಸ್ ಜಗನ್ ಮೋಹನ್ ರೆಡ್ಡಿ ಅವರ ವೈಎಸ್‌ಆರ್ ಕಾಂಗ್ರೆಸ್ ಪಕ್ಷವು ಕೇವಲ 11 ಸ್ಥಾನಗಳಿಗೆ ಸೀಮಿತವಾಗಿತ್ತು.

## ಅಶ್ಲೀಲ ವಿಡಿಯೋ: ಜೂ.18 ರವರೆಗೆ ಪ್ರಜ್ವಲ್ ರೇವಣ್ಣ ಎಸ್‌ಐಟಿ ಕಸ್ಟಡಿಗೆ.!

• ಉದಯವಾಹಿನಿ, ಬೆಂಗಳೂರು

ಅಶ್ಲೀಲ ವಿಡಿಯೋ ಪ್ರಕರಣದಲ್ಲಿ ಜೂ.18 ರವರೆಗೆ ಪ್ರಜ್ವಲ್ ರೇವಣ್ಣನನ್ನು ಎಸ್‌ಐಟಿ ಕಸ್ಟಡಿಗೆ ನೀಡಿ ಕೋರ್ಟ್ ಆದೇಶ ಹೊರಡಿಸಿದೆ. ಮತ್ತೆ ಎಸ್ ಐ ಟಿ ವಶಕ್ಕೆ ನೀಡುವಂತೆ ಎಸ್ ಐ ಟಿ ಅಧಿಕಾರಿಗಳು ಮನವಿ ಮಾಡಿದ ಹಿನ್ನೆಲೆ ಬೆಂಗಳೂರಿನ 42 ನೇ ಎಸಿಎಂಎಂ ಕೋರ್ಟ್ ಜೂ.18 ರವರೆಗೆ ಪ್ರಜ್ವಲ್ ರೇವಣ್ಣನನ್ನು ಎಸ್ ಐ ಟಿ ಕಸ್ಟಡಿಗೆ ನೀಡಿ ಕೋರ್ಟ್ ಆದೇಶ ಹೊರಡಿಸಿದೆ. ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧಿತರಾಗಿದ್ದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಎಸ್‌ಐಟಿ ಕಸ್ಟಡಿ ಅಂತ್ಯವಾದ ಹಿನ್ನೆಲೆ ಕಳೆದ ವಾರ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು. ಪ್ರಜ್ವಲ್ ಅವರಿಗೆ ಕಾರಾಗೃಹದ ಅಧಿಕಾರಿಗಳು ವಿಶೇಷ ಭದ್ರತಾ ವಿಭಾಗದ ಸೆಲ್‌ನಲ್ಲಿ ಇರಿಸಿ ಅವರಿಗೆ ವಿಚಾರಣಾಧೀನ ಕೈದಿ ಸಂಖ್ಯೆ 5664 ನೀಡಿದ್ದರು. .

## ಯಡಿಯೂರಪ್ಪಗೆ ಸಿಐಡಿ ನೋಟಿಸ್ ಜಾರಿ: ವಿಚಾರಣೆ

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಸಿಐಡಿ ಪೋಕ್ಸೊ ಪ್ರಕರಣದಲ್ಲಿ ವಿಚಾರಣೆಗೆ ಕರೆಸಿದೆ ಎಂದು ಮೂಲಗಳು ಬುಧವಾರ ಬಹಿರಂಗಪಡಿಸಿವೆ. ಫೆಬ್ರವರಿಯಲ್ಲಿ ನಡೆದ ಸಭೆಯೊಂದರಲ್ಲಿ 17 ವರ್ಷದ ಬಾಲಕಿಯ ಮೇಲೆ ಯಡಿಯೂರಪ್ಪ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು, ಈ ಆರೋಪವನ್ನು ಮಾಜಿ ಮುಖ್ಯಮಂತ್ರಿ ಕಟುವಾಗಿ ನಿರಾಕರಿಸಿದ್ದರು. ಬಾಲಕಿಯ ತಾಯಿ ನೀಡಿದ ದೂರಿನ ಮೇರೆಗೆ ತನಿಖೆಯನ್ನು ಸಿಐಡಿಗೆ ವಹಿಸಲಾಗಿದೆ. ಇತ್ತೀಚೆಗೆ ದೂರುದಾರರು ಶ್ವಾಸಕೋಶದ ಕ್ಯಾನ್ಸರ್‌ನಿಂದ ಸಾವನ್ನಪ್ಪಿದ್ದರಿಂದ ಪ್ರಕರಣದ ತನಿಖೆ ತೀವ್ರಗೊಂಡಿದೆ. ಯಡಿಯೂರಪ್ಪ ಅವರು ಈ ಆರೋಪವನ್ನು ಕಾನೂನಾತ್ಮಕವಾಗಿ ಎದುರಿಸುವ ಇಂಗಿತ ವ್ಯಕ್ತಪಡಿಸಿದ್ದಾರೆ.

## ಆರೋಪ ಸಾಭೀತಾದ್ರೆ ಕನ್ನಡ ಚಿತ್ರರಂಗದಿಂದ ದರ್ಶನ್ ಬ್ಯಾನ್?

• ಉದಯವಾಹಿನಿ, ಬೆಂಗಳೂರು

ನಟ ದರ್ಶನ್ ಪದೇ ಪದೇ ಸುದ್ದಿಯಾಗುತ್ತಿದ್ದಾರೆ. ಅದೂ ವಿವಿಧ ಕ್ರೈಂಗಳಿಂದ ಆಗಿದೆ. ಈಗ ಚಿತ್ರದುರ್ಗ ಮೂಲಕ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಪೊಲೀಸರಿಂದ ಬಂಧನಕ್ಕೆ ಒಳಗಾಗಿದ್ದಾರೆ. ಈ ಪ್ರಕರಣದಲ್ಲಿ ಆರೋಪ ಸಾಭೀತಾದ್ರೆ ಕನ್ನಡ ಚಿತ್ರರಂಗದಿಂದ ನಟ ದರ್ಶನ್ ಬ್ಯಾನ್ ಆಗಲಿದ್ದಾರೆ ಎನ್ನಲಾಗುತ್ತಿದೆ. ನಟ ದರ್ಶನ್ ಗೆಳತಿ ಪವಿತ್ರಾ ಗೌಡಗೆ ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಎಂಬಾತ ಅಸಭ್ಯ ಮೆಸೇಜ್ ಹಾಗೂ ಪೋಟೋಗಳನ್ನು ಕಳುಹಿಸುತ್ತಿದ್ದ ಎಂಬ ಕಾರಣಕ್ಕೆ ದರ್ಶನ್ ಅಂಡ್ ಗ್ಯಾಂಗ್ ಬರ್ಬರವಾಗಿ ರೇಣುಕಾಸ್ವಾಮಿ ಹತ್ಯೆಗೈದಿದ್ದಾರೆ. ಇದು ಕನ್ನಡ ಚಿತ್ರರಂಗಕ್ಕೆ ದೊಡ್ಡ ಶಾಕ್ ನೀಡಿದಂತೆ ಆಗಿದೆ. ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಪವಿತ್ರಾ ಗೌಡ ಎ.1 ಆರೋಪಿಯಾದ್ರೇ, ನಟ ದರ್ಶನ್ ಎ.2 ಆರೋಪಿಯಾಗಿದ್ದಾರೆ. ಈಗ 6 ದಿನಗಳ ಕಾಲ ಪೊಲೀಸ್ ಕಸ್ಟಡಿಯಲ್ಲಿರುವಂತ ನಟ ದರ್ಶನ್ ಅಂಡ್ ಟೀಂಗೆ ಆರೋಪ ಸಾಭೀತಾದ್ರೆ ಸಂಕಷ್ಟ ಎದುರಾಗಲಿದೆ ಎನ್ನಲಾಗುತ್ತಿದೆ. ಅದರಲ್ಲೂ ನಟ ದರ್ಶನ್ ಗೆ ದೊಡ್ಡ ಸಂಕಷ್ಟವೇ ಎದುರಾಗಲಿದೆ. ಕನ್ನಡ ಚಿತ್ರರಂಗದಿಂದ ನಟ ದರ್ಶನ್ ಬ್ಯಾನ್ ಮಾಡ್ತಾರಾ ಎಂಬ ಪ್ರಶ್ನೆ ಈಗ ಎದ್ದಿದೆ. ಆ ಬಗ್ಗೆ ಮುಂದಿನ ದಿನಗಳಲ್ಲಿ ಖಚಿತ ಮಾಹಿತಿ ಲಭ್ಯವಾಗಬೇಕಿದೆ.

## ವಿಶ್ವದರ್ಜೆಯ ಅತ್ಯುತ್ತಮ ನಗರವಾಗಿಸುವುದು ನಮ್ಮ ಕನಸು

• ಉದಯವಾಹಿನಿ, ಬೆಂಗಳೂರು


ಬೆಂಗಳೂರನ್ನು ವಿಶ್ವದರ್ಜೆಯ ಅತ್ಯುತ್ತಮ ನಗರವಾಗಿಸುವುದು ನಮ್ಮ ಕನಸಾಗಿದೆ ಎಂದು ಉಪಮುಖ್ಯಮಂತ್ರಿಗಳಾದ ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು. ' ಹೊಸಕೋಟೆಯಲ್ಲಿ 18500 ಎಕರೆಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ನಂದಗುಡಿ ಟೌನ್ಶಿಪ್ ಯೋಜನೆಯ ಕುರಿತಂತೆ ಇಂದು ಪರಿಶೀಲನೆ ನಡೆಸಿದೆ. ಬೆಂಗಳೂರನ್ನು ಗ್ರೇಟರ್ ಬೆಂಗಳೂರು ಮಾಡುವ ಹೊಸ ದಿಕ್ಕಿನತ್ತ ನಾವು ಹೆಜ್ಜೆ ಇಡುತ್ತಿದ್ದೇವೆ. ಸ್ಯಾಟಲೈಟ್ ರಿಂಗ್ ರಸ್ತೆ ಸಾಗುವ ಕಡೆಗೆ ಹೊಸ ಟೌನ್ಶಿಪ್ಗಳನ್ನು ನಿರ್ಮಿಸಿ ಅಗತ್ಯ ಮೂಲಸೌಕರ್ಯ ಒದಗಿಸುವುದು, ರಸ್ತೆ, ರೈಲು ಮೊದಲಾದ ಸಂಪರ್ಕ ನೀಡುವುದು ನಮ್ಮ ಗುರಿಯಾಗಿದೆ. ಈ ಮೂಲಕ ಬೆಂಗಳೂರನ್ನು ವಿಶ್ವದರ್ಜೆಯ ಅತ್ಯುತ್ತಮ ನಗರವಾಗಿಸುವುದು ನಮ್ಮ ಕನಸು' ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು. ಅವರು ಇಂದು ಹೊಸಕೋಟೆಯ ರಾಷ್ಟ್ರಿಯ ಹೆದ್ದಾರಿಯ ಕೋಲಾರ ಜಂಕ್ಷನ್ ಹಾಗೂ ಚೆನ್ನೈ-ಬೆಂಗಳೂರು ಹೈವೇಯಲ್ಲಿ ಇಂದು ರೋಡ್ ಅಲೈನ್ಮೆಂಟ್ಗೆ ಸಂಬಂಧಿಸಿದಂತೆ ಪರಿಶೀಲನೆ ನಡೆಸಿ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು. ಹಾಗೆಯೇ ಆನೇಕಲ್, ಹೊಸೂರು ಕಡೆಗೆ ರಸ್ತೆ ವಿಸ್ತೀರ್ಣಗೊಳಿಸುವ ಕಾಮಗಾರಿಗೆ ಸಂಬಂಧಿಸಿದಂತೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

## ಪ್ರತಿಪಕ್ಷ ನಾಯಕನಿಗೆ ಸರ್ಕಾರಿ ಬಂಗಲೆ ನೀಡದ ಸರ್ಕಾರ!

• ಉದಯವಾಹಿನಿ, ಬೆಂಗಳೂರು

ಸರ್ಕಾರ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕಗೆ ಬೆಂಗಳೂರು ನಗರದಲ್ಲಿ ಇನ್ನೂ ಸರ್ಕಾರಿ ಬಂಗಲೆ ನೀಡಿಲ್ಲ. ಈಗಾಗಲೇ ಈ ಬಗ್ಗೆ ಅವರು 4 ಪತ್ರಗಳನ್ನು ಬರೆದಿದ್ದು, ಅಧಿಕಾರಿಗಳು ಮಾತ್ರ ಬಂಗಲೆ ಹಂಚಿಕೆ ಮಾಡಿಲ್ಲ.2023ರ ನವೆಂಬರ್‌ನಲ್ಲಿ ಬೆಂಗಳೂರಿನ ಪದ್ಮನಾಭನಗರ ಕ್ಷೇತ್ರದ ಬಿಜೆಪಿ ಶಾಸಕ ಆರ್. ಅಶೋಕ ಕರ್ನಾಟಕ ವಿಧಾನಸಭೆ ಪ್ರತಿಪಕ್ಷ ನಾಯಕನಾಗಿ ಆಯ್ಕೆಯಾದರು.ಆದರೆ ಆರು ತಿಂಗಳು ಕಳೆದರೂ ಸಹ ಶಿಷ್ಟಾಚಾರದ ಪ್ರಕಾರ ನೀಡಬೇಕಾದ ಸರ್ಕಾರಿ ಬಂಗಲೆ ನೀಡಿಲ್ಲ.

ಮುಖ್ಯಮಂತ್ರಿಗಳಿಗೆ, ಮುಖ್ಯ ಕಾರ್ಯದರ್ಶಿಗಳಿಗೆ ಸರ್ಕಾರಿ ಬಂಗಲೆ ನೀಡುವಂತೆ ಹಲವು ಸಂದರ್ಭದಲ್ಲಿ ಮನವಿ ಸಲ್ಲಿಕೆ ಮಾಡಲಾಗಿದೆ. ಆದರೆ ಇದುವರೆಗೂ ಬಂಗಲೆ ಹಂಚಿಕೆ ಮಾಡಿಲ್ಲ. ಸಚಿವರಿಗೆ ಆದ್ಯತೆಯ ಮೇರೆಗೆ ಸರ್ಕಾರ ಸರ್ಕಾರಿ ಬಂಗಲೆ ಹಂಚಿಕೆ ಮಾಡುತ್ತಿದೆ. ಆದರೆ ಪ್ರತಿಪಕ್ಷ ನಾಯಕರಿಗೆ ಶಿಷ್ಠಾಚಾರದ ಪ್ರಕಾರವಾಗಿಯೂ ಬಂಗಲೆ ಹಂಚಿಕೆ ಮಾಡುತ್ತಿಲ್ಲ. ಸರ್ಕಾರದ ಪರವಾಗಿ ಯಾರೂ ಸಹ ಈ ಕುರಿತು ಯಾವುದೇ ಹೇಳಿಕೆ ನೀಡಿಲ್ಲ. ಕಳೆದ ವರ್ಷದ ನವೆಂಬರ್‌ನಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ, ಈ ವರ್ಷದ ಫೆಬ್ರವರಿಯಲ್ಲಿ ಮುಖ್ಯಮಂತ್ರಿಗಳಿಗೆ ಸೇರಿ ಆರ್. ಅಶೋಕ ಸರ್ಕಾರಿ ಬಂಗಲೆಗಾಗಿ 4 ಪತ್ರವನ್ನು ಬರೆದಿದ್ದಾರೆ. ಕುಮಾರ ಕೃಪಾ ಪಶ್ಚಿಮ, ರೇಸ್ ವ್ಯೂ ಕಾಟೇಜ್ ಸೇರಿದಂತೆ ಈ ಬಂಗಲೆಗಳನ್ನು ಹಂಚಿಕೆ ಮಾಡಿ ಎಂದು ಪತ್ರದಲ್ಲಿ ಮನವಿ ಮಾಡಿದ್ದರು.ಸರ್ಕಾರಿ ಬಂಗಲೆ ಇಲ್ಲದ ಕಾರಣ ಜಯನಗರದಲ್ಲಿರುವ ತಮ್ಮ ಸ್ವಂತ ನಿವಾಸದಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ ಸಭೆಗಳನ್ನು ನಡೆಸಬೇಕಾಗಿದೆ. ಅಧಿಕಾರಿಗಳ ಜೊತೆ, ಶಾಸಕರ ಜೊತೆ ಸಭೆ ನಡೆಸುವುದು ಮಾತ್ರವಲ್ಲ, ರಾಜ್ಯದ ಬೇರೆ-ಬೇರೆ ಜಿಲ್ಲೆಗಳಿಂದ ಆಗಮಿಸುವ ಜನರನ್ನು ಭೇಟಿಯಾಗಲು ಸರ್ಕಾರಿ ನಿವಾಸ ಇಲ್ಲವಾಗಿದೆ ಎಂದು ಆರ್. ಅಶೋಕ ಹೇಳಿದ್ದಾರೆ.



### ಅಧಿಕಾರಿಗಳ ಸಭೆ ನಡೆಸಲು ಅನುಕೂಲ

ವಿಧಾನಸೌಧದ ಬಳಿಯ ಬಂಗಲೆಯನ್ನು ಹಂಚಿಕೆ ಮಾಡಿದರೆ ಸರ್ಕಾರಿ ಬಂಗಲೆಯಲ್ಲಿ ಅಧಿಕಾರಿಗಳ ಸಭೆ ನಡೆಸಲು ಅನುಕೂಲವಾಗುತ್ತದೆ. ಸರ್ಕಾರಿ ಬಂಗಲೆ ಹಂಚಿಕೆ ಯಂತಹ ತೀರ್ಮಾನವನ್ನು ಯಾವುದೇ ತಡ ಮಾಡದೇ ಕೈಗೊಳ್ಳಬೇಕು. ಆದರೆ ಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿಗಳು ಬೇಕೆಂದು ವಿಳಂಬ ಮಾಡುತ್ತಿದ್ದಾರೆ ಎಂದು ಆರ್. ಅಶೋಕ ಬೇಸರ ವ್ಯಕ್ತಪಡಿಸಿದ್ದಾರೆ.

# ಕೆಎಸ್‌ಆರ್‌ಟಿಸಿಯಿಂದ ಅಪಘಾತದಲ್ಲಿ ಮೃತಪಟ್ಟವರಿಗೆ 1 ಕೋಟಿ ವಿಮಾ


## ಕುಟುಂಬ ಕಲ್ಯಾಣ ಯೋಜನೆಯಡಿ ಸೇವೆಯಲ್ಲಿದ್ದು ಮೃತಪಟ್ಟಂತ 23 ಮಂದಿ ನೌಕರರ ಅವಲಂಭಿತರಿಗೆ ತಲಾ 10 ಲಕ್ಷ ಪರಿಹಾರ

• ಉದಯವಾಹಿನಿ, ಬೆಂಗಳೂರು

ದೇಶದಲ್ಲೇ ಪ್ರಥಮ ಎನ್ನುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಅಪಘಾತದಲ್ಲಿ ಮೃತರಾಗುವಂತ ನೌಕರರಿಗೆ 1 ಕೋಟಿ ವಿಮಾ ಪರಿಹಾರ ಘೋಷಣೆ ಮಾಡಿತ್ತು. ಅದರಂತೆ ಅಪಘಾತದಲ್ಲಿ ಮೃತಪಟ್ಟಂತ ನಾಲ್ವರು ಅವಲಂಭಿತರಿಗೆ ತಲಾ 1 ಕೋಟಿ ವಿಮಾ ಪರಿಹಾರವನ್ನು ವಿತರಿಸಲಾಗಿದೆ.

ಇದಲ್ಲದೇ ಕುಟುಂಬ ಕಲ್ಯಾಣ ಯೋಜನೆಯಡಿ ಸೇವೆಯಲ್ಲಿದ್ದು ಮೃತಪಟ್ಟಂತ 23 ಮಂದಿ ನೌಕರರ ಅವಲಂಭಿತರಿಗೆ ತಲಾ 10 ಲಕ್ಷ ಪರಿಹಾರ ನೀಡಿದೆ.

ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು, ನಿಗಮದ ವತಿಯಿಂದ ಕಾರ್ಮಿಕರ ಕಲ್ಯಾಣಕ್ಕಾಗಿ ಹಾಗೂ ಪ್ರಯಾಣಿಕರಿಗಾಗಿ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಿದೆ. ಮೃತಪಟ್ಟವರ ಜೀವ ಅಮೂಲ್ಯವಾದದ್ದು, ಅದನ್ನು ಮರಳಿ ತರಲಾಗುವುದಿಲ್ಲ. ಆದರೆ ಅವರ ಕುಟುಂಬದ ಆರ್ಥಿಕ ಸ್ವಾವಲಂಬನೆಗಾಗಿ ನಿಗಮವು ರೂಪಿಸಿರುವ ಯೋಜನೆ ದೂರದೃಷ್ಟಿಯನ್ನು ಹೊಂದಿರುವುದಾಗಿ ತಿಳಿಸಿದರು.



ಈ ಮೊತ್ತವನ್ನು ಸದುಪಯೋಗ ಪಡಿಸಿಕೊಂಡು ಮಕ್ಕಳ ವಿದ್ಯಾಭ್ಯಾಸ ಹಾಗೂ ಮನೆ ಕಟ್ಟಿಕೊಳ್ಳಲು ಉಪಯೋಗಿಸಿಕೊಳ್ಳಿ, ಬೇರೆ ಇತರೆ ಎಲ್ಲೂ ಹಣ ಪೋಲು ಮಾಡದಂತೆ ಎಚ್ಚರವಹಿಸಲು ತಿಳಿಸಿದರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ಸಿಬ್ಬಂದಿಗಳ ಅವಲಂಭಿತರ ಜೀವನಕ್ಕೆ ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕರ್ತವ್ಯದಲ್ಲಿರುವಾಗ ಅಥವಾ ಕರ್ತವ್ಯದಲ್ಲಿಲ್ಲದ ಸಂದರ್ಭದಲ್ಲಿ ಅಪಘಾತದಿಂದ ಮೃತಪಟ್ಟ ಅಥವಾ ಅಂಗನ್ಯೂನತೆಗೆ ಒಳಗಾದಲ್ಲಿ ರೂ.1 ಕೋಟಿ ಅಪಘಾತ ವಿಮಾ ಪರಿಹಾರ ಒದಗಿಸುವ ಅಪಘಾತ ವಿಮಾ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಹೃದಯಾಘಾತ, ಕ್ಯಾನ್ಸರ್, ಸ್ಟ್ರೋಕ್ ಮತ್ತಿತರ ಕಾರಣಗಳಿಂದ ಮರಣವನ್ನಪ್ಪುವ ನೌಕರರ ಕುಟುಂಬದ ಅವಲಂಭಿತರು ಅನುಭವಿಸುವ ಕಷ್ಟಗಳನ್ನು ಗಮನಿಸಿ, ಅವರಿಗೆ ನೆರವಾಗಲು ಹೆಚ್ಚಿನ ಮೊತ್ತದ ಪರಿಹಾರವನ್ನು ನೀಡುವ ಸದುದ್ದೇಶದಿಂದ ಹಾಗೂ ವಿವಿಧ ಕಾರ್ಮಿಕ ಸಂಘಟನೆಗಳಿಂದ ಬೇಡಿಕೆ ಬಂದ ಹಿನ್ನಲೆಯಲ್ಲಿ ನೌಕರರ ಕುಟುಂಬ ಕಲ್ಯಾಣ ಯೋಜನೆಯಡಿ ನೀಡಲಾಗುತ್ತಿದ್ದ ಪರಿಹಾರ ಮೊತ್ತವಾದ ರೂ. 3 ಲಕ್ಷಗಳನ್ನು ದಿನಾಂಕ: 01.11.2023 ಜಾರಿಗೆ ಬರುವಂತೆ ರೂ.10 ಲಕ್ಷಗಳಿಗೆ ಪರಿಹಾರ ಮೊತ್ತವನ್ನು ಹೆಚ್ಚಿಸಿ ಮರಣ ಪ್ರಕರಣಗಳಿಗೆ ಅನ್ವಯವಾಗುವಂತೆ ಜಾರಿಗೆ ತರಲಾಗಿರುತ್ತದೆ.

ನಿಗಮದ ಬಸ್ಸುಗಳು ಅಪಘಾತಕ್ಕೀಡಾದಾಗ, ನಿಗಮದ ಬಸ್ಸುಗಳಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕರು ದುರದೃಷ್ಟವಶಾತ್ ಮೃತಪಟ್ಟಲ್ಲಿ, ಮೃತ ಪ್ರಯಾಣಿಕರ ಅವಲಂಬಿತರಿಗೆ ಹೆಚ್ಚಿನ ಆರ್ಥಿಕ ನೆರವು ನೀಡುವ ಸದುದ್ದೇಶದಿಂದ ಪ್ರಯಾಣಿಕರ ಅಪಘಾತ ಪರಿಹಾರ ನಿಧಿ ಟ್ರಸ್ಟ್ ವತಿಯಿಂದ ಪ್ರಸ್ತುತ ನೀಡಲಾಗುತ್ತಿರುವ ಆರ್ಥಿಕ ಪರಿಹಾರ ಮೊತ್ತವನ್ನು ರೂ.3,00,000/- (ರೂ.ಮೂರು ಲಕ್ಷ ಮಾತ್ರ) ದಿಂದ ರೂ.10,00,000/- (ರೂ.ಹತ್ತು ಲಕ್ಷ ಮಾತ್ರ) ಗಳಿಗೆ ದಿನಾಂಕ: 01-01-2024 ರಿಂದ ಜಾರಿಗೆ ಬರುವಂತೆ ಹೆಚ್ಚಿಸಲಾಗಿದೆ.

ನಿಗಮದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳು ಶ್ರಮ ಜೀವಿಗಳಾಗಿದ್ದು ಅವರಿಗೆ ಸಲ್ಲಬೇಕಾದ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಿ ಕೊಡಬೇಕಾಗಿರುತ್ತದೆ. ಇಂದು ವಿತರಿಸಲಾಗಿರುವ ಪರಿಹಾರ ಮೊತ್ತವನ್ನು ಕುಟುಂಬ ವರ್ಗದವರು ಸಮರ್ಪಕವಾಗಿ ಬಳಸಿಕೊಂಡು ಕುಟುಂಬದ ಆರ್ಥಿಕ ಸ್ವಾವಲಂಬನೆ ಮತ್ತು ಆರೋಗ್ಯವನ್ನು ಕಾಪಾಡಿಕೊಳ್ಳಲಿ.

-ಶ್ರೀನಿವಾಸ್ ಗುಬ್ಬಿ, ಅಧ್ಯಕ್ಷ

### ರೂ.10.00 ಲಕ್ಷಗಳ ಅಪಘಾತ ಪರಿಹಾರ

ಈ ಪರಿಷ್ಕೃತ ಪರಿಹಾರ ಯೋಜನೆ ಅಡಿ ಇದುವರೆಗೂ ಓರ್ವ ಪ್ರಯಾಣಿಕರ ಅವಲಂಭಿತರಿಗೆ ರೂ.10.00 ಲಕ್ಷಗಳ ಪರಿಹಾರವನ್ನು ಒದಗಿಸಲಾಗಿದ್ದು, ಇಂದು 4 ಮೃತ ಪ್ರಯಾಣಿಕರ ಅವಲಂಭಿತರಿಗೆ ತಲಾ ರೂ.10.00 ಲಕ್ಷಗಳ ಅಪಘಾತ ಪರಿಹಾರ ಚೆಕ್ ನೀಡಲಾಯಿತು

**ಈ ದಿನದ ದರ** ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,216/Gram(24ct) ₹6,615/Gram(22ct) | ಬೆಳ್ಳಿ: ₹91.30/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ತನುವಿದಾನೆಂದಲ್ಲಿ ವಿಶ್ವನೆನಿಸಿ

ನಿಜಗುಣರ ಪರಮಾನುಭವ ಬೋಧೆಯ ಮಾತು. ಜೀವನು ಶರೀರಾಂತರ್ಗತ ಚೈತನ್ಯ. ಶರೀರವನ್ನು ಅರಿಯುವ ವನು. ಶರೀರವು ಸ್ಥೂಲ ಸೂಕ್ಷ್ಮ ಕಾರಣ ಎಂದು ಮೂರು ವಿಧ. ಪಂಚಭೂತಗಳ ಸಮ್ಮಿಶ್ರಾತ್ಮಕ ಪಂಚ ಜ್ಞಾನೇಂದ್ರಿಯ ಪಂಚ ಕರ್ಮೇಂದ್ರಿಯ ಪಂಚ ಪ್ರಾಣ ಪಂಚ ವಿಷಯ ಪಂಚ ಅಂತಃಕರಣ ಎಂಬ ಇಪ್ಪತ್ತೈದು ತತ್ತ್ವಾತ್ಮಕ ದೇಹ ಸ್ಥೂಲ ಶರೀರ. ಈ ಸ್ಥೂಲ ಶರೀರವೇ ತಾನೆನ್ನುವುದರಿಂದ ಜೀವನು ವಿಶ್ವ ಎನಿಸುತ್ತಾನೆ. ಪಂಚ ಜ್ಞಾನೇಂದ್ರಿಯ ಪಂಚ ಪ್ರಾಣ ಪಂಚ ವಿಷಯ ಮನಸ್ಸು ಹಾಗೂ ಬುದ್ಧಿ ಎಂಬ ಹದಿನೇಳು ತತ್ತ್ವಾತ್ಮಕ ದೇಹ ಸೂಕ್ಷ್ಮ ಶರೀರ. ಈ ಸೂಕ್ಷ್ಮ ದೇಹ ತಾನೆನ್ನುವುದರಿಂದ ಜೀವ ತೈಜಸ ಎನಿಸುವನು. ವಾಸನಾಯುಕ್ತ ಅಂತಃಕರಣಾವಚ್ಛಿನ್ನ ಚೈತನ್ಯ ಕಾರಣ ಶರೀರ. ಈ ಕಾರಣ ಶರೀರ ತಾನೆನ್ನುವುದರಿಂದ ಜೀವ ಪ್ರಾಜ್ಞ ಎನಿಸುವನು.

## ವಿನೋದ್ ರಾಜ್ ಆರೋಗ್ಯದಲ್ಲಿ ಏರುಪೇರು

• ಉದಯವಾಹಿನಿ, ಬೆಂಗಳೂರು

ಸ್ಯಾಂಡಲ್‌ವುಡ್ ನಟ ವಿನೋದ್ ರಾಜ್ ಅವರು ಅನಾರೋಗ್ಯಂದ ಆಸ್ಪತ್ರೆಗೆ ದಾಖಲಾಗಿದ್ದಾರೆ. ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ. ನಟ ವಿನೋದ್ ರಾಜ್ ಆರೋಗ್ಯದಲ್ಲಿ ಏರುಪೇರಾಗಿದ್ದು, ನೆಲಮಂಗಲದ ಆಸ್ಪತ್ರೆಗೆ ದಾಖಲಾಗಿದ್ದಾರೆ.ವಿನೋದ್ ರಾಜ್‌ಗೆ ಹರ್ನಿಯಾ ಅಪರೇಷನ್ ನಡೆಸಲಾಗುತ್ತದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಹರ್ನಿಯಾ ಎಂದರೇನು: ಪುರುಷರಲ್ಲಿ ಹರ್ನಿಯಾ ಉಂಟಾದಾಗ ಸಾಮಾನ್ಯವಾಗಿ ತೊಡೆ ಸಂದುಗಳಲ್ಲಿ ನೋವು ಕಾಣಿಸಿಕೊಳ್ಳುತ್ತದೆ ಹಾಗೂ ಮಹಿಳೆಯರಲ್ಲಿ ಹೊಕ್ಕಳಿನ ಜಾಗದಲ್ಲಿ ನೋವಾಗಬಹುದು. ಕೆಲವೊಂದು ಬಾರಿ ಅತಿಯಾದ ತೂಕ ಅಥವಾ ಹೆಚ್ಚಾದ ಕೆಮ್ಮು ಇದ್ದಾಗ ನಿಮ್ಮ ಹೊಟ್ಟೆಯ ಭಾಗಕ್ಕೆ ಬಹಳಷ್ಟು ಒತ್ತಡ ಬೀಳುತ್ತದೆ ಹಾಗೂ ಇದು ಹೊಕ್ಕಳು ಬಳ್ಳಿಯ ಹರ್ನಿಯಾವನ್ನು ಉಂಟುಮಾಡುತ್ತದೆ. ಹರ್ನಿಯಾ ಕೂಡ ಒತ್ತಡ ಹಾಗೂ ಸ್ನಾಯುಗಳ ಸೆಳೆತದಿಂದ ಉಂಟಾಗಬಹುದು. ಯಾವುದೇ ಜಾಗದಲ್ಲಿ ಒತ್ತಡ ಬಿದ್ದಾಗ ಅದು ಅಂಗಗಳನ್ನು ಹಾಗೂ ಅಂಗಾಂಶಗಳನ್ನು ಬಹಳ ಮೃದುವಾಗಿರುವ ಅಥವಾ ದುರ್ಬಲವಾಗಿರುವ ಜಾಗಕ್ಕೆ ತಳ್ಳುತ್ತವೆ. ಕೆಲವೊಬ್ಬರಿಗೆ ಸ್ನಾಯುಗಳ ದುರ್ಬಲತೆ ಹುಟ್ಟಿದಾಗಿನಿಂದಲೂ ಇರುತ್ತದೆ, ಅಂತಹ ವ್ಯಕ್ತಿಗಳಿಗೆ ಮುಂದೆ ತಮ್ಮ ಜೀವನದಲ್ಲಿ ಹರ್ನಿಯಾ ಸಮಸ್ಯೆ ಉಂಟಾಗಬಹುದು

## ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಮತ್ತೋರ್ವ ಮಹಿಳೆಯ ನೆರಳು

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಕೇಸ್ ನಲ್ಲಿ ಇದುವರೆಗೆ 13 ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ. ಇದೀಗ ಪ್ರಕರಣಕ್ಕೆ ಟ್ವಿಸ್ಟ್ ಅಂದ್ರೆ, ಆರೋಪಿಗಳ ಸಂಖ್ಯೆ 17 ಕ್ಕೇರಿಕೆಯಾಗಿದೆ. ಹೌದು. ಈ ಪ್ರಕರಣದಲ್ಲಿ ಓರ್ವ ಮಹಿಳೆ ಸೇರಿದಂತೆ ಮತ್ತೆ ನಾಲ್ವರು ಭಾಗಿಯಾಗಿರುವುದು ಖಚಿತವಾಗಿದೆ. ಜಗ್ಗು ಅಲಿಯಾಸ್ ಜಗದೀಶ್, ಅನು, ರವಿ, ರಾಜು ಎಂಬ ಆರೋಪಿಗಳು ಪರಾರಿಯಾಗಿದ್ದು, ಪೊಲೀಸರು ಬಲೆ ಬೀಸಿದ್ದಾರೆ. ಪ್ರಕರಣದಲ್ಲಿ ಭಾಗಿಯಾದ ಮತ್ತೋರ್ವ ಮಹಿಳೆ ಅನು ಯಾರು.. ಪ್ರಕರಣಕ್ಕೂ ಈಕೆಗೂ ಸಂಬಂಧವೇನು ಎಂಬುದು ತನಿಖೆಯಿಂದ ತಿಳಿದು ಬರಬೇಕಿದೆ. ರೇಣುಕಾಸ್ವಾಮಿ ಹತ್ಯೆ ಕೇಸ್ ನಲ್ಲಿ ಆರೋಪಿಗಳ ಸಂಖ್ಯೆ 17 ಕ್ಕೇರಿಕೆಯಾಗಿದ್ದು, ಉಳಿದ ನಾಲ್ವರಿಗಾಗಿ ಪೊಲೀಸರು ಶೋಧ ಕಾರ್ಯ ಆರಂಭಿಸಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ 13 ಮಂದಿ ಆರೋಪಿಗಳನ್ನು ಬಂಧಿಸಲಾಗಿದ್ದು, ಪವಿತ್ರಾ ಗೌಡ ಎ 1 ಆರೋಪಿ, ದರ್ಶನ್ ಎ 2 ಆರೋಪಿ ಯಾಗಿದ್ದಾರೆ. ಸದ್ಯ ಆರೋಪಿಗಳನ್ನು 6 ದಿನ ಪೊಲೀಸ್ ಕಸ್ಟಡಿಗೆ ನೀಡಿ ಕೋರ್ಟ್ ಆದೇಶ ಹೊರಡಿಸಿದೆ.

## ಪರೀಕ್ಷಾ ಕೇಂದ್ರಗಳ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ..!



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜೂ.14 ರಿಂದ ಎಸ್‌ಎಸ್‌ಎಲ್ಸಿ ಪರೀಕ್ಷೆ-2 ಆರಂಭವಾಗಲಿದ್ದು, ಪರೀಕ್ಷಾ ಕೇಂದ್ರಗಳ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಜೂ.14 ರಿಂದ 22 ರ ವರೆಗೆ ಎಸ್‌ಎಸ್‌ಎಲ್ಸಿ ಪರೀಕ್ಷೆಗಳು-2 ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ಆವರಣವನ್ನು ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 ರನ್ವಯ ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಆದೇಶಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಜೆರಾಕ್ಸ್, ಕಂಪ್ಯೂಟರ್, ಸೈಬರ್ ಸೆಂಟರ್‌ಗಳು ಕಾರ್ಯನಿರ್ವಹಿಸದಂತೆ ಮುಚ್ಚಲು ಆದೇಶಿಸಿದ್ದು, ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶ ನಿಷೇಧಿಸಲಾಗಿದೆ.

## 1008 ಪೂರ್ವ ಪ್ರಾಥಮಿಕ ಶಾಲೆ ಆರಂಭಕ್ಕೆ ರಾಜ್ಯ ಸರ್ಕಾರ ಗ್ರೀನ್ ಸಿಗ್ನಲ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮಕ್ಕಳ ಪೋಷಕರಿಗೆ ಸರ್ಕಾರ ಗುಡ್ ನ್ಯೂಸ್ ನೀಡಲಾಗಿದೆ. ಅದೇ ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳ ಆರಂಭಕ್ಕೆ ಗ್ರೀನ್ ಸಿಗ್ನಲ್ ನೀಡಿದೆ. ಹೀಗಾಗಿ 7 ಜಿಲ್ಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳು ಆರಂಭಗೊಳ್ಳಲಿದ್ದಾವೆ. ಈ ಕುರಿತಂತೆ ರಾಜ್ಯ ಸರ್ಕಾರದ ಆದೇಶ ಹೊರಡಿಸಿದ್ದು, ಪೂರ್ವ ಪ್ರಾಥಮಿಕ ಶಾಲೆ ಆರಂಭಕ್ಕೆ ರಾಜ್ಯ ಸರ್ಕಾರ ಗ್ರೀನ್ ಸಿಗ್ನಲ್ ನೀಡಿದೆ. 7 ಜಿಲ್ಲೆಗಳಲ್ಲಿ 1,008 ಪೂರ್ವ ಪ್ರಾಥಮಿಕ ಶಾಲೆಗಳು ಈ ವರ್ಷದಿಂದಲೇ ಆರಂಭಿಸಲು ಆದೇಶದಲ್ಲಿ ತಿಳಿಸಿದೆ. ಬಳ್ಳಾರಿ- 119 ಶಾಲೆಗಳು, ಬೀದರ್-98 ಶಾಲೆಗಳು, ಕೊಪ್ಪಳ-131 ಶಾಲೆಗಳು, ಕಲಬುರಗಿ-234 ಶಾಲೆಗಳು, ರಾಯಚೂರು- 190 ಶಾಲೆಗಳು, ವಿಜಯನಗರ- 142 ಶಾಲೆಗಳು, ಯಾದಗಿರಿಯಲ್ಲಿ 94 ಶಾಲೆಗಳು ಆರಂಭಗೊಳ್ಳಲಿವೆ.

## ಅಪ್ರಾಪ್ತರಿಂದ ಅಪಘಾತವಾದರೆ ವಾಹನ ಮಾಲೀಕರೇ ಪರಿಹಾರ ನೀಡಬೇಕು

• ಉದಯವಾಹಿನಿ, ಬೆಂಗಳೂರು

ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ಪಾಲಕರು ವಾಹನ ಚಲಾಯಿಸಲು ಅವಕಾಶ ಮಾಡಿ ಕೊಡುವ ಮುನ್ನ ಈ ಸುದ್ದಿಯನ್ನು ಒಮ್ಮೆ ಓದಿ. ವಾಹನ ಚಲಾಯಿಸಿ ಅಪಘಾತ ಉಂಟು ಮಾಡಿದರೆ, ವಾಹನದ ಮಾಲೀಕರು ಸಂಬಂಧಪಟ್ಟವರಿಗೆ ಪರಿಹಾರ ನೀಡಬೇಕೇ ಹೊರತು ವಿಮಾ ಕಂಪನಿಯಲ್ಲ ಎಂದು ಕರ್ನಾಟಕ ಹೈಕೋರ್ಟ್ ತೀರ್ಪು ನೀಡಿದೆ

# ಕೊಲೆ ಪ್ರಕರಣದಲ್ಲಿ ದರ್ಶನ್ ಬಂಧನ

## ■ ಪತ್ನಿ ವಿಜಯಲಕ್ಷ್ಮೀ ಬಳಿಕ ಅಮ್ಮನಿಂದಲೂ ದಚ್ಚುಗೆ ಶಾಕ್!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ದರ್ಶನ್‌ಗೆ ವಿರುದ್ಧ ಎಲ್ಲೆಡೆ ಆಕ್ರೋಶ**

ಸ್ಯಾಂಡಲ್‌ವುಡ್ ಸ್ಟಾರ್ ನಟ ದರ್ಶನ್, ಕೊಲೆ ಪ್ರಕರಣ ವೊಂದರಲ್ಲಿ ಬಂಧನವಾಗಿದ್ದಾರೆ. ನಟಿ ಪವಿತ್ರಾ ಗೌಡಗೆ ಅಶ್ಲೀಲ ಸಂದೇಶ ಕಳುಹಿಸಿದ ರೇಣುಕಾಸ್ವಾಮಿಯ ಕೊಲೆಯಲ್ಲಿ ದರ್ಶನ್ ಕೈವಾಡ ಇದೆ ಎಂಬ ಆರೋಪ ಕೇಳಿಬಂದಿದೆ. ದರ್ಶನ್ ಸೂಚನೆ ಕೊಟ್ಟಿದ್ದಕ್ಕೆ ಹಲ್ಲೆ ಮಾಡಿದೆವು ಎಂದು ಬಂಧಿತ ಆರೋಪಿಗಳು ತಪ್ಪೊಪ್ಪಿಕೊಂಡಿರುವ ಹಿನ್ನೆಲೆಯಲ್ಲಿ ದರ್ಶನ್ ರನ್ನು ಬಂಧಿಸಲಾಗಿದೆ.

ಅಲ್ಲದೆ, ಒಳಸಂಚು ನಡೆಸಿದ ಆರೋಪದ ಮೇಲೆ ಪವಿತ್ರಾ ಗೌಡಳನ್ನು ಬಂಧಿಸಲಾಗಿದೆ. ಆರೋಪಿಗಳನ್ನು ನ್ಯಾಯಾಲಯ 6 ದಿನಗಳ ಪೊಲೀಸ್ ಕಸ್ಟಡಿಗೆ ನೀಡಿದೆ.

ಈ ಪ್ರಕರಣದಿಂದ ಇಡೀ ಕನ್ನಡ ಚಿತ್ರರಂಗ ಶಾಕ್ ಆಗಿದೆ. ಅಲ್ಲದೆ, ಸ್ಟಾರ್ ನಟನೊಬ್ಬನ ಈ ಕೃತ್ಯದಿಂದ ಇಡೀ ರಾಜ್ಯವೇ ಆಘಾತಕ್ಕೆ ಒಳಗಾಗಿದೆ. ದರ್ಶನ್ ಅವರ ಈ ನಡೆಯಿಂದ ಕಂಗಾಲಾಗಿರುವ ಪತ್ನಿ ವಿಜಯಲಕ್ಷ್ಮೀ, ಇನ್‌ಸ್ಟಾಗ್ರಾಂನಲ್ಲಿ ದರ್ಶನ್‌ರನ್ನು ಅನ್‌ಫಾಲೋ ಮಾಡಿ, ಫೋಟೋಗಳನ್ನು ಡಿಲೀಟ್ ಮಾಡಿದ್ದಾರೆ. ದರ್ಶನ್‌ಗೆ ವಿರುದ್ಧ ಎಲ್ಲೆಡೆ ಆಕ್ರೋಶ ವ್ಯಕ್ತವಾಗುತ್ತಿದೆ. ಇದರ ನಡುವೆ ದರ್ಶನ್ ಅವರ ಕುಟುಂಬ ಸಹ ಈ ಪ್ರಕರಣದಿಂದ ಅಂತರ ಕಾಯ್ದುಕೊಂಡಿದೆ.

ದರ್ಶನ್ ಅವರ ತಾಯಿ ಮೀನಾ ತೂಗುದೀಪ್ ಮತ್ತು ಸಹೋದರ ದಿನಕರ್ ತೂಗುದೀಪ್ ಈ ಪ್ರಕರಣದ ಬಗ್ಗೆ ಪ್ರತಿಕ್ರಿಯೆ ನೀಡಲು ನಿರಾಕರಿಸಿದ್ದಾರೆ. ಮೈಸೂರಿನ ಸಿದ್ಧಾರ್ಥ ನಗರದಲ್ಲಿ ನೆಲೆಸಿರುವ ಮೀನಾ ತೂಗುದೀಪ್, ದರ್ಶನ್ ಬಗ್ಗೆ ಮಾತನಾಡಲು ಒಪ್ಪುತ್ತಿಲ್ಲ. ದಿನಕರ್ ಕೂಡ ನಿರಾಕರಿಸುತ್ತಿದ್ದಾರೆ ಎಂದು ಹೇಳಲಾಗಿದೆ.

**ಹಣ ಪಡೆದು ಶವ ವಿಲೇವಾರಿ ಜವಾಬ್ದಾರಿ ಹೊತ್ತಿದ್ದ ಗ್ಯಾಂಗ್, ದರ್ಶನ್‌ರ ಆಪ್ತನೊಟ್ಟಿಗೆ ಸಂಪರ್ಕದಲ್ಲಿತ್ತಂತೆ. ಶವ ವಿಲೇವಾರಿ ಹಾಗೂ ಕೊಲೆಯ ಆರೋಪ ಹೊರಲೆಂದು ಮುಂಚಿತವಾಗಿಯೇ 30 ಲಕ್ಷ ರೂಪಾಯಿ ಹಣವನ್ನು ದರ್ಶನ್ ಅವರಿಂದ ಈ ಗ್ಯಾಂಗ್ ಪಡೆದಿತ್ತು ಎನ್ನಲಾಗಿದೆ.**

ಇನ್ನು ದರ್ಶನ್ ಅವರು ಈಗಾಗಲೇ ತಾಯಿ ಜತೆ ಜಗಳ ಮಾಡಿಕೊಂಡಿದ್ದಾರೆ. ಹೀಗಾಗಿಯೇ ಮೀನಾ ತೂಗುದೀಪ್ ಅವರು ತಮ್ಮ ಕಿರಿಯ ಪುತ್ರ ದಿನಕರ್ ಕುಟುಂಬದ ಜತೆ ಇರುವುದಾಗಿ ತಿಳಿದುಬಂದಿದೆ. ತಾನು ಹುಟ್ಟಿ ಬೆಳೆದ ಮೈಸೂರಿನಲ್ಲಿರುವ ಮನೆಗೆ ದರ್ಶನ್ ಇತ್ತೀಚಿಗೆ ಒಮ್ಮೆಯೂ ಬಂದಿಲ್ಲ ಎಂದು ಹೇಳಲಾಗಿದೆ. ದರ್ಶನ್ ಅವರ ನಿರಂತರ ವಿವಾದಗಳಿಂದ ಇಡೀ ಕುಟುಂಬ ಬೇಸತ್ತಿರುವುದಾಗಿ ತಿಳಿದುಬಂದಿದೆ.


ಫೆಬ್ರವರಿ 27ರಿಂದ ಪವಿತ್ರಾ ಗೌಡಗೆ ರೇಣುಕಾ ಸ್ವಾಮಿ ಅಶ್ಲೀಲವಾಗಿ ಮೆಸೇಜ್ ಶುರು ಮಾಡಿದ್ದರು. ಅಕೌಂಟ್ ಬ್ಲಾಕ್ ಮಾಡಿದ್ದರೂ ಹೊಸ ಅಕೌಂಟ್‌ನಿಂದ ಮತ್ತದೇ ಮೆಸೇಜ್ ಕಳುಹಿಸುತ್ತಿದ್ದ. ಕಳೆದ ಶುಕ್ರವಾರ

**ಹಣ ಪಡೆದ ಮತ್ತೊಂದು ಗ್ಯಾಂಗ್ ರೇಣುಕಾ ಸ್ವಾಮಿಯ ಶವವನ್ನು ಕಾಮಾಕ್ಷಿಪಾಳ್ಯ ಪೊಲೀಸ್ ಠಾಣಾ ವ್ಯಾಪ್ತಿಯ ಸುಮನಹಳ್ಳಿ ಮೋರಿಗೆ ಬಿಸಾಡಿ ಹೋಗಿದ್ದಾರೆ. ಶವ ದೊರೆತ ಬಳಿಕ ತಾವೇ ಕೊಲೆ ಮಾಡಿರುವುದಾಗಿ ಹೇಳಿ ಠಾಣೆಗೆ ಒಪ್ಪಿಕೊಂಡಿದ್ದಾರೆ. ಕೊಲೆ ಮಾಡಲು ಹಣಕಾಸಿನ ವಿಚಾರವೇ ಕಾರಣ ಎಂದು ಹೇಳಿದ್ದಾರೆ. ಆದರೆ ಒಬ್ಬೊಬ್ಬರನ್ನೂ ಪ್ರತ್ಯೇಕವಾಗಿ ವಿಚಾರಣೆ ಮಾಡಿದಾಗ ಅವರ ಹೇಳಿಕೆಯಲ್ಲಿ ವ್ಯತ್ಯಾಸ ಕಂಡುಬಂದಿದೆ. ಬಳಿಕ ಪೊಲೀಸರು ತಮ್ಮದೇ ಶೈಲಿಯಲ್ಲಿ ವಿಚಾರಣೆ ಮಾಡಿದಾಗ ನಿಜಾಂಶ ಬಯಲಾಗಿದೆ.**

ಮರ್ಮಾಂಗದ ಫೋಟೋ ಕಳುಹಿಸಿ 'ದರ್ಶನ್‌ಗಿಂತ ನಾನೇನು ಕಡಿಮೆ ಬಾ' ಎಂದು ಹೇಳಿದ್ದ. ಈ ರೀತಿಯ ಟಾರ್ಚರ್ ಸಹಿಸಿಕೊಳ್ಳಲಾಗದೇ ಪವಿತ್ರಾ ಅವರು ತಮ್ಮ ಮನೆಗೆಲಸದವ ಪವನ್‌ಗೆ ಹೇಳಿದ್ದರು. ಈ ವಿಚಾರ ದರ್ಶನ್‌ಗೆ ತಿಳಿದಿದೆ. ರೇಣುಕಾ ಸ್ವಾಮಿಯನ್ನು ಚಿತ್ರದುರ್ಗದಿಂದ ಅಪಹರಣ ಮಾಡಿ ಕರೆದುಕೊಂಡು ಬಂದು ಶೆಡ್‌ನಲ್ಲಿ ಇರಿಸಿಕೊಂಡು ಹಲ್ಲೆ ಮಾಡಿದ್ದ ದರ್ಶನ್ ಮತ್ತು ಗ್ಯಾಂಗ್, ಹಲ್ಲೆಯಿಂದ ರೇಣುಕಾ ಸ್ವಾಮಿ ನಿಧನ ಹೊಂದಿದ ಬಳಿಕ ಆತಂಕಗೊಂಡು, ಶವವನ್ನು ಸಾಗಿಸುವ ದಾರಿ ಹುಡುಕಿದೆ. ಆಗ ಬೇರೆ ಗ್ಯಾಂಗ್ ಒಂದನ್ನು ಕರೆಸಿ ಅವರಿಗೆ ಶವ ಒಪ್ಪಿಸಿ, ಅದನ್ನು ವಿಲೇವಾರಿ ಮಾಡುವಂತೆ ಹೇಳಿ ಅವರಿಗೆ 30 ಲಕ್ಷ ರೂಪಾಯಿ ಹಣ ನೀಡಿದ್ದಾರೆ. ಈ ಹಣವನ್ನು ದರ್ಶನ್ ಅವರೇ ನೀಡಿದ್ದಾರೆ ಎನ್ನಲಾಗುತ್ತಿದೆ.

## ದರ್ಶನ್ ಕೇಸ್ ಬೆನ್ನಲ್ಲೇ ಜಗ್ಗೇಶ್ ಮಾರ್ಮಿಕ ಟ್ವೀಟ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಸ್ಯಾಂಡಲ್‌ವುಡ್ ನಟ ಜಗ್ಗೇಶ್ ಅವರು ಸೋಶಿಯಲ್ ಮೀಡಿಯಾದಲ್ಲಿ ಸಕ್ರಿಯರಾಗಿರುತ್ತಾರೆ. ಪ್ರಚಲಿತ ವಿಷಯಗಳ ಕುರಿತಾಗಿ ತಮ್ಮ ಅನಿಸಿಕೆ ಅಭಿಪ್ರಾಯಗಳನ್ನು ಹಂಚಿಕೊಳ್ಳುತ್ತಾರೆ. ಇದೀಗ ಮಾರ್ಮಿಕವಾಗಿ ಟ್ವೀಟ್ ಮಾಡಿ ಸುದ್ದಿಯಾಗಿದ್ದಾರೆ. ಸರ್ವ ಆತ್ಮಾನೇನಬ್ರಹ್ಮ.. ಸರ್ವ ಜೀವಿಯಲ್ಲಿ ದೇವರಿದ್ದಾನೆ. ಯಾರನ್ನು ಕೊಲ್ಲುವ ಹಕ್ಕು ಜೀವನಿಗಿಲ್ಲಾ, ಕರ್ಮ ಜೀವನನ ಹಿಂದೆ ಹಿಂಬಾಲಿಸುತ್ತದೆ. ಅವನ ಪಾಪಕರ್ಮ ಅವನ ಸುಡುತ್ತದೆ. ಕಲಿಯುಗದಲ್ಲಿ ದೇವರು ಕಲ್ಲಲ್ಲಾ. ಎಲ್ಲಾ ಕರ್ಮಕ್ಕು ತತಕ್ಷಣ ಪಲಿತಾಂಶ ಉಂಟು. ರಾಮನಾಗು ರಾವಣನಾದರೆ ಅಂತ್ಯ ಎಂದಿದೆ ಸನಾತನ ಕೃತಿ. ಮದಕ್ಕೆ ಕಾರುಣ್ಯದ ಅರಿವಿಲ್ಲಾ ಎಂದು ಟ್ವೀಟ್ ಮಾಡಿದ್ದಾರೆ.

ಜಗ್ಗೇಶ್ ಅವರು ತಮ್ಮ ಟ್ವೀಟ್‌ನಲ್ಲಿ ಎಲ್ಲಿಯೂ ಕೂಡ ದರ್ಶನ್ ಪ್ರಕರಣದ ಬಗ್ಗೆ ಮಾತನಾಡಿಲ್ಲ. ಜೊತೆಗೆ ದರ್ಶನ್ ಅವರ ಹೆಸರನ್ನೂ ಪ್ರಸ್ತಾಪಿಸಿಲ್ಲ. ನಿನ್ನೆಯ ಬೆಳವಣಿಗಳ ಬೆನ್ನಲ್ಲೇ ಜಗ್ಗೇಶ್ ಈ ರೀತಿ ಟ್ವೀಟ್ ಮಾಡಿರೋದು ಚರ್ಚೆ ಆಗ್ತಿದೆ. ದರ್ಶನ್ ಅವರಿಗೆ ಟಾಂಗ್ ಕೊಟ್ಟಿದ್ದಾರೆ ಎಂದು ಹೇಳಲಾಗುತ್ತಿದೆ.

## ಶ್ರೀ ಶ್ರೀನಿವಾಸ ಕಲ್ಯಾಣ ಪ್ರವಚನ

• ಉದಯವಾಹಿನಿ, ಬೆಂಗಳೂರು

ವಜ್ರಕ್ಷೇತ್ರ, ಶ್ರೀ ಅಭಯ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದ ವತಿಯಿಂದ ಜೂನ್ 13 ರಿಂದ 19ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಶ್ರೀ ಕೆ. ಪಿ. ವಾದಿರಾಜ ಆಚಾರ್ಯ ರಿಂದ ಶ್ರೀ ಶ್ರೀನಿವಾಸ ಕಲ್ಯಾಣ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ಅಭಯ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನ, 7ನೇ ಮುಖ್ಯರಸ್ತೆ 7ನೇ ಅಡ್ಡರಸ್ತೆ 3ನೇ ಬ್ಲಾಕ್, ತ್ಯಾಗರಾಜನಗರ ಬೆಂಗಳೂರು-28 ಸರ್ವರಿಗೂ ಆದರದ ಸುಸ್ವಾಗತ

## ಪೊಲೀಸ್ ಠಾಣೆಯಲ್ಲಿ ದರ್ಶನ್ ಫ್ಯಾನ್ಸ್ ದಂಡು; ಪೊಲೀಸರಿಂದ ಲಾಠಿ ಚಾರ್ಜ್

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಸೇರಿದಂತೆ 13 ಆರೋಪಿಗಳನ್ನು ಬಂಧಿಸಲಾಗಿದೆ. ಅವರನ್ನು ತಮ್ಮ ವಶಕ್ಕೆ ಪಡೆದಿರುವಂತ ಪೊಲೀಸರು, ವಿಚಾರಣೆ ನಡೆಸುತ್ತಿದ್ದಾರೆ. ಇಂದು ಅನ್ನಪೂರ್ಣೇಶ್ವರಿ ನಗರ ಠಾಣೆಗೆ ದರ್ಶನ್ ಅಭಿಮಾನಿಗಳ ದಂಡೇ ನೆರೆದಿದ್ದು, ಹೈಡ್ರಾಮಾವೇ ನಡೆದಿದೆ. ಹೀಗಾಗಿ ಪೊಲೀಸರಿಂದ ಅವರನ್ನು ನಿಯಂತ್ರಿಸೋದಕ್ಕೆ ಲಾಠಿ ಚಾರ್ಜ್ ಕೂಡ ಮಾಡಲಾಗಿದೆ.

ಬೆಂಗಳೂರಿಗೆ ಚಿತ್ರದುರ್ಗ ಮೂಲಕ ರೇಣುಕಾಸ್ವಾಮಿಯನ್ನು ಕಿಡ್ನ್ಯಾಪ್ ಮಾಡಿಕೊಂಡು ಬಂದು, ಆತ ಮೇಲೆ ಹಲ್ಲೆ ನಡೆಸಿ, ಹತ್ಯೆಗೈದು, ಮೋರಿಗೆ ಎಸೆದಂತ ಪ್ರಕರಣದಲ್ಲಿ ನಟ ದರ್ಶನ್ ಸೇರಿದಂತೆ 13 ಆರೋಪಿಗಳನ್ನು ಪೊಲೀಸರು



ಉದಯವಾಹಿನಿ ಚಿತ್ರ

ಬಂಧಿಸಿದ್ದರು. ನಿನ್ನೆ ಬೆಂಗಳೂರಿನ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ 6 ದಿನಗಳ ಕಾಲ ತಮ್ಮ ವಶಕ್ಕೆ ಪಡೆದಿದ್ದಾರೆ.

**ಈ ಹಿನ್ನಲೆಯಲ್ಲಿ ನಟ ದರ್ಶನ್ ನೋಡ ಬಂದು, ಭಾರೀ ಹೈಡ್ರಾಮಕ್ಕೆ ಕಾರಣವಾದ ಹಿನ್ನಲೆಯಲ್ಲಿ ಪೊಲೀಸರು ಅಭಿಮಾನಿಗಳನ್ನು ನಿಯಂತ್ರಿಸೋದಕ್ಕೆ ಅವರ ಮೇಲೆ ಲಾಠಿ ಚಾರ್ಜ್ ನಡೆಸಿ, ಪೊಲೀಸ್ ಠಾಣೆ ಬಳಿಯಿಂದ ಚದುರಿಸಿದ್ದಾರೆ.**

ಇದೀಗ ಬೆಂಗಳೂರಿನ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ 13 ಆರೋಪಿಗಳನ್ನು ತೀವ್ರ ವಿಚಾರಣೆ ನಡೆಸಲಾಗುತ್ತಿದೆ. ಈ ಸಂದರ್ಭದಲ್ಲಿ ತಮ್ಮ ನೆಚ್ಚಿನ ನಟನನ್ನು ನೋಡೋದಕ್ಕೆ ಪೊಲೀಸ್ ಠಾಣೆಯ ಮುಂದೆ ಫ್ಯಾನ್ಸ್ ಭಾರೀ ದಂಡೇ ನೆರೆದಿದೆ. ಈ ವೇಳೆಯಲ್ಲಿ ನೂಕು ನುಗ್ಗಲು, ಬಿಗುವಿನ ವಾತಾವರಣ ಕೂಡ ಪೊಲೀಸ್ ಠಾಣೆಯ ಮುಂದೆ ಏರ್ಪಟ್ಟಿದೆ.

## ಬಿಬಿಎಂಪಿ ಅಧಿಕಾರಿ, ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸನ್ಮಾನ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ಕೇಂದ್ರ ಕಛೇರಿನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಾದ ಎಸ್.ಆರ್.ಉಮಾಶಂಕರ್ ರವರು ಬಿಬಿಎಂಪಿ ಆಡಳಿತಗಾರರಾಗಿ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ರವರ ಸ್ವಮುಖದಲ್ಲಿ

ಬಿಬಿಎಂಪಿ ಅಧಿಕಾರಿ ಮತ್ತು ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮತ್ತು ಸಾಯಿಶಂಕರ್ ರವರು ಪುಷ್ಪಗುಚ್ಛ ನೀಡಿ,



ಉದಯವಾಹಿನಿ ಚಿತ್ರ

ಆತ್ಮೀಯವಾಗಿ ಸನ್ಮಾನಿಸಿದರು. ಅಧಿಕಾರಿ ಮತ್ತು ನೌಕರರ ಸಮನ್ವಯದಿಂದ ಕಾರ್ಯನಿರ್ವಹಿಸಿದರೆ ಮಾತ್ರ ಅಭಿವೃದ್ಧಿ ಸಾಧ್ಯ. ಅಧಿಕಾರಿ ಮತ್ತು ನೌಕರರ ಸಮಸ್ಯೆಗಳ ಪರಿಹಾರಕ್ಕೆ ಆಡಳಿತಗಾರರು ಮತ್ತು ಮುಖ್ಯ ಆಯುಕ್ತರ ಸಹಕಾರ ಬೆಂಬಲವಿರಬೇಕು.

ಬೆಂಗಳೂರುನಗರ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಲು ಅಧಿಕಾರಿ ಮತ್ತು ನೌಕರರು ಒಗ್ಗಾಟ್ಟಗಿ ಶ್ರಮಿಸುವುದಕ್ಕೆ ಸಂಘವು ಸಹಕಾರ ನೀಡಲಿದೆ. ಇದೇ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಾದ, ಉಮೇಶ್, ರುದ್ರೇಶ್, ಹೆಚ್.ಬಿ.ಹರೀಶ್ , ಹೆಚ್.ಕೆ.ತಿಪ್ಪೇಶ್,

ಶ್ರೀಧರ್ ಎನ್ ಸಂತೋಷ್ ಕುಮಾರ್, ಎನ್. ಮಂಜುನಾಥ್, ಕೆ.ನರಸಿಂಹ , ಕೆ.ಸಂತೋಷ್ ಕುಮಾರ್ ನಾಯ್ಕ್ ರವರು ಉಪಸ್ಥಿತರಿದ್ದರು.

## ಹರ್ಷಿಕಾ ಪೂಣಚ್ಚ, ಭುವನ್ ಮೇಲೆ ಹಲ್ಲೆ ಪ್ರಕರಣ

• ಉದಯವಾಹಿನಿ, ಬೆಂಗಳೂರು

ನಟಿ ಹರ್ಷಿಕಾ ಪೂಣಚ್ಚ ಮತ್ತು ಭುವನ್ ಪೊನ್ನಣ್ಣ ಮೇಲೆ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಳಿಸಿ ಹೈಕೋರ್ಟ್ ಆದೇಶ ಹೊರಡಿಸಿದೆ.

ಫರ್ವೇಜ್ ಅಲಿ ಫಹೀಮ್, ದನೀಶ್ ಅಲಿ ಫರ್ವೇಜ್, ಶಾಬಾಜ್ ಖಾನ್ , ಅಬ್ದುಲ್ ಕಪೂರ್ ಸೇರಿದಂತೆ ನಾಲ್ವರ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಳಿಸಿ ಹೈಕೋರ್ಟ್ ಆದೇಶ ಹೊರಡಿಸಿದೆ.

ಬೆಂಗಳೂರಿನ ಫ್ರೇಜರ್ ಟೌನ್ ಪ್ರದೇಶದ ಸಮೀಪವಿರುವ ಪುಲಿಕೇಶಿ ನಗರದ ಮಸೀದಿ ರಸ್ತೆಯಲ್ಲಿರುವ ಕರಾಮಾ ಎಂಬ ರೆಸ್ಟೋರೆಂಟ್ ಬಳಿ ತಮಗಾದ ಕೆಟ್ಟ ಅನುಭವವನ್ನು ನಟಿ ಹರ್ಷಿಕಾ ಪೂಣಚ್ಚ ಹಂಚಿಕೊಂಡಿದ್ದರು. ಹರ್ಷಿಕಾ ಹಾಗೂ ಭುವನ್ ಕೆಲವು ದಿನಗಳ ಹಿಂದೆ ಫ್ರೇಜರ್ ಟೌನ್ ಪ್ರದೇಶದ ಸಮೀಪವಿರುವ ಪುಲಿಕೇಶಿ ನಗರದ ಮಸೀದಿ ರಸ್ತೆಯಲ್ಲಿರುವ ಕರಾಮಾ ಎಂಬ ಹೋಟೆಲ್ಗೆ ಹೋಗಿ ಊಟ ಮಾಡಿ ಬರುವಾಗ ಆರೋಪಿಗಳು ಸುಖಾ ಸುಮ್ಮನೆ ತಗಾದೆ ತೆಗೆದು ಜಗಳ ಮಾಡಿದ್ದರು. ಬಳಿಕ ಅವರ ಭಾಷೆಯಲ್ಲಿ ನಿಂದನೆ ಮಾಡಿ ಹಲ್ಲೆ ನಡೆಸಿದ್ದರು.

## ವರ್ಗಾವಣೆ ನಿರೀಕ್ಷೆಯಲ್ಲಿರುವ ರಾಜ್ಯದ ವಿಶೇಷ ಚೇತನ ಸರ್ಕಾರಿ ನೌಕರರಿಗೆ ಮುಖ್ಯ ಮಾಹಿತಿ..!

• ಉದಯವಾಹಿನಿ, ಬೆಂಗಳೂರು

ವಿಶೇಷ ಚೇತನ' ಸರ್ಕಾರಿ ನೌಕರರರ ವರ್ಗಾವಣೆ ಕುರಿತು ರಾಜ್ಯ ಸರ್ಕಾರ ಸುತ್ತೋಲೆಯೊಂದನ್ನು ಹೊರಡಿಸಿದೆ. ಅಂಗವಿಕಲ ವ್ಯಕ್ತಿಗಳ ಹಕ್ಕು (ಅಧಿನಿಯಮ) 2016ರ ಸೆಕ್ಷನ್ 20(5)ರನ್ವಯ ವಿಶೇಷ ಚೇತನ ನೌಕರರಿಗೆ ಮತ್ತು ವಿಶೇಷ ಚೇತನ ಅವಲಂಬಿತರ ಪಾಲನೆ ಪೋಷಣೆಯ ಜವಾಬ್ದಾರಿ ಹೊಂದಿರುವ ನೌಕರರಿಗೆ ಸಾಮಾನ್ಯ ಮತ್ತು ಪುನರಾವರ್ತಿತ ವರ್ಗಾವಣೆಗಳಿಂದ ವಿನಾಯಿತಿ ನೀಡುವುದು, ವರ್ಗಾವಣೆ ಮತ್ತು ಪದೋನ್ನತ್ತಿಯ ನಂತರದಲ್ಲಿ ಸ್ಥಳ ನಿಯುಕ್ತಿಯಲ್ಲಿ ಪ್ರಾಶಸ್ತ್ರ ನೀಡುವುದು, ನೇಮಕಾತಿ ನಂತರದಲ್ಲಿ ನೀಡುವ ಆರಂಭಿಕ ಸ್ಥಳ ನಿಯುಕ್ತಿಯನ್ನು ಅವರ



ವಾಸಸ್ಥಳದ ಹತ್ತಿರದ ಸ್ಥಳಕ್ಕೆ ನೀಡುವುದನ್ನು ಒಳಗೊಂಡಂತೆ, ಅವರು ಘನತೆಯಿಂದ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ ವರ್ಗಾವಣೆ ಮತ್ತು ಸ್ಥಳನಿಯುಕ್ತಿ ನಿಯಮಗಳನ್ನು ರೂಪಿಸುವುದು ಅಗತ್ಯವಾಗಿರುತ್ತದೆ.

ಆದ್ದರಿಂದ ವಿಶೇಷ ಚೇತನ ನೌಕರರ ವರ್ಗಾವಣೆಗಳನ್ನು ನಿಯಂತ್ರಿಸಲು ಸರ್ಕಾರವು 2016ರ ಕಾಯ್ದೆಯ ಅಂಶಗಳನ್ನಯ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಉಲ್ಲೇಖ 1ರ ಸರ್ಕಾರಿ ಆದೇಶಕ್ಕೆ ಈ ಕೆಳಕಂಡ ಅಂಶಗಳನ್ನು ಸೇರ್ಪಡೆಗೊಳಿಸಿ ಆದೇಶಿಸಿಲಾಗಿದೆ.

## ಪುನರಚನೆಯಾಯ್ತು ಉನ್ನತ ಶಿಕ್ಷಣ ಪರಿಷತ್, ಯಾರಿಗೆಲ್ಲಾ ಅವಕಾಶ

• ಉದಯವಾಹಿನಿ, ಬೆಂಗಳೂರು





ಉದಯವಾಹಿನಿ ಚಿತ್ರ

**ಸದಸ್ಯರನ್ನು ನೇಮಿಸಿರುವ ಆದೇಶ**

ಕರ್ನಾಟಕದಲ್ಲಿ ವಿಶ್ವವಿದ್ಯಾನಿಲಯಗಳು ಸೇರಿದಂತೆ ಉನ್ನತ ಶಿಕ್ಷಣದ ಬೇಕು ಬೇಡಗಳು, ವರ್ಷದ ಯೋಜನೆ, ಕಾರ್ಯಕ್ರಮ, ಅನುಷ್ಠಾನದ ಕುರಿತು ಪರಾಮರ್ಶೆ ಮಾಡುವ ಕನಾರ್ಕ ಉನ್ನತ ಶಿಕ್ಷಣ ಪರಿಷತ್ ಅನ್ನು ಪುನರ್ ರಚಿಸಲಾಗಿದೆ.

ಕನ್ನಡ ಹಂಪಿ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಹಿ.ಶಿ..ಬೋರಲಿಂಗಯ್ಯ ಸಹಿತ ಹಲವರನ್ನು ನಾಮ ನಿರ್ದೇಶನ ಮಾಡಿ ಆದೇಶ ಹೊರಡಿಸಲಾಗಿದೆ. ಉನ್ನತ ಶಿಕ್ಷಣ ಇಲಾಖೆಯ ಅಧೀನ ಕಾರ್ಯದರ್ಶಿಯಾಗಿರುವ ಕೆ.ಮಂಜುನಾಥ ಅವರು ಪರಿಷತ್‌ಗೆ ಹತ್ತು ಮಂದಿ ಸದಸ್ಯರನ್ನು ನೇಮಿಸಿರುವ ಆದೇಶ ಹೊರಡಿಸಿದ್ದಾರೆ.

ಸಮಿತಿಗೆ ಬೋರಲಿಂಗಯ್ಯ ಅವರೊಂದಿಗೆ ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ವಿಶ್ರಾಂತ ಕುಲಪತಿ ಪ್ರೊ. ಕರಿಸಿದ್ದಪ್ಪ, ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಟಿ.ಡಿ.ಕೆಂಪರಾಜು, ಕರ್ನಾಟಕ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಸಚಿವ ಪ್ರೊ.ಎಸ್.ಎ.ಪಾಟೀಲ್. ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಸಚಿವರಾದ ಪ್ರೊ.ಆರ್.ಸುನಂದಮ್ಮ, ಹಂಪಿ ಕನ್ನಡ ವಿವಿಯ ವಿಶ್ರಾಂತ ಪ್ರಾಧ್ಯಾಪಕ ಪ್ರೊ. ರಹಮತ್ ತರೀಕೆರೆ, ಬೆಂಗಳೂರು ಕ್ರೈಸ್ ಕಾಲೇಜಿನ ನಿವೃತ್ತ ಪ್ರಾಧ್ಯಾಪಕೊ ಪ್ರೊ. ತೆರೇಸಾ ಮಿಥಿಲಾ.

ಬೆಂಗಳೂರಿನ ರಾಜರಾಜೇಶ್ವರ ನಗರಿ ನಿವಾಸಿ. ನಿವೃತ್ತ ಪ್ರಾಧ್ಯಾಪಕರಿ ಪ್ರೊ. ಎನ್.ನಂದಿನಿ, ದಾವಣಗೆರೆ ಎಆರ್ ಜಿ ಕಲಾ ಮತ್ತು ವಾಣಿಜ್ಯ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಪ್ರೊ. ಮಲ್ಲಿಕಾರ್ಜುನ ಹಲಸಂಗಿ ಹಾಗೂ ಬೆಂಗಳೂರಿನ ನಿವೃತ್ತ ಪ್ರಾಧ್ಯಾಪಕ ಡಾ.ಯತಿರಾಜುಲು ನಾಯ್ಡು ಅವರನ್ನು ನೇಮಿಸಲಾಗಿದೆ.

# ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಪ್ರಯಾಣ ದರ ಹೆಚ್ಚಳಕ್ಕೆ ಸಿದ್ಧತೆ

## ■ ಶಕ್ತಿ ಯೋಜನೆ ಸೇರಿದಂತೆ ಹಲವಾರು ಕಾರಣಗಳನ್ನು ಮುಂದಿಟ್ಟು ಬೆಲೆ ಏರಿಕೆ ಮಾಡಲು ಸಾರಿಗೆ ನಿಗಮಗಳು ಆಗ್ರಹ

• ಉದಯವಾಹಿನಿ, ಬೆಂಗಳೂರು





ಉದಯವಾಹಿನಿ ಚಿತ್ರ

**ಸಚಿವ ರಾಮಲಿಂಗಾ ರೆಡ್ಡಿ ಹೇಳಿಕೆ**

ಲೋಕಸಭಾ ಚುನಾವಣೆ ಪೂರ್ಣಗೊಂಡಿದ್ದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ಪ್ರಯಾಣ ದರ ಏರಿಸಲು ಸರ್ಕಾರದ ಬಾಗಿಲು ತಟ್ಟಿದೆ. ಕನಿಷ್ಠ ಶೇ.10-15ರಷ್ಟು ಹೆಚ್ಚಳ ಮಾಡುವಂತೆ ಬೇಡಿಕೆ ಸಲ್ಲಿಸುವ ನಿರೀಕ್ಷೆ ಇದೆ. ಮಹಿಳೆಯರಿಗೆ ಉಚಿತ ಪ್ರಯಾಣ ಕಲ್ಪಿಸಿರುವ ಶಕ್ತಿ ಯೋಜನೆ ಸೇರಿದಂತೆ ಹಲವಾರು ಕಾರಣಗಳನ್ನು ಮುಂದಿಟ್ಟು ಬೆಲೆ ಏರಿಕೆ ಮಾಡಲು ಸಾರಿಗೆ ನಿಗಮಗಳು ಆಗ್ರಹಪಡಿಸುವ ನಿರೀಕ್ಷೆ ಇದೆ. ಎಷ್ಟು ಪ್ರಯಾಣ ದರ ಹೆಚ್ಚಿಸಬೇಕು ಎಂದು ಕೆ ಎಸ್ ಆರ್ ಟಿಸಿ ಮತ್ತು ಸಾರಿಗೆ ನಿಗಮಗಳು ಪ್ರಸ್ತಾವನೆಗಳನ್ನು ಸಲ್ಲಿಸಿದ ನಂತರ ಸರ್ಕಾರ ಸೂಕ್ತ ನಿರ್ಧಾರಕ್ಕೈಗೊಳ್ಳಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ಬೆಲೆ ಏರಿಕೆ ಕುರಿತು ನಿರ್ಧಾರ ಕೈಗೊಳ್ಳಲು ಸರಕಾರ ನಿಯಂತ್ರಣಾ ಪ್ರಾಧಿಕಾರ ರಚಿಸಲೂ ಚಿಂತನೆ ನಡೆಸಿದೆ ಎಂದು ತಿಳಿದು ಬಂದಿದೆ.

2014ರಿಂದ ಬೆಂಗಳೂರು ಮಹಾ ನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಮತ್ತು 2020 ರಲ್ಲಿ ಕೆ ಎಸ್ ಆರ್ ಟಿಸಿ ಬಸ್ ಪ್ರಯಾಣ ದರ ಹೆಚ್ಚಳ ಮಾಡಿದ್ದೇ ಕೊನೆ. ನಂತರ ಪ್ರಯಾಣ ದರ ಹೆಚ್ಚಿಸಿಲ್ಲ. ಬಿಎಂಟಿಸಿ ಶೇ.18ರಷ್ಟು ಮತ್ತು ಸಾರಿಗೆ ಸಂಸ್ಥೆ ಶೇ.12ರಷ್ಟು ಹೆಚ್ಚಳ ಮಾಡಿದ್ದವು. ಕೊರೋನಾ ಕಾಡಿದ 2 ವರ್ಷಗಳು, ಕಳೆದ ವರ್ಷ ನಡೆದ ವಿಧಾನಸಭಾ ಚುನಾವಣೆ ಮತ್ತು ಈ ವರ್ಷ ನಡೆದ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಸ್ ಪ್ರಯಾಣ ದರ ಹೆಚ್ಚಿಸಲು ಆಯಾ ಕಾಲದ ಸರಕಾರಗಳು ಹಿಂದೇಟು ಹಾಕಿದ್ದವು. ಹೆಚ್ಚುತ್ತಿರುವ ಇಂಧನ ದರ, ನಿರ್ವಹಣಾ ವೆಚ್ಚ, ವೇತನ ಮತ್ತಿತರ ವೆಚ್ಚಗಳು ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿವೆ.

ಕಳೆದ ಆರ್ಥಿಕ ವರ್ಷಕ್ಕೆ ಸಾರಿಗೆ ಸಂಸ್ಥೆಗಳ ಸಾಲ 4000 ಕೋಟಿ ರೂ. ಮೀರಿದೆ. ಇದು ಸಾರಿಗೆ ನಿಗಮಗಳ ಕಥೆಯಾದರೆ 2020 ರಲ್ಲಿ ಬಸ್ ಪ್ರಯಾಣ ದರ ಹೆಚ್ಚಳ ಮಾಡಿದಾಗ ಕೆ ಎಸ್ ಆರ್ ಟಿಸಿ ನಿರ್ವಹಣಾ ವೆಚ್ಚ 3,950 ಕೋಟಿ ರೂ.ಗಳಷ್ಟಿದ್ದರೆ ಈಗ 4,828 ಕೋಟಿ ರೂ. ಗೆ ಏರಿದೆ. ಈ ಸಾಲದ ಜೊತೆಗೆ ವೇತನ ಹೆಚ್ಚಳದಿಂದ ನೌಕರರಿಗೆ ಕೊಡಬೇಕಾದ ಬಾಕಿ ಮೊತ್ತ ಸುಮಾರು 1900 ಕೋಟಿ ರೂ.ಗಳಷ್ಟಿದೆ ಎಂದು ಇಲಾಖೆ ಮೂಲಗಳು ತಿಳಿಸಿವೆ.

20 ಲಕ್ಷ ವಿದ್ಯಾರ್ಥಿಗಳು ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಪ್ರಯಾಣಿಸುತ್ತಿದ್ದು, ಕಳೆದ 13 ವರ್ಷಗಳಿಂದ ಬಸ್ ಪಾಸ್ ದರವನ್ನು ಹೆಚ್ಚಳ ಮಾಡಿಲ್ಲ. ಇಲಾಖೆಯ ಆರ್ಥಿಕ ಆರೋಗ್ಯವನ್ನು ಸುಸ್ಥಿತಿಯಲ್ಲಿಡಲು ಕಾಲ ಕಾಲಕ್ಕೆ ಪ್ರಯಾಣ ದರವನ್ನು ಹೆಚ್ಚಿಸುವುದು ಉತ್ತಮ ಮಾರ್ಗ. ಆದರೆ ಚುನಾವಣೆಗಳ ಹಿನ್ನೆಲೆಯಲ್ಲಿ ಹೆಚ್ಚಳ ಮಾಡಲಾಗಿಲ್ಲ ಎಂದು ಅಧಿಕಾರಿಯೊಬ್ಬರು ಅಭಿಪ್ರಾಯಪಡುತ್ತಾರೆ.

ಕೋವಿಡ್ ಕಾರಣದಿಂದಾಗಿ ಸಾರಿಗೆ ನಿಗಮಕ್ಕೆ ಹೊಸ ಬಸ್‌ಗಳನ್ನು ಸೇರ್ಪಡೆ ಮಾಡಲಾಗಿರಲಿಲ್ಲ. ಕಳೆದ ವರ್ಷ ಕೆಲವು ಬಸ್ ಗಳನ್ನು ಕೊಂಡುಕೊಳ್ಳಲಾಗಿದೆ. ಶಕ್ತಿಯೋಜನೆಯನ್ನು ಜಾರಿಗೊಳಿಸಿದ ನಂತರ ಸಾರಿಗೆ ಸಂಸ್ಥೆಗೆ ಹಣದ ಒಳ ಹರಿವು ನಿಂತು ಹೋಗಿದೆ. ಮಹಿಳಾ ಪ್ರಯಾಣಿಕರ ಬಸ್ ಪ್ರಯಾಣ ದರದ ಪ್ರಸ್ತಾವನೆಯನ್ನು ಇಲಾಖೆಗೆ ಸಲ್ಲಿಸಬೇಕು.

**ಕಳೆದ ವರ್ಷ ಶಕ್ತಿ ಯೋಜನೆ ಆರಂಭವಾದ ಜೂನ್ 11ರಿಂದ 223 ಕೋಟಿ ಟಿಕೆಟ್‌ಗಳನ್ನು ವಿತರಿಸಿದೆ. ಸಾರಿಗೆ ನಿಗಮಗಳು ಇದಕ್ಕಾಗಿ 5451 ಕೋಟಿ ರೂ.ಗಳನ್ನು ವೆಚ್ಚ ಮಾಡಿದೆ. ಉಚಿತ ಭಾಗ್ಯಗಳ ವೆಚ್ಚವನ್ನು ಸರಿದೂಗಿದಸಲು ಒಟ್ಟಾರೆ ಬಸ್ ಪ್ರಯಾಣ ದರ ಏರಿಕೆ ಖಚಿತ ಎಂದು ಸರಕಾರದ ಮೂಲಗಳು ಖಚಿತಪಡಿಸಿವೆ. ಇದರಿಂದ ಶೇ. 15ರಷ್ಟು ದರ ಏರಿಕೆಗೆ ಪ್ರಸ್ತಾವನೆ ಸಲ್ಲಿಸಬಹುದು ಎನ್ನಲಾಗುತ್ತಿದೆ.**

**ನಂತರ ಸಾರಿಗೆ ಇಲಾಖೆ ಆಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕು. ಹಣಕಾಸು ಇಲಾಖೆ ಆಡಿಟ್ ನಡೆಸಿದ ನಂತರ ಹಣ ಬಿಡುಗಡೆ ಮಾಡುತ್ತದೆ. ಅದುವರೆಗೂ ಸಾರಿಗೆ ನಿಗಮಗಳು ಕಾಯಲೇಬೇಕು. ಹೊಸ ಬಸ್‌ಗಳ ಖರೀದಿ ಮತ್ತು ಇತರ ಯೋಜನೆಗಳಿಗೆ ಸರಕಾರದಿಂದ ವಿಶೇಷ ಅನುದಾನದ ನಿರೀಕ್ಷೆಯಲ್ಲಿದೆ.**

# ಎಲ್ಲಾ ಜಿಲ್ಲಾ ಪಂಚಾಯತ್‌ನಲ್ಲೂ ಸುಧಾಕರ್‌ಗೆ ಲೀಡ್

## ವಿಧಾನಸಭಾ ಕ್ಷೇತ್ರದ ಎಲ್ಲಾ ಜಾತಿಯ ಮತದಾರರು ಸಹ ಲೋಕಸಭೆ ಚುನಾವಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಬೆಂಬಲ

• ಉದಯವಾಹಿನಿ ಚಿಕ್ಕಬಳ್ಳಾಪುರ


ಒಂದು ವರ್ಷದ ಹಿಂದೆ ನಡೆದ ವಿಧಾನಸಭಾ ಚುನಾವಣೆಯಲ್ಲಿ 10,642 ಮತಗಳ ಅಂತರದಿಂದ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಡಾ.ಕೆ. ಸುಧಾಕರ್ ಸೋಲು ಅನುಭವಿಸಿದ್ದರು.

ಈಗ ಲೋಕಸಭೆ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ 20,941 ಮತಗಳ ಮುನ್ನಡೆ ಪಡೆಯುವ ಮೂಲಕ ಸುಧಾಕರ್ ಸೋತ ನೆಲೆದಲ್ಲಿಯೇ ಮತ್ತೆ ಗೆಲುವು ಸಾಧಿಸಿದ್ದಾರೆ.

**ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಬೆಂಬಲ**

ಒಂದೇ ವರ್ಷದ ಹಿಂದೆ ಕಳೆಕೊಂಡ ಮತಗಳಿಗಿಂತ ಹೆಚ್ಚು ಮತಗಳನ್ನು ಪಡೆದಿದ್ದಾರೆ. ಚಿಕ್ಕಬಳ್ಳಾಪುರ ನಗರ ಸೇರಿದಂತೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಐದೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲಿ ಡಾ.ಕೆ.ಸುಧಾಕರ್ ಲೀಡ್ ಪಡೆದಿದ್ದಾರೆ. ಈ ಮೂಲಕ ಕ್ಷೇತ್ರದ ಬಿಜೆಪಿ ಕಾರ್ಯಕರ್ತರಲ್ಲಿ ಉತ್ಸಾಹ ಪುಟಿಯುವಂತೆ ಮಾಡಿದ್ದಾರೆ. ಚಿಕ್ಕಬಳ್ಳಾಪುರ ನಗರದಲ್ಲಿ 1,650, ತಿಪ್ಪೇನಹಳ್ಳಿ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ 3,400, ಮಂಡಿಕಲ್ಲು ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ 2,100, ನಂದಿ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ 5,700, ಮಂಚೇನಹಳ್ಳಿ 3,700 ಮತ್ತು ಮಂಚನಬಲೆ ಜಿ.ಪಂ ವ್ಯಾಪ್ತಿಯಲ್ಲಿ 4,400 ಮತಗಳ ಮುನ್ನಡೆಯನ್ನು ಸುಧಾಕರ್ ಪಡೆದಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮೊದಲ ಸುತ್ತಿನಿಂದ ಕೊನೆಯ ಸುತ್ತಿನವರೆಗೂ ಕಾಂಗ್ರೆಸ್ ಅಭ್ಯರ್ಥಿ ಪ್ರದೀಪ್ ಈಶ್ವರ್ ಮುನ್ನಡೆ ಪಡೆದುಕೊಂಡಿದ್ದರು.

ಈ ಬಾರಿ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಮೊದಲ ಸುತ್ತಿನಿಂದ ಎಣಿಕೆ ಪೂರ್ಣವಾದ 30ನೇ ಸುತ್ತಿನವರೆಗೂ ಡಾ.ಕೆ.ಸುಧಾಕರ್ ಮುನ್ನಡೆ ಪಡೆದಿದ್ದಾರೆ. ಎಲ್ಲಾ ಸುತ್ತುಗಳಲ್ಲಿಯೂ ಅವರ ಮತಗಳ ಪ್ರಮಾಣ ಹೆಚ್ಚುತ್ತಲೇ ಇತ್ತು.



**ಜಾತಿ ಲೆಕ್ಕಾಚಾರಗಳೂ ಉಲ್ಟಾ ಪಲ್ಟಾ:** ಚಿಕ್ಕಬಳ್ಳಾಪುರ ನಗರದಲ್ಲಿ ಜಾತಿ ಆಧಾರಿತ ಮತಗಳ ಸಂಖ್ಯೆಯನ್ನು ಗಮನಿಸಿದರೆ ಕಾಂಗ್ರೆಸ್ ಮುನ್ನಡೆ ಪಡೆಯುತ್ತದೆ ಎನ್ನುವ ಲೆಕ್ಕಾಚಾರಗಳು ಇದ್ದವು. ಆದರೆ ಈ ಮಾತುಗಳು ಚಿಕ್ಕಬಳ್ಳಾಪುರ ನಗರವಷ್ಟೇ ಅಲ್ಲ ಇಡೀ ವಿಧಾನಸಭಾ ಕ್ಷೇತ್ರದಲ್ಲಿಯೇ ತಪ್ಪಾಗಿವೆ.

ಮುಸ್ಲಿಂ ಸಮುದಾಯದ ಬಾಹುಳ್ಯದ ಪ್ರದೇಶಗಳಲ್ಲಿ ಬಿಜೆಪಿಗಿಂತ ಕಾಂಗ್ರೆಸ್ ಗರಿಷ್ಠ ಮತಗಳನ್ನು ಪಡೆದಿದೆ. ಉಳಿದಂತೆ ಕೆಲವು ಬೂತ್‌ಗಳನ್ನು ಹೊರತುಪಡಿಸಿದರೆ ಬಿಜೆಪಿಗೆ ಎಲ್ಲಾ ಜಾತಿ, ಸಮುದಾಯಗಳ ಮತದಾರರು ಮನ್ನಣೆ ನೀಡಿರುವುದು ಕಂಡು ಬರುತ್ತದೆ. ಈ ಜಾತಿಯ ಮತದಾರರು ಈ ವಾರ್ಡ್‌ಗಳಲ್ಲಿ, ಈ ಗ್ರಾಮಗಳಲ್ಲಿ ಹೆಚ್ಚಿದ್ದಾರೆ. ಅವರು ಕಾಂಗ್ರೆಸ್‌ಗೆ ಮತ ನೀಡುತ್ತಾರೆ ಎಂದು ಖಚಿತವಾಗಿ ಹೇಳುತ್ತಿದ್ದ ಕಡೆಗಳಲ್ಲಿಯೂ ಬಿಜೆಪಿ ಲೀಡ್ ಪಡೆದಿದೆ.

**ಜೆಡಿಎಸ್ ಮತಗಳು ಬಿಜೆಪಿಗೆ**

ಕಳೆದ ವಿಧಾನಸಭೆ ಚುನಾವಣೆಯ ಅಂತಿಮ ಕ್ಷಣದಲ್ಲಿ ಬಿಜೆಪಿ ಅಭ್ಯರ್ಥಿ ಡಾ.ಕೆ.ಸುಧಾಕರ್ ಅವರನ್ನು ಸೋಲಿಸಬೇಕು ಎಂದು ಜೆಡಿಎಸ್ ಮುಖಂಡರು ಕಾಂಗ್ರೆಸ್‌ಗೆ ಮತ ನೀಡಿದರು. ಜೆಡಿಎಸ್ 19 ಸಾವಿರ ಮತಗಳನ್ನು ಪಡೆಯಲಷ್ಟೇ ಸಾಧ್ಯವಾಗಿತ್ತು. ಈ ಬಾರಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಪರಿಣಾಮ ಜೆಡಿಎಸ್ ಮತಗಳು ಬಿಜೆಪಿಗೆ ದಕ್ಕಿದವು. ಜೊತೆಗೆ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಬೇಸರಗೊಂಡ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಸಹ ಬಿಜೆಪಿಗೆ ಮತ ನೀಡಿದ್ದಾರೆ ಎನ್ನುವ ಮಾತು ಚಿಕ್ಕಬಳ್ಳಾಪುರ ರಾಜಕಾರಣದಲ್ಲಿ ಜೋರಾಗಿದೆ.

> ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಎಲ್ಲಾ ಜಾತಿಯ ಮತದಾರರು ಸಹ ಲೋಕಸಭೆ ಚುನಾವಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಬೆಂಬಲಿಸಿದ್ದಾರೆ. ಡಾ.ಕೆ.ಸುಧಾಕರ್ ಅವರು ಶಾಸಕ ಸಚಿವರಾಗಿದ್ದ ಅವಧಿಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರ ಹೆಚ್ಚು ಅಭಿವೃದ್ಧಿ ಹೊಂದಿತು. ಇದು ಜನರ ಮನಸ್ಸಿನಲ್ಲಿರುವ ಪರಿಣಾಮ ಹೆಚ್ಚು ಮತಗಳು ದೊರೆತವು
> –ಡಿ.ಎಸ್.ಆನಂದರೆಡ್ಡಿ ಬಾಬು, ನಗರಸಭೆ ಮಾಜಿ ಅಧ್ಯಕ್ಷ

**ಜಿಲ್ಲಾ ಪಂಚಾಯಿತಿ ಚುನಾವಣೆಗೆ ಬಲ:** ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಎಲ್ಲಾ ಜಿ.ಪಂಗಳಲ್ಲಿ ಬಿಜೆಪಿ ಲೀಡ್ ಪಡೆದಿರುವುದು ಮುಂಬರುವ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಪಕ್ಷವು ಪ್ರಾಬಲ್ಯಗಳಿಸುವ ಸೂಚನೆ ಎಂದು ಬಿಜೆಪಿ ಮುಖಂಡರು ಪ್ರತಿಪಾದಿಸುತ್ತಿದ್ದಾರೆ. ಮುಂದೆ ನಡೆಯುವ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳ ಬಗ್ಗೆ ಪಕ್ಷದ ಕಾರ್ಯಕರ್ತರಲ್ಲಿ ವಿಶ್ವಾಸವನ್ನು ಹೆಚ್ಚಿಸಿದೆ.

ಮಂಚೇನಹಳ್ಳಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬಿಜೆಪಿಗೆ ಲೀಡ್ ದೊರೆಯುವ ಸಾಧ್ಯತೆ ಕಡಿಮೆ ಎಂದೇ ವಿಶ್ಲೇಷಿಸಲಾಗುತ್ತಿತ್ತು. ಆದರೆ ಮಂಚೇನಹಳ್ಳಿಯನ್ನು ತಾಲ್ಲೂಕು ಕೇಂದ್ರ ಮಾಡಲು ಕಾರಣಕರ್ತರಾದ ಡಾ.ಕೆ.ಸುಧಾಕರ್ ಅವರಿಗೆ ಅಲ್ಲಿನ ಮತದಾರರು ಸಹ ಉತ್ತಮವಾಗಿ ಮನ್ನಣೆ ನೀಡಿದ್ದಾರೆ.

---

# ನೀರಿನ ಸಮಸ್ಯೆ ನಡುವೆ ಹುಲುಸಾದ ಕಬ್ಬು

• ಉದಯವಾಹಿನಿ ಮಾಲೂರು

ತಾಲ್ಲೂಕಿನ ನಿದರಮಂಗಲ ಗ್ರಾಮದ ರೈತ ನಾಗಪ್ಪ ಕೋಸು, ಟೊಮೆಟೊ, ಆಲೂಗಡ್ಡೆ ಬೆಳೆದು ಕೈಸುಟ್ಟುಕೊಂಡಿದ್ದರು. ಹಾಕಿದ ಬಂಡವಾಳವೂ ಹಿಂತಿರುಗದೇ ನಿರಾಶರಾಗಿದ್ದರು. ಆದರೆ, ಈಚೆಗೆ ಕಬ್ಬು ಬೆಳೆದು ಲಾಭದತ್ತ ಮುಖಮಾಡಿದ್ದಾರೆ.

ತಮ್ಮ 30 ಗುಂಟೆ ಜಮೀನಿನಲ್ಲಿ ಕಬ್ಬು ಬೆಳೆದಿರುವ ಅವರು ಉತ್ತಮ ಇಳುವರಿ ಪಡೆಯುವ ಜತೆಗೆ ಉತ್ತಮ ಬೆಲೆಗೂ ಮಾರಾಟ ಮಾಡಿ ಯಶಸ್ವಿ ಕೃಷಿಕರಾಗಿದ್ದಾರೆ. ಈ ಹಿಂದೆ ಕೋಸು, ಟೊಮೊಟೊ, ಆಲೂಗಡ್ಡೆ ಬೆಳೆಗಳಿಗೆ ಹೆಚ್ಚು ಬಂಡವಾಳ ಹಾಕಿ, ಸಮರ್ಪಕ ಬೆಲೆ ಸಿಗದೇ ಕೈಸುಟ್ಟುಕೊಂಡಿದ್ದ ನಾಗಪ್ಪ ಅವರು ಇದೀಗ ಕಬ್ಬು ಬೆಳೆದು ಆರ್ಥಿಕವಾಗಿ ಚೇತರಿಸಿಕೊಳ್ಳುತ್ತಿದ್ದಾರೆ.

30 ಗುಂಟೆ ಕಬ್ಬು ಬೆಳೆಗೆ 1 ಲಕ್ಷ ಖರ್ಚು ಮಾಡಿದ್ದೇನೆ. ಇದೀಗ ಉತ್ತಮ ಇಳುವರಿ ಪಡೆದು, 4 ಲಕ್ಷಕ್ಕೆ ಮಾರಾಟ ಮಾಡಿದ್ದೇನೆ. ಹಾಕಿದ ಬಂಡವಾಳ 1 ಲಕ್ಷ ಖರ್ಚು ತೆಗೆದು,


ಉದಯವಾಹಿನಿ ಚಿತ್ರ

3 ಲಕ್ಷ ಲಾಭ ಪಡೆದಿದ್ದೇನೆ ಎನ್ನುತ್ತಾರೆ ರೈತ ನಾಗಪ್ಪ. ಮಾಲೂರು ಭಾಗದ ರೈತರು ಕೃಷಿ ಚಟುವಟಿಕೆಗಳಿಗೆ ಮಳೆ ಆಧಾರಿತ ಇಲ್ಲವೇ ಕೊಳವೆ ಬಾವಿಯ ನೀರಿಗೆ ಅವಲಂಬಿತರಾಗಿದ್ದಾರೆ.

ಕಬ್ಬು ಬೆಳೆಗೆ ಹೆಚ್ಚು ನೀರು ಅಗತ್ಯವಿರುವುದರಿಂದ ಬಹುತೇಕ ರೈತರು ಈ ಬೆಳೆ ಬೆಳೆಯಲು ಮುಂದಾಗುವುದಿಲ್ಲ. ಆದರೆ, ಕೊಳವೆ ಬಾವಿಯನ್ನೇ ಮಿತವಾಗಿ ಬಳಸಿ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡಿರುವ ನಾಗಪ್ಪ ಅವರು ಅಗತ್ಯವಿದ್ದಾಗ ಮಾತ್ರ ಕಬ್ಬಿಗೆ ನೀರು ಹಾಯಿಸುತ್ತಾರೆ.

> ಇದರಿಂದ ಅಂತರದಲ್ಲಿ ಬೆಳೆಗಳನ್ನು ಲಾಭದಾಯಕವಾಗಿ ಬೆಳೆಯಬಹುದು. ಮುಖ್ಯವಾಗಿ ಶೇ 40ರಷ್ಟು ಪ್ರಮಾಣದಲ್ಲಿ ನೀರು ಉಳಿತಾಯ ಮಾಡಬಹುದು ಎನ್ನುವುದು ನಾಗಪ್ಪ ಅವರ ಅನುಭವದ ಮಾತು. –ನಾಗಪ್ಪ, ರೈತ

ಆರಂಭದಲ್ಲಿ ಕಬ್ಬು ನಾಟಿ ಮಾಡಲು ಕುಪ್ಪೂರಿನಿಂದ ಸುಮಾರು 900 ಕಬ್ಬನ್ನು ಖರೀದಿಸಿದ್ದರು. 90 ಸೆಂ.ಮೀ. ಅಂತರದ ಬದು ಮತ್ತು ಸಾಲು ಮಾಡಿದ್ದಾರೆ. 60 ಮತ್ತು 90 ಸೆಂ.ಮೀ. ಸಾಲು ಮಾಡಿ ಎರಡು ಸಾಲು ನಾಟಿ ಮಾಡಿ, ಒಂದು ಸಾಲು ಹುಸಿಬಿಟ್ಟಿದ್ದಾರೆ.

---

# ಪುಂಡ ಪೋಕರಿಗಳಿಗೆ 'ಕೋಲಾರಮ್ಮ ಪಡೆ' ಬಿಸಿ


• ಉದಯವಾಹಿನಿ ಕೋಲಾರ

ನಗರದ ಶಾಲಾ ಕಾಲೇಜುಗಳ ಬಳಿ ಅಲೆಯುತ್ತಾ ಹೆಣ್ಣು ಮಕ್ಕಳನ್ನು ಚುಡಾಯಿಸುವ ಪುಂಡ ಪೋಕರಿಗಳಿಗೆ ಕೋಲಾರ ಮಹಿಳಾ ಪೊಲೀಸರನ್ನು ಒಳಗೊಂಡ 'ಕೋಲಾರಮ್ಮ ಪಡೆ' ದುಃಸ್ವಪ್ನವಾಗಿ ಪರಿಣಮಿಸಿದೆ.

ಮಹಿಳಾ ಸರ್ಕಾರಿ ಕಾಲೇಜು, ಬಾಲಕಿಯರ ಸರ್ಕಾರಿ ಜೂನಿಯರ್ ಕಾಲೇಜು, ಅಂತರಗಂಗೆ ರಸ್ತೆ, ಟೇಕಲ್ ರಸ್ತೆಯ ಶಾಲಾ ಕಾಲೇಜು ಸೇರಿದಂತೆ ವಿವಿಧೆಡೆ ಪುಂಡ ಪೋಕರಿಗಳು ಹಾವಳಿ ಹೆಚ್ಚಾಗಿರುವ ಬಗ್ಗೆ ಸಾರ್ವಜನಿಕರಿಂದ ದೂರು ಬಂದ ಕಾರಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ನಾರಾಯಣ ಈ ಪಡೆ ರಚಿಸಿದ್ದಾರೆ.

ಈ ವರೆಗೆ ಸುಮಾರು 50ರಿಂದ 60 ಯುವಕರನ್ನು ಪೊಲೀಸರು ಠಾಣೆಗೆ ಕರೆಯಿಸಿ ಬಿಸಿ ಮುಟ್ಟಿಸಿ ಎಚ್ಚರಿಕೆ ನೀಡಿದ್ದಾರೆ. ಹಲವರ ಬೈಕ್‌ಗಳನ್ನು ವಶಕ್ಕೆ ಪಡೆದು ತಲೆ ಕೂದಲಿಗೆ ಕತ್ತರಿ ಹಾಕಿ ಕಳುಹಿಸಿದ್ದಾರೆ.

ಗಲ್‌ಪೇಟೆ, ನಗರ ಠಾಣೆ ಹಾಗೂ ಮಹಿಳಾ ಠಾಣೆಯ


ಉದಯವಾಹಿನಿ ಚಿತ್ರ

ಹತ್ತು ಮಹಿಳಾ ಪೊಲೀಸರನ್ನು 'ಕೋಲಾರಮ್ಮ ಪಡೆ'ಗೆ ನಿಯೋಜಿಸಲಾಗಿದೆ. ಅದಕ್ಕಾಗಿ ಇಬ್ಬರಿಗೆ ಒಂದರಂತೆ ದ್ವಿಚಕ್ರ ವಾಹನ ಕೊಡಿಸಲಾಗಿದೆ. ಶಾಸಕ ಕೊತ್ತೂರು ಮಂಜುನಾಥ್ ಅವರು ಸಿಎಸ್‌ಆರ್ ಅನುದಾನದಲ್ಲಿ ಐದು ದ್ವಿಚಕ್ರ ವಾಹನ ನೀಡಿದ್ದಾರೆ ಎಂದು ಎಂ.ನಾರಾಯಣ ತಿಳಿಸಿದರು. ಮಹಿಳಾ ಪೊಲೀಸರು ಬೆಳಿಗ್ಗೆ ಶಾಲಾ ಕಾಲೇಜು ಆರಂಭವಾಗುವ ಸಮಯದಲ್ಲಿ ಹಾಗೂ ಸಂಜೆ ಮುಚ್ಚುವ ಸಮಯದಲ್ಲಿ ಗಸ್ತು ತಿರುಗುತ್ತಾರೆ. ನಿತ್ಯ ಕಂಟ್ರೋಲ್ ರೂಮ್‌ಗೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಮಾಹಿತಿ ನೀಡುತ್ತಾರೆ.

---

# ಕಲ್ಯಾಣ ಚಾಲುಕ್ಯರ ಜಗದೇಕಮಲ್ಲನ ಶಿಲಾ ಶಾಸನ ಪತ್ತೆ


• ಉದಯವಾಹಿನಿ ತುಮಕೂರು

ಗದಗ ಜಿಲ್ಲೆ ಲಕ್ಕುಂಡಿಯ ಹಾಲುಗೊಂಡ ಬಸವೇಶ್ವರ ದೇವಾಲಯದಲ್ಲಿ ಕಲ್ಯಾಣ ಚಾಲುಕ್ಯರ ಜಗದೇಕಮಲ್ಲನಿಗೆ ಸೇರಿದ ಶಿಲಾ ಶಾಸನ ಪತ್ತೆಯಾಗಿದೆ.

ತುಮಕೂರು ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಎಂ.ಕೊಟ್ರೇಶ್, ದಾವಣಗೆರೆ ವಿ.ವಿ ಸಂಶೋಧನಾರ್ಥಿ ಜೆ.ಸುಧಾ ಸಂಶೋಧನೆ ನಡೆಸಿ ಶಾಸನ ಪತ್ತೆ ಮಾಡಿದ್ದಾರೆ.

**ಹಾಳು ಗೆಡವದಂತೆ ಎಚ್ಚರಿಕೆ**

ದೇವಾಲಯದ ಒಳಗೆ ನವರಂಗದ ಪೂರ್ವ ಭಾಗದ ತೊಲೆಯಲ್ಲಿ ಶಾಸನ ಕಂಡು ಬಂದಿದೆ. ದೇವಾಲಯದ ಪಶ್ಚಿಮಾಭಿಮುಖವಾಗಿದ್ದ ಭಿತ್ತಿನಲ್ಲಿ ಕಪ್ಪನೆ ಮೇಣದಲ್ಲಿ ಮುಚ್ಚಿಹೋಗಿದ್ದ ಶಾಸನವನ್ನು ಸಂಶೋಧಕರು ಪತ್ತೆ ಹಚ್ಚಿದ್ದಾರೆ. ಕಪ್ಪು ಮಿಶ್ರಿತ ನೀಲಿ ಛಾಯೆಯ ಬಳಪದ ಶಿಲೆಯಲ್ಲಿ ಈ ಶಾಸನ ಕೆತ್ತಲಾಗಿದೆ.


ಉದಯವಾಹಿನಿ ಚಿತ್ರ

18 ಸಾಲುಗಳನ್ನು ಹೊಂದಿರುವ ಶಾಸನವು ಕ್ರಿ.ಶ 1137–1147ರಲ್ಲಿ ಆಳ್ವಿಕೆ ಮಾಡಿದ್ದ ಕಲ್ಯಾಣ ಚಾಲುಕ್ಯರ ಜಗದೇಕಮಲ್ಲನಿಗೆ ಸೇರಿದೆ. ಶಾಸನದಲ್ಲಿ ಇಂದಿನ ಹಾಲುಗೊಂಡ ಬಸವೇಶ್ವರ ದೇವಾಲಯದ ಮೂಲ ರೂಪ ಗುರುತಿಸಬಹುದು. ಶಾಸನದಲ್ಲಿ ಅದನ್ನು ಹಾಳುಗೆಡವದಂತೆ ಎಚ್ಚರಿಕೆ ನೀಡಲಾಗಿದೆ. ದಾನ ದತ್ತಿಗಳ ವಿವರಣೆಗಳಿವೆ. ಕರ್ನಾಟಕದ ಶಾಸನಗಳ ಸಾಲಿಗೆ ಇದು ಒಂದು ಹೊಸ ಸೇರ್ಪಡೆ' ಎಂದು ಪ್ರೊ.ಎಂ.ಕೊಟ್ರೇಶ್ ತಿಳಿಸಿದ್ದಾರೆ.


---

# ಭಾವನಾತ್ಮಕ ವಿಚಾರ ಮುಂದಿಟ್ಟುಕೊಂಡು ನನ್ನನ್ನು ಸೋಲಿಸಿದರು

• ಉದಯವಾಹಿನಿ ಚನ್ನಪಟ್ಟಣ

ಭಾವನಾತ್ಮಕ ವಿಚಾರಗಳನ್ನು ಮುಂದಿಟ್ಟುಕೊಂಡು ನನ್ನನ್ನು ಸೋಲಿಸಲಾಯಿತು. ಇದು ನನ್ನನ್ನು ಸೋಲಿಸಲು ಬಿಜೆಪಿ ಹಾಗೂ ಜೆಡಿಎಸ್ ಮಾಡಿದ ತಂತ್ರ' ಎಂದು ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಬೇಸರ ಮಾಡಿಕೊಂಡರು.ಕೆಂಗಲ್ ಬಳಿಯ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಏರ್ಪಡಿಸಿದ್ದ ಮತದಾರರಿಗೆ ಕೃತಜ್ಞತಾ ಸಭೆಯಲ್ಲಿ ಅವರು ತಮ್ಮ ಸೋಲಿನ ವಿಮರ್ಶೆ ಮಾಡಿಕೊಂಡರು.

ನಾನು ಸಂಸದನಾಗಿ ಹನ್ನೊಂದು ವರ್ಷಗಳ ಕಾಲ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ. ಜನರ ಕಷ್ಟಗಳನ್ನು ಕೇಳಿ ಕೆಲಸ ಮಾಡಿದ್ದೇನೆ. ಎಲ್ಲಾ ವರ್ಗದ ಜನರ ಕಷ್ಟಗಳನ್ನು ಪರಿಹಾರ ಮಾಡುವಲ್ಲಿ ಕೆಲಸ ಮಾಡಿದ್ದೇನೆ. ಜೊತೆಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ನೀಡಿತ್ತು. ಇವೆಲ್ಲವೂ ನನ್ನ



ಉದಯವಾಹಿನಿ ಚಿತ್ರ

ಗೆಲುವಿಗೆ ಸಹಕಾರಿಯಾಗುತ್ತವೆ ಎಂದು ತಿಳಿದಿದ್ದೆ. ಆದರೆ ನನ್ನ ನಿರೀಕ್ಷೆ ಸುಳ್ಳಾಯಿತು' ಎಂದು ನಿರಾಸೆ ವ್ಯಕ್ತಪಡಿಸಿದರು. ಕಾರ್ಯಕರ್ತರು ಎದೆಗುಂದುವ ಅವಶ್ಯಕತೆ ಇಲ್ಲ.

ನಾನು ನಿಮ್ಮ ಜೊತೆ ಸದಾ ಇರುತ್ತೇನೆ. ಸಾಮಾನ್ಯ ಕಾರ್ಯಕರ್ತನಾಗಿ ಕಾರ್ಯನಿರ್ವಹಿಸುತ್ತೇನೆ. ಎಲ್ಲರೂ ಸೇರಿ ಪಕ್ಷ ಕಟ್ಟುವ ಕೆಲಸ ಮಾಡೋಣ' ಎಂದು ಧೈರ್ಯ ತುಂಬಿದರು. ಕಾರ್ಯಕರ್ತರಿಗೆ ಶಕ್ತಿ ತುಂಬುವ ಕೆಲಸ ಮಾಡುವುದು ಡಿ.ಕೆ. ಸುರೇಶ್ ಅವರ ಕಾರ್ಯ ವೈಖರಿ. ಅವರು ನಮ್ಮ ಬೆನ್ನ ಹಿಂದೆ ಇರುತ್ತಾರೆ. ಯಾರು ಕೂಡ

> ವಿರೋಧಿಗಳು ಗೆದ್ದಿರಬಹುದು. ಕನಕಪುರ ಸೇರಿದಂತೆ ಎಲ್ಲಾ ತಾಲ್ಲೂಕುಗಳು ತಲೆ ತಗ್ಗಿಸುವಂತೆ ಚನ್ನಪಟ್ಟಣ ಜನತೆ ಮತ ನೀಡಿದ್ದಾರೆ. ಚನ್ನಪಟ್ಟಣದಲ್ಲಿ ಬಂದಿರುವ ಮತಗಳನ್ನು ನೋಡಿ ವಿರೋಧಿಗಳು ನಿದ್ದೆ ಮಾಡುತ್ತಿಲ್ಲ. ಚನ್ನಪಟ್ಟಣದಲ್ಲಿ ಹೊಸ ರಾಜಕೀಯ ಪರ್ವ ಶುರುವಾಗಿದೆ. ಡಿ.ಕೆ. ಸುರೇಶ್ ಅವರ ಕಾರ್ಯವೈಖರಿಯನ್ನು ಚನ್ನಪಟ್ಟಣ ಜನತೆ ಅರ್ಥ ಮಾಡಿಕೊಂಡಿದ್ದಾರೆ. ರಾಮನಗರ ಜಿಲ್ಲೆಯ ನಾಲ್ಕು ಕ್ಷೇತ್ರದಲ್ಲಿಯೂ ಕಾಂಗ್ರೆಸ್ ಶಾಸಕರನ್ನು ನೋಡುವ ದಿನಗಳು ದೂರವಿಲ್ಲ –ಡಿ.ಕೆ. ಸುರೇಶ್

ಧೃತಿಗೆಡಬೇಕಾಗಿಲ್ಲ' ಎಂದು ಮಾಗಡಿ ಶಾಸಕ ಎಚ್.ಸಿ. ಬಾಲಕೃಷ್ಣ ಧೈರ್ಯ ತುಂಬಿದರು.

---

# ಮುಂಜಾಗ್ರತೆ ಕೈಗೊಳ್ಳದವರ ವಿರುದ್ಧ ಕ್ರಮ: ವಿ. ರಶ್ಮಿ ಮಹೇಶ್


ಉದಯವಾಹಿನಿ ಚಿತ್ರ

• ಉದಯವಾಹಿನಿ ರಾಮನಗರ

ಜಿಲ್ಲೆಯಲ್ಲಿ ಮಳೆಯಿಂದಾಗಿ ಸಂಭವಿಸಬಹುದಾದ ಪ್ರವಾಹ ತಡೆಗಟ್ಟಲು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಅಗತ್ಯ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಬೇಕು. ಒಂದು ವೇಳೆ ನಿರ್ಲಕ್ಷ್ಯ ತೋರಿದರೆ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು' ಎಂದು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ವಿ. ರಶ್ಮಿ ಮಹೇಶ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ನಡೆದ ಮುಂಗಾರು ಪೂರ್ವ ಸಿದ್ಧತೆ ಹಾಗೂ ಬರಗಾಲ ನಿವಾರಣೆ ಕುರಿತ ಸಭೆಯಲ್ಲಿ ಮಾತನಾಡಿದ ಅವರು, 'ಹವಾಮಾನ ಇಲಾಖೆ ವರದಿಯಂತೆ ಜಿಲ್ಲೆಯಲ್ಲಿ ಹೆಚ್ಚು ಮಳೆಯಾಗುವ ಸಂಭವವಿದೆ. ಜೂನ್ ಮತ್ತು ಜುಲೈನಲ್ಲಿ ಮುಂಗಾರು ಮಳೆಯಾಗಲಿದ್ದು, ಆಗ ಎದುರಾಗಬಹುದಾದ ಪ್ರವಾಹದ ಸ್ಥಿತಿಯನ್ನು ಸಮರ್ಪಕವಾಗಿ ಎದುರಿಸಲು ಅಧಿಕಾರಿಗಳು ಸನ್ನದ್ಧರಾಗಿರಬೇಕು' ಎಂದರು.

**ಜಾನುವಾರುಗಳ ಸಂರಕ್ಷಣೆ**

ಮಳೆಗಾಲದ ಸಂದರ್ಭದಲ್ಲಿ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿಯೇ ಇರಬೇಕು. ಕಳೆದ ಬಾರಿ ಜಿಲ್ಲೆಯಲ್ಲಿ ಉಂಟಾದ ಪ್ರವಾಹ ಸ್ಥಳಗಳ ಬಗ್ಗೆ ಎಚ್ಚರ ವಹಿಸಬೇಕು. ಜನ, ಜಾನುವಾರುಗಳ ಸಂರಕ್ಷಣೆ ಹಾಗೂ ಯಾವುದೇ ಜೀವ ಹಾನಿಯಾಗದಂತೆ ಕ್ರಮ ಕೈಗೊಳ್ಳಬೇಕು. ನೆರೆಯಿಂದಾಗಿ ಮನೆಗಳು ಕುಸಿದರೆ ಕೂಡಲೇ ಅವರನ್ನು ಸ್ಥಳಾಂತರಿಸಿ, ಪರಿಹಾರ ನೀಡಬೇಕು' ಎಂದು ಸೂಚಿಸಿದರು.

> ಜಿಲ್ಲೆಯ ತಿಪ್ಪಗೊಂಡನಹಳ್ಳಿ ಸುತ್ತಮುತ್ತಲು ಭಾರಿ ಮಳೆಯಾಗುತ್ತಿರುವುದರಿಂದ ಆ ಜಲಾಶಯಕ್ಕೆ ಒಳಹರಿವು ಹೆಚ್ಚುತ್ತಿದೆ. ಅಲ್ಲಿಂದ ನೀರು ಬಿಡುಗಡೆ ಮಾಡಿದರೆ, ಮಂಚನಬೆಲೆ ಜಲಾಶಯಕ್ಕೆ ಬರುತ್ತದೆ.ಆಗ ಮಂಚನಬೆಲೆ ಜಲಾಶಯದ ಸುತ್ತಮುತ್ತಲಿನ ಪ್ರದೇಶದ ಜನರು ಪ್ರವಾಹದ ತೊಂದರೆಗೆ ಸಿಲುಕುತ್ತಾರೆ. ಹಾಗಾಗಿ, ಜಲಾಶಯದ ಸುತ್ತಮುತ್ತಲ ಪ್ರದೇಶದ ಜನರಿಗೆ ಮುನ್ನೆಚ್ಚರಿಕೆ ನೀಡಬೇಕು –ವಿ. ರಶ್ಮಿ ಮಹೇಶ್
> ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ

---

# ವರ್ಷದಲ್ಲಿ 24 ಬಾಲಕಾರ್ಮಿಕರ ರಕ್ಷಣೆ

• ಉದಯವಾಹಿನಿ ಕೋಲಾರ

ಜಿಲ್ಲೆಯ ವಿವಿಧೆಡೆ ಬಾಲಕಾರ್ಮಿಕರಾಗಿ ದುಡಿಯುತ್ತಿದ್ದ ಸುಮಾರು 24 ಮಕ್ಕಳನ್ನು ಜಿಲ್ಲೆಯ ಕಾರ್ಮಿಕ ಇಲಾಖೆಯ ಅಧಿಕಾರಿಗಳು ರಕ್ಷಿಸಿದ್ದಾರೆ.2023ರ ಏಪ್ರಿಲ್ 1ರಿಂದ ಈ ವರ್ಷದ ಮಾರ್ಚ್ 31ರವರೆಗೆ ಕೈಗೊಂಡ ಕಾರ್ಯಾಚರಣೆಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪ್ರಕರಣಗಳು ದಾಖಲಾಗಿವೆ.

ದೇಶದಲ್ಲಿ 1986ರಲ್ಲಿಯೇ ಬಾಲ ಕಾರ್ಮಿಕ ಪದ್ಧತಿ ನಿಷೇಧಿಸಿ ಕಾಯ್ದೆ ಜಾರಿ ಮಾಡಿದ್ದರೂ ಈ ಪಿಡುಗು ಕಾಡುತ್ತಿದ್ದು, ಗ್ಯಾರೇಜ್, ಹೋಟೆಲ್, ಬಾರ್‌ಗಳು, ಡಾಬಾ, ಅಂಗಡಿ, ಮಳಿಗೆಗಳಲ್ಲಿ ಮಕ್ಕಳನ್ನು ದುಡಿಸಿಕೊಳ್ಳುತ್ತಿರುವುದು ಪತ್ತೆಯಾಗಿದೆ. '24 ಮಕ್ಕಳನ್ನು ರಕ್ಷಿಸಿ ಪಾಲನೆ ಹಾಗೂ ಪೋಷಣೆಗಾಗಿ ಮಕ್ಕಳ ಕಲ್ಯಾಣ ಸಮಿತಿಗೆ ಒಪ್ಪಿಸಿ ಪುನರ್ವಸತಿ ಕೇಂದ್ರಗಳಿಗೆ ತಲುಪಿಸಲಾಗಿದೆ. ಮುಖ್ಯವಾಹಿನಿಗೆ ತರಲು ಶಾಲೆಗೆ ದಾಖಲಿಸಲಾಗಿದೆ. ಮಕ್ಕಳನ್ನು ದುಡಿಸಿಕೊಳ್ಳುತ್ತಿದ್ದ ಸಂಬಂಧಪಟ್ಟ ಮಾಲೀಕರ ಮೇಲೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ದಂಡ ವಿಧಿಸಿದ್ದೇವೆ' ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಶಬನಾ ಅಜ್ಮಿ ತಿಳಿಸಿದರು. ಜಿಲ್ಲಾಡಳಿತ, ಕಾರ್ಮಿಕ ಇಲಾಖೆಯಿಂದ ಜಿಲ್ಲೆಯಾದ್ಯಂತ ನೂರಾರು ಜಾಗೃತಿ ಕಾರ್ಯಕ್ರಮ, ಜಾಥಾ, ಬೀದಿ ನಾಟಕಗಳನ್ನು ಆಯೋಜಿಸಿದ್ದರೂ ಈ ಅನಿಷ್ಠ ಪದ್ಧತಿಯನ್ನು ಸಂಪೂರ್ಣ ನಿಷೇಧಿಸಲು ಸಾಧ್ಯವಾಗುತ್ತಿಲ್ಲ. 2023–24ರಲ್ಲಿ ಜಿಲ್ಲೆಯ ನೂರಾರು ಕಡೆಗಳಲ್ಲಿ ಬಾಲ ಕಾರ್ಮಿಕ ಪದ್ಧತಿ ನಡೆಯುತ್ತಿರುವ ಗುಮಾನಿ ಮೇಲೆ ದಾಳಿ ನಡೆಸಿ ತಪಾಸಣೆ ನಡೆಸಲಾಗಿದೆ.ಜಿಲ್ಲೆಯಲ್ಲಿ ಕಂಡುಬಂದ ಪ್ರಕರಣಗಳಲ್ಲಿ ಕೋಲಾರ ತಾಲ್ಲೂಕಿನಲ್ಲಿಯೇ ಅತಿ ಹೆಚ್ಚು ಪ್ರಕರಣ ದಾಖಲಾಗಿದ್ದು, 8 ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.

**ಎರಡು ಪ್ರಕರಣಗಳು ಪತ್ತೆ**

ಕೆಜಿಎಫ್ ಹಾಗೂ ಬಂಗಾರಪೇಟೆ ತಾಲ್ಲೂಕಿನಲ್ಲಿ ತಲಾ ನಾಲ್ವರು ಬಾಲಕಾರ್ಮಿಕರು ಪತ್ತೆಯಾಗಿದ್ದಾರೆ. ಶ್ರೀನಿವಾಸಪುರ ಹಾಗೂ ಮಾಲೂರು ತಾಲ್ಲೂಕಿನಲ್ಲಿ ತಲಾ ಮೂವರು ಬಾಲಕರನ್ನು ಕಾರ್ಮಿಕರು ದುಡಿಮೆಯಲ್ಲಿ ತೊಡಗಿರುವುದು ಗೊತ್ತಾಗಿ ರಕ್ಷಿಸಲಾಗಿದೆ. ಮುಳಬಾಗಿಲು ತಾಲ್ಲೂಕಿನಲ್ಲಿ ಎರಡು ಪ್ರಕರಣಗಳು ಪತ್ತೆಯಾಗಿವೆ.

---

# ದಸರಾ ಆನೆಗಳ ನಿರಂತರ ಸಾವಿಗೆ ಹೊಣೆ ಯಾರು?

## • ಭೀಮನಕಟ್ಟೆ ಆನೆ ಶಿಬಿರದಲ್ಲಿದ್ದ ಅಶ್ವತ್ಥಾಮ ಆನೆ ಸೋಲಾರ್ ವಿದ್ಯುತ್ ತಂತಿ ಸ್ಪರ್ಶದಿಂದ ಜೀವ ಕಳೆದುಕೊಂಡಿದೆ

• ಉದಯವಾಹಿನಿ ಮೈಸೂರು

ವರ್ಷದ ಅಂತರದಲ್ಲಿಯೇ ವಿಶ್ವ ವಿಖ್ಯಾತ ಮೈಸೂರು ದಸರಾದಲ್ಲಿ ಪಾಲ್ಗೊಂಡ ಮೂರು ಪ್ರಮುಖ ಆನೆಗಳು ಜೀವಬಿಟ್ಟವು. ಅದರಲ್ಲೂ ಕರ್ನಾಟಕ ಅರಣ್ಯ ಇಲಾಖೆಯ ನೋಡಿಕೊಳ್ಳುತ್ತಿರುವ ಆನೆಗಳ ಶಿಬಿರದಲ್ಲಿಯೇ ಅನಾಹುತದಿಂದ ಪ್ರಮುಖ ಆನೆಗಳು ಜೀವ ಬಿಡುತ್ತಿರುವುದು ಅಲ್ಲಿನ ನಿರ್ವಹಣೆ, ವ್ಯವಸ್ಥೆ ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯಕ್ಷಮತೆಯನ್ನೇ ಪ್ರಶ್ನಿಸುವ ಸ್ಥಿತಿ ಎದುರಾಗಿದೆ.

ಈಗಾಗಲೇ ಬೇರೆ ಬೇರೆ ರೂಪದಲ್ಲಿ ಐದಕ್ಕೂ ಹೆಚ್ಚು ದಸರಾದಲ್ಲಿ ಪಾಲ್ಗೊಳ್ಳುವ ದಸರಾ ಆನೆಗಳು ಮೃತಪಟ್ಟಿವೆ. ಇದರೊಟ್ಟಿಗೆ ಇತರೆ ಆನೆಗಳೂ ನಿಷ್ಕಾಳಜಿಯಿಂದ ಜೀವ ಕಳೆದುಕೊಂಡಿವೆ. ಇದಕ್ಕೆ ಹೊಸ ಸೇರ್ಪಡೆ ನಾಗರಹೊಳೆಯ ಆನೆ, ದಸರಾದಲ್ಲಿ ಭಾಗಿಯಾಗಿದ್ದ ಅಶ್ವತ್ಥಾಮನ ಸಾವು.

ಖ್ಯಾತ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ನಿಧನ, ಕುವೆಂಪು ನಗರದಲ್ಲಿ ಇಂದು ಸಾರ್ವಜನಿಕ ದರ್ಶನ, ಬಳಿಕ ಅಂತ್ಯಕ್ರಿಯೆ

ನಾಗರಹೊಳೆಯ ಹುಣಸೂರು ತಾಲ್ಲೂಕಿನ ಮತ್ತಿಗೋಡು ಆನೆ ಶಿಬಿರಕ್ಕೆ ಹೊಂದಿಕೊಂಡಂತೆ ಇರುವ ಭೀಮನಕಟ್ಟೆ ಆನೆ ಶಿಬಿರದಲ್ಲಿದ್ದ ಅಶ್ವತ್ಥಾಮ ಆನೆ ಸೋಲಾರ್ ವಿದ್ಯುತ್ ತಂತಿ ಸ್ಪರ್ಶದಿಂದ ಜೀವ ಕಳೆದುಕೊಂಡಿದೆ. ಶಿಬಿರದಲ್ಲಿದ್ದ ಆನೆಯನ್ನು ಕಾಡಿಗೆ ಮೇಯಲೆಂದು ಬಿಡಲಾಗಿತ್ತು. ಈ ವೇಳೆ ಆನೆ ಸೋಲಾರ್ ತಂತಿಗೆ ಸಿಲುಕಿ ಪ್ರಾಣ ಕಳೆದುಕೊಂಡಿದೆ. ರಾತ್ರಿಯಿಡೀ ಆನೆ ಬಾರದೇ ಇದ್ದಾಗ ಶಿಬಿರದ ಸಿಬ್ಬಂದಿ ಹಾಗೂ ಆನೆ ಮಾವುತ, ಕವಾಡಿ ಹುಡುಕಾಟ ನಡೆಸಿದಾಗ ಆನೆ ಮೃತಪಟ್ಟಿರುವುದು ಪತ್ತೆಯಾಗಿದೆ. ಆನೆಯ ಬೆನ್ನು ಭಾಗಕ್ಕೆ ಸೋಲಾರ್ ತಂತಿ ತಗುಲಿ ಮೃತಪಟ್ಟಿರುವುದು ಕಂಡು ಬಂದಿದೆ. ಅದೂ ಆನೆ ಶಿಬಿರಕ್ಕೆ ಅಳವಡಿಸಲಾಗಿದ್ದ ಸೋಲಾರ್ ತಂತಿಗೆ ಸಿಲುಕಿರುವುದು ಕಂಡು ಬಂದಿದೆ. ಸುಮಾರು 39 ವರ್ಷದ ಅಶ್ವತ್ಥಾಮ ಆನೆಯನ್ನು 2017ರಲ್ಲಿ ಸಕಲೇಶಪುರದಲ್ಲಿ ಸೆರೆ ಹಿಡಿಯಲಾಗಿತ್ತು. ಆನಂತರ ಪಳಗಿಸಿ ಎರಡು

**ಆನೆ ಸಾವಿನ ಹಿಂದೆ ಸಿಬ್ಬಂದಿಗಳ ನಿರ್ಲಕ್ಷ್ಯ**


ಉದಯವಾಹಿನಿ ಚಿತ್ರ

ವರ್ಷ ದಸರೆಗೂ ಕರೆ ತರಲಾಗಿತ್ತು. ಆನೆಗಳ ಸೆರೆ ಕಾರ್ಯಾಚರಣೆಗೂ ಬಳಕೆ ಮಾಡಲಾಗುತ್ತಿತ್ತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಅಶ್ವತ್ಥಾಮ ಆನೆ ಸಾವಿನ ಹಿಂದೆ ಸಿಬ್ಬಂದಿ ನಿರ್ಲಕ್ಷ್ಯವೂ ಕೇಳಿ ಬಂದಿದೆ. ಸ್ಥಳೀಯ ಅಧಿಕಾರಿಗಳು ಆನೆಯ ಮೇಲುಸ್ತುವಾರಿಯನ್ನು ಚೆನ್ನಾಗಿ ನೋಡಿಕೊಳ್ಳಬೇಕಿತ್ತು. ಆನೆ ನೋಡಲೆಂದೇ ಒಬ್ಬ ಮಾವುತ, ಕವಾಡಿ ಇದ್ದಾರೆ. ಅವರೂ ಕೂಡ ನಿರ್ಲಕ್ಷ್ಯ ವಹಿಸಿರುವ ಆರೋಪ ಕೇಳಿ ಬಂದಿದೆ. ಆನೆ ಬಿಟ್ಟ ಮೇಲೆ ಅದು ಎಲ್ಲಿ ಹೋಗಿದೆ ಎನ್ನುವುದನ್ನು ಒಬ್ಬರಾದರೂ ನೋಡಿಕೊಳ್ಳಬೇಕು. ಶಿಬಿರದಲ್ಲಿರುವ ಸಾಕಾನೆಗಳನ್ನು ಕಾಡಿಗೆ ಅಟ್ಟಿ ಸುಮ್ಮನೇ ಕುಳಿತುಕೊಳ್ಳುತ್ತಾರೆ. ಇದೇ ರೀತಿ ಕುಮಾರಸ್ವಾಮಿ ಎಂಬ ಆನೆಯೂ ಕಾಣೆಯಾಗಿ ಮೂರು ದಿನದ ನಂತರ ಶವ ಪತ್ತೆಯಾಗಿತ್ತು.ಆನೆ ಶಿಬಿರಗಳಲ್ಲಿ ಬಿಗಿ ಕ್ರಮ ಆಗದೇ ಇದ್ದರೆ ಇನ್ನಷ್ಟು ಆನೆ ಕಳೆದುಕೊಳ್ಳಬೇಕಾಗುತ್ತದೆ ಎನ್ನುವುದು ಪರಿಸರ ಪ್ರಿಯರ ಆರೋಪ.

**ಸೌರ ವಿದ್ಯುತ್ ಬೇಲಿಯ ಮೇಲೆ ಬಿದ್ದು ಸಾವು**

ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರಧಾನ ಆಕರ್ಷಣೆಯಾದ ಜಂಬೂಸವಾರಿಯಲ್ಲಿ ಪಾಲ್ಗೊಳ್ಳುತ್ತಿದ್ದ ಅಶ್ವತ್ಥಾಮ (38) ಆನೆಯ ನಿಧನಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸಂತಾಪ ಸೂಚಿಸಿದ್ದಾರೆ. ದಸರಾ ಮಹೋತ್ಸವದಲ್ಲಿ 2 ಬಾರಿ ಭಾಗಿಯಾಗಿದ್ದ ನಾಗರಹೊಳೆ ಅರಣ್ಯ ವ್ಯಾಪ್ತಿಯ ಭೀಮನಕಟ್ಟೆ ಶಿಬಿರದಲ್ಲಿದ್ದ ಅಶ್ವತ್ಥಾಮ ಸೌರ ವಿದ್ಯುತ್ ಬೇಲಿಯ ಮೇಲೆ ಬಿದ್ದು ಸಾವಿಗೀಡಾಗಿರುವುದಾಗಿ ವರದಿಯಾಗಿದ್ದು, ಈ ಆಕಸ್ಮಿಕ ಸಾವಿನ ಬಗ್ಗೆ ಸೂಕ್ತ ತನಿಖೆ ನಡೆಸಿ ವರದಿ ನೀಡಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

> ಮೈಸೂರು ದಸರಾದಲ್ಲಿ ಪಾಲ್ಗೊಂಡು ಲಕ್ಷಾಂತರ ಜನರ ಮೆಚ್ಚುಗೆ ಗಳಿಸಿದ್ದ ಆನೆ ಅಶ್ವತ್ಥಾಮನ ಸಾವು ನೋವುಂಟುಮಾಡಿದೆ. ತನ್ನ ಶಾಂತ ಸ್ವಭಾವ ಮತ್ತು ಗಾಂಭೀರ್ಯದಿಂದಾಗಿ ಬಹುಬೇಗನೇ ವಿಶ್ವವಿಖ್ಯಾತ ದಸರಾದ ಭಾಗವಾಗಿ ತಾಯಿ ಚಾಮುಂಡೇಶ್ವರಿಯ ಸೇವೆಗೈದಿದ್ದ. ಅಶ್ವತ್ಥಾಮನ ನೆನಪು ನಮ್ಮ ಮನದಲ್ಲಿ ಶಾಶ್ವತವಾಗಿರಲಿದೆ ಎಂದು ಸಿಎಂ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ –ಸಿಎಂ ಸಿದ್ದರಾಮಯ್ಯ

---

# ಮಿನಿ ನ್ಯೂಸ್

## ಉದ್ಯೋಗ ಮೇಳ ಸಹಕಾರಿ



ಉದಯವಾಹಿನಿ ಚಿತ್ರ

• ಉದಯವಾಹಿನಿ ವಿರಾಜಪೇಟೆ

ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗ ಮೇಳ ನಡೆಸುವುದರಿಂದ ಅಲ್ಲಿನ ಉದ್ಯೋಗಾಂಕ್ಷಿಗಳಿಗೆ ಹೆಚ್ಚಿನ ಪ್ರಯೋಜನವಾಗಲಿದೆ' ಎಂದು ಪುರಸಭೆ ಸದಸ್ಯ ಎಸ್.ಎಚ್. ಮತೀನ್ ಅಭಿಪ್ರಾಯಪಟ್ಟರು.

ಪಟ್ಟಣದ ಎ.ಟೆಕ್ ಎಜುಕೇಶನಲ್ ಸೆಂಟರ್ ಶಂಕರಾಚಾರ್ಯ ಟ್ರಸ್ಟ್ ಹಾಗೂ ಮೈಸೂರಿನ ನೈಸ್ ಸಂಸ್ಥೆ ಸಹಯೋಗದೊಂದಿಗೆ ನಡೆದ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದರು.

ವಿದ್ಯಾರ್ಹತೆಗೆ ತಕ್ಕಂತೆ ಉದ್ಯೋಗ ಪಡೆದುಕೊಳ್ಳಲು ಉದ್ಯೋಗ ಮೇಳ ಸಹಕಾರಿಯಾಗಿದೆ' ಎಂದರು.

ಪಟ್ಟಣ ಪಂಚಾಯಿತಿಯ ಮಾಜಿ ಉಪಾಧ್ಯಕ್ಷೆ ತಸ್ನೀಂ ಅಕ್ತರ್ ಮಾತನಾಡಿ, 'ಸ್ಥಳೀಯರಿಗೆ ತಮ್ಮ ಕೌಶಲ್ಯ ಮತ್ತು ಸಾಮರ್ಥ್ಯಕ್ಕೆ ತಕ್ಕಂತೆ ಉದ್ಯೋಗ ಪಡೆದುಕೊಳ್ಳಲು ಉದ್ಯೋಗ ಮೇಳಗಳು ನೆರವಾಗಲಿವೆ' ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಸ್ಥೆ ಶಫೀರ್, 'ವಿದ್ಯಾರ್ಥಿಗಳು ತಮ್ಮಲ್ಲಿರುವ ಕೌಶಲ್ಯ ಬಳಸಿಕೊಂಡು ಕಾರ್ಯನಿರ್ವಹಿಸಬೇಕು. ಆಗ ಮಾತ್ರ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿದೆ. ಪ್ರತಿಷ್ಠಿತ ಸಂಸ್ಥೆಗಳ ಸಹಭಾಗಿತ್ವದಲ್ಲಿ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಇದರ ಸದುಪಯೋಗವನ್ನು ಸ್ಥಳೀಯ ಯುವಕರು ಪಡೆದುಕೊಳ್ಳಬೇಕು' ಎಂದರು.

## ಬೀಟೆ ನಾಟಾ, ಹರಳು ಕಲ್ಲು ವಶ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕುಶಾಲನಗರ

ಕುಶಾಲನಗರ ಕಡೆಯಿಂದ ಹುಣಸೂರು ಕಡೆಗೆ ಪಿಕ್ ಆಪ್ ವಾಹನದಲ್ಲಿ ಅಕ್ರಮವಾಗಿ ಹರಳು ಕಲ್ಲು ಸಾಗಾಟ ಮಾಡುತ್ತಿದ್ದ ವಾಹನವನ್ನು ಸಿನೀಮಿಯ ರೀತಿಯಲ್ಲಿ ಬೆನ್ನಟ್ಟಿ ಮೂವರನ್ನು ಬಂಧಿಸಿ ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ. ಕುಶಾಲನಗರ ವಲಯ ಅರಣ್ಯಾಧಿಕಾರಿ ರತನ್ ಕುಮಾರ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಿದ ಅರಣ್ಯ ಸಿಬ್ಬಂದಿಗಳ ತಂಡ 2,495 ಕೆಜಿ ಹರಳು ಕಲ್ಲು ವಶ ಪಡಿಸಿಕೊಂಡಿದ್ದಾರೆ. ವಾಹನ ಚಾಲಕ ಅರಣ್ಯ ತಪಾಸಣಾ ಕೇಂದ್ರದ ಸಿಬ್ಬಂದಿಗಳು ನಿಲ್ಲಿಸುವಂತೆ ಸೂಚನೆ ನೀಡಿದರೂ ವೇಗವಾಗಿ ಚಾಲನೆ ಮಾಡಿಕೊಂಡ ಹೋದಾಗ ಆರ್.ಎಫ್.ಒ. ರತನ್ ಕುಮಾರ್ ಹಿಂಬಾಲಿಸಿ ವಾಹನವನ್ನು ತಡೆದು, ಮೂವರನ್ನು ಬಂಧಿಸಿದರು.

ಕುಶಾಲನಗರ ಕಡೆಯಿಂದ ಪಿಕ್ ಆಪ್ ವಾಹನದಲ್ಲಿ ಬೀಟೆ ನಾಟಾಗಳನ್ನು ತುಂಬಿಸಿಕೊಂಡು ಮೈಸೂರು ಕಡೆಗೆ ಹೋಗುತ್ತಿದ್ದ ವಾಹನವನ್ನು ಟೋಲ್‌ಗೇಟ್ ಬಳಿಯ ಅರಣ್ಯ ತಪಾಸಣಾ ಕೇಂದ್ರದ ಸಿಬ್ಬಂದಿ ತಡೆದು ನಿಲ್ಲಿಸಿ ಪರಿಶೀಲನೆ ನಡೆಸಿದ ವೇಳೆ ಅಕ್ರಮವಾಗಿ ಬೀಟೆ ನಾಟಾ ಸಾಗಾಟ ಮಾಡುತ್ತಿರುವ ಪ್ರಕರಣ ಗೊತ್ತಾಯಿತು. ಈ ವೇಳೆ ಚಾಲಕ ಹಾಗೂ ಮತ್ತೊಬ್ಬ ಪರಾರಿಯಾದರು. ಅರಣ್ಯ ಸಿಬ್ಬಂದಿ ವಾಹನ ಮತ್ತು ಬೀಟೆ ನಾಟಾವನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಮೇದರದೊಡ್ಡಿಗೆ ಬಂತು ಸರ್ಕಾರಿ ಬಸ್

• ಉದಯವಾಹಿನಿ ಕನಕಪುರ

ಸ್ವಾತಂತ್ರ್ಯ ಲಭಿಸಿ 77 ವರ್ಷದ ಬಳಿಕ ತಾಲ್ಲೂಕಿನ ಕಸಬಾ ಹೋಬಳಿ ಚಿಕ್ಕಮುದುವಾಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಗ್ರಾಮ ಮೇದರದೊಡ್ಡಿ ಸರ್ಕಾರಿ ಬಸ್ ಸೇವೆ ಕಂಡಿದೆ. ಗ್ರಾಮಕ್ಕೆ ಸೋಮವಾರ ಬಂದ ರಾಜ್ಯ ಸಾರಿಗೆ ಸಂಸ್ಥೆಯ ಬಸ್ ಕಂಡು ಹರ್ಷಿತರಾದ ಗ್ರಾಮಸ್ಥರು ಪೂಜೆ ಸಲ್ಲಿಸಿ ಸಂಭ್ರಮಿಸಿದರು.ಪರಿಶಿಷ್ಟ ಜಾತಿಯ 50 ಕುಟುಂಬ ಇರುವ ಈ ಕುಗ್ರಾಮಕ್ಕೆ ಇಲ್ಲಿಯವರೆಗೆ ಯಾವುದೇ ಸಾರಿಗೆ ವ್ಯವಸ್ಥೆ ಇರಲಿಲ್ಲ. ಶಾಲೆ, ಕಾಲೇಜುಗಳಿಗೆ ಹೋಗಲು ಗ್ರಾಮದ ಮಕ್ಕಳು ತುಂಬಾ ಕಷ್ಟ ಪಡಬೇಕಿತ್ತು. ರೋಗಿಗಳು ಆಸ್ಪತ್ರೆಗೆ ಹೋಗಲು ಸಾಹಸ ಮಾಡಬೇಕಿತ್ತು.

ಸುತ್ತಲೂ ಬೆಟ್ಟ, ಗುಡ್ಡಗಳಿರುವ ಈ ಗ್ರಾಮಕ್ಕೆ ಹಗಲು ವೇಳೆಯಲ್ಲೆ ಜನರು ಗ್ರಾಮಕ್ಕೆ ನಡೆದುಕೊಂಡು ಬರಲು ಸಾಹಸಪಡಬೇಕು. ಗ್ರಾಮದ ಬಹುತೇಕ ಜನರು ಕೂಲಿಕಾರರಾಗಿದ್ದು ಕೆಲಸ ಅರಿಸಿ ನಿತ್ಯ ನಗರ ಪ್ರದೇಶಗಳಿಗೆ ಹೋಗುತ್ತಾರೆ. ಸಾರಿಗೆ ಸೌಲಭ್ಯ ಇಲ್ಲದೆ ಪರದಾಡುತ್ತಿದ್ದರು. ಗ್ರಾಮಕ್ಕೆ ಸಾರಿಗೆ ಸಂಪರ್ಕ ಕಲ್ಪಿಸುವಂತೆ ಗ್ರಾಮಸ್ಥರ ಪರವಾಗಿ ಗ್ರಾಮ ಪಂಚಾಯಿತಿ ಸದಸ್ಯ ಚಿಕ್ಕ ಮುದವಾಡಿಯ ರಾಜೀವ್ ಮೇ. 26 ರಂದು ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದರು. ಗ್ರಾಮಕ್ಕೆ ಭೇಟಿ ನೀಡಿದ್ದ ಸಾರಿಗೆ ಇಲಾಖೆ ಅಧಿಕಾರಿಗಳ ತಂಡ ಗ್ರಾಮಕ್ಕೆ ಬಸ್ ಅವಶ್ಯಕತೆ ಇರುವುದನ್ನು ಮನಗಂಡು ಇಲಾಖೆಗೆ ಶಿಫಾರಸು ಮಾಡಿದ್ದರು.

## ಕಾಮಗಾರಿ ಪೂರ್ಣಗೊಳಿಸಲು ಆಗ್ರಹ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮಾಗಡಿ

ನಗರೋತ್ಥಾನ ಯೋಜನೆ ಅಡಿ ಪಟ್ಟಣದ 20ನೇ ವಾರ್ಡ್‌ನ ಅಗ್ರಹಾರ ಬೀದಿಯಲ್ಲಿ ಕೈಗೊಂಡಿರುವ ಕಾಮಗಾರಿ ಅರ್ಧಕ್ಕೆ ನಿಂತು ವರ್ಷ ಕಳೆದಿದೆ ಎಂದು ಪುರಸಭೆ ಸದಸ್ಯ ಕೆ.ವಿ.ಬಾಲು ಆರೋಪಿಸಿದ್ದಾರೆ. ನಗರೋತ್ಥನದ ಅಡಿ ಕೈಗೊಂಡಿರುವ ಯಾವುದೇ ಕಾಮಗಾರಿ ಪೂರ್ಣಗೊಂಡಿಲ್ಲ. ಪುರಸಭಾ ಅಧಿಕಾರಿಗಳು ಅರ್ಧಕ್ಕೆ ನಿಂತಿರುವ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಅವರು ಮನವಿ ಮಾಡಿದರು. ಅಗ್ರಹಾರ ಬೀದಿಯಲ್ಲಿ ಎರಡು ಕಡೆ ಚರಂಡಿ ಮತ್ತು ಕವರಿಂಗ್ ಸ್ಲಾಬ್ ಅಳವಡಿಸಿ ರಸ್ತೆ ಅಭಿವೃದ್ಧಿ ಕಾಮಗಾರಿ ಮಂಜೂರಾಗಿದೆ. ಒಂದು ಕಡೆ ಚರಂಡಿ ನಿರ್ಮಿಸಿ ಕವರಿಂಗ್ ಸ್ಲಾಬ್ ಅಳವಡಿಸಿರುವುದನ್ನು ಬಿಟ್ಟರೆ, ಮತ್ತೊಂದು ಬದಿಯಲ್ಲಿ ಚರಂಡಿ ನಿರ್ಮಾಣ ಮಾಡಿಲ್ಲ. ಇದರಿಂದ ತೊಂದರೆಯಾಗಿದೆ ಎಂದರು. ಗುತ್ತಿಗೆದಾರರು ಕಾಮಗಾರಿ ಪೂರ್ಣಗೊಳಿಸಬೇಕು. ಇಲ್ಲವಾದರೆ ನಗರೋತ್ಥನ ಅಡಿ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡಬಾರದೆಂದು ಜಿಲ್ಲಾಧಿಕಾರಿ ಹಾಗೂ ಪುರಸಭೆ ಪಿಡಿಯವರಿಗೆ ದೂರು ನೀಡುವುದಾಗಿ ಹೇಳಿದರು.

ಅಂತರಾಳದಿಂದ..

EDITORIAL

# 'ನೀಟ್' ಸುತ್ತ ಗೊಂದಲ: ಲೋಪ ಸರಿಪಡಿಸಿ, ತಪ್ಪಿತಸ್ಥರ ಶಿಕ್ಷಿಸಿ


ಉದಯವಾಹಿನಿ ಚಿತ್ರ

ವೈದ್ಯಕೀಯ, ದಂತವೈದ್ಯಕೀಯ ಹಾಗೂ ಇತರ ಕೆಲವು ಕೋರ್ಸ್‌ಗಳ ಪ್ರವೇಶಕ್ಕೆ ಅರ್ಹತೆಯನ್ನು ನಿರ್ಣಯಿಸುವ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ಪದವಿ) ಅಥವಾ 'ನೀಟ್'ಗೆ ಸಂಬಂಧಿಸಿದಂತೆ ವಿವಾದ ಹೊಸದೇನೂ ಅಲ್ಲ. ಈ ವರ್ಷ ಕೂಡ ಈ ಪರೀಕ್ಷೆಗೆ ಸಂಬಂಧಿಸಿದಂತೆ ಹಲವು ಪ್ರಶ್ನೆಗಳು ಎದ್ದಿವೆ. ಪರೀಕ್ಷೆಯ ಬಗೆ ಹಾಗೂ ಫಲಿತಾಂಶವನ್ನು ಘೋಷಿಸಿದ ರೀತಿಯ ಕುರಿತು ಟೀಕೆಗಳು ಇವೆ. ಈ ಪರೀಕ್ಷೆಯನ್ನು ನಡೆಸುವ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯು (ಎನ್‌ಟಿಎ) ವಿವಾದ, ಟೀಕೆಗಳ ಕುರಿತು ತನಿಖೆಗೆ ನಾಲ್ಕು ಮಂದಿ ಸದಸ್ಯರ ಸಮಿತಿಯೊಂದನ್ನು ನೇಮಿಸಿದೆ. ಹಲವು ಸಮಸ್ಯೆಗಳ ಬಗ್ಗೆ ನೂರಾರು ಮಂದಿ ವಿದ್ಯಾರ್ಥಿಗಳು ದೂರಿದ್ದಾರೆ. ಕೆಲವು ಕೇಂದ್ರಗಳಲ್ಲಿ ತಾಂತ್ರಿಕ ಅಡಚಣೆಗಳು ಎದುರಾಗಿದ್ದವು. ದೋಷಪೂರಿತ ಪ್ರಶ್ನೆಪತ್ರಿಕೆಗಳು ಇದ್ದವು ಹಾಗೂ ಒಎಂಆರ್ ಷೀಟ್‌ಗಳಲ್ಲಿ ಲೋಪಗಳು ಇದ್ದವು. ಕೆಲವು ಕಡೆಗಳಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿದೆ ಎಂಬ ಆರೋಪ ಇದೆ. ಫಲಿತಾಂಶವನ್ನು ಜೂನ್ 14ರಂದು ಪ್ರಕಟಿಸಬೇಕಿತ್ತು. ಆದರೆ ಹತ್ತು ದಿನ ಮುಂಚಿತವಾಗಿ ಫಲಿತಾಂಶ ಪ್ರಕಟವಾಯಿತು. ಕೆಲವು ಉತ್ತರಪತ್ರಿಕೆ ಮಾದರಿಗಳು ತಪ್ಪಾಗಿದ್ದವು. ಮೌಲ್ಯಮಾಪನವು ಸರಿಯಾಗಿ ನಡೆದಿಲ್ಲ ಎಂಬ ಆರೋಪಗಳೂ ಇವೆ.

> **ರಾಜಕೀಯ ಪಕ್ಷಗಳು ನೀಟ್ ಕುರಿತು ಮಾತನಾಡಿವೆ. ಸರಿಸುಮಾರು ಐದು ಸಾವಿರ ಪರೀಕ್ಷಾ ಕೇಂದ್ರಗಳಲ್ಲಿ ನಡೆಯುವ ಇದು ದೇಶದ ಅತಿದೊಡ್ಡ ಪ್ರವೇಶ ಪರೀಕ್ಷೆ. ಇದಕ್ಕೆ ಸುಮಾರು 23 ಲಕ್ಷ ವಿದ್ಯಾರ್ಥಿಗಳು ಹಾಜರಾಗಿದ್ದರು. ಈ ಪರೀಕ್ಷೆ ನಡೆಯುವ ಬಗೆಯ ಸುತ್ತ ಇಷ್ಟೊಂದು ದೂರುಗಳು, ಇಷ್ಟೊಂದು ಪ್ರಶ್ನೆಗಳು ಇರಲೇಬಾರದು. ದೊಡ್ಡ ಮಟ್ಟದಲ್ಲಿ ನಡೆಯುವ ಹಾಗೂ ಹೆಚ್ಚು ಪ್ರಾಮುಖ್ಯ ಪಡೆದ ನೀಟ್‌ನಂತಹ ಪರೀಕ್ಷೆಗಳು ಅತ್ಯಂತ ಹೆಚ್ಚು ವಿಶ್ವಾಸಾರ್ಹ ಆಗಿರಬೇಕು.**

ಇಷ್ಟೇ ಅಲ್ಲ, ಇಲ್ಲಿ ಇನ್ನೂ ಹಲವು ಸಂಗತಿಗಳು ಇವೆ. ಪರೀಕ್ಷೆಗೆ ಹಾಜರಾಗಿದ್ದ 67 ವಿದ್ಯಾರ್ಥಿಗಳಿಗೆ ಪೂರ್ಣ ಅಂಕ (720ಕ್ಕೆ 720) ಲಭಿಸಿದೆ. ಹೀಗೆ ಹಿಂದೆಂದೂ ಆಗಿರಲಿಲ್ಲ. ಅತಿ ಹೆಚ್ಚಿನ ಅಂಕ ಪಡೆದವರಲ್ಲಿ ಹಲವರು ಒಂದೇ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ಬರೆದವರು. ಕೆಲವು ವಿದ್ಯಾರ್ಥಿಗಳಿಗೆ 718 ಹಾಗೂ 719 ಅಂಕಗಳು ಲಭಿಸಿವೆ. ನೀಟ್ ಪರೀಕ್ಷೆಯಲ್ಲಿ ಅಂಕ ನೀಡುವ ಸೂತ್ರದ ಪ್ರಕಾರ ಇಷ್ಟು ಅಂಕ ಪಡೆಯಲು ಸಾಧ್ಯವೇ ಇಲ್ಲ. ಮಾದರಿ ಉತ್ತರಪತ್ರಿಕೆಯೊಂದರ ಪರಿಷ್ಕರಣೆ ಹಾಗೂ ಕೆಲವು ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲು ಸಮಯ ಸರಿಯಾಗಿ ಸಿಗದಿದ್ದ ಕಾರಣಕ್ಕೆ ಕೃಪಾಂಕ ನೀಡಿದ್ದರಿಂದಾಗಿ ಭಾರಿ ಅಂಕಗಳು ಸಿಕ್ಕಿವೆ ಎಂದು ಎನ್‌ಟಿಎ ಹೇಳಿದೆ. ಕೃಪಾಂಕ ನೀಡಿದ ಪರಿಣಾಮವಾಗಿ 718, 719 ಅಂಕಗಳು ಲಭಿಸಿವೆ. ಹಲವು ವಿದ್ಯಾರ್ಥಿಗಳು ಭಾರಿ ಅಂಕ ಪಡೆದಿದ್ದಕ್ಕೆ ಕಾರಣ ಅವರಿಗೆ ಪ್ರಶ್ನೆಪತ್ರಿಕೆಯು ಸುಲಭವಾಗಿದ್ದುದು ಎಂದು ಕೂಡ ಎನ್‌ಟಿಎ ವಿವರಣೆ ನೀಡಿದೆ.

ಕೆಲವು ವಿದ್ಯಾರ್ಥಿಗಳು ಕೋರ್ಟ್ ಮೊರೆ ಹೋಗಿದ್ದಾರೆ. ಪರೀಕ್ಷೆಯ ಪಾವಿತ್ರ್ಯಕ್ಕೆ ಧಕ್ಕೆ ಆಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಅಲ್ಲದೆ, ಎನ್‌ಟಿಎಗೆ ನೋಟಿಸ್ ಜಾರಿಗೆ ಆದೇಶಿಸಿದೆ. ಕೆಲವು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ್ದಾರೆ. ಅಕ್ರಮಗಳ ಬಗ್ಗೆ ಸಿಬಿಐ ತನಿಖೆ ನಡೆಸಬೇಕು. ಹೊಸದಾಗಿ ಪರೀಕ್ಷೆ ಆಗಬೇಕು ಎಂದು ಕೆಲವರು ಕೋರಿದ್ದಾರೆ.

ಹೀಗಾಗಬೇಕು ಎಂದಾದರೆ ಪಾರದರ್ಶಕತೆ ಹಾಗೂ ದಕ್ಷತೆ ಇರಬೇಕು. ನಾಲ್ವರು ಸದಸ್ಯರ ಸಮಿತಿಯು ಒಂದು ವಾರದಲ್ಲಿ ವರದಿ ಸಲ್ಲಿಸುವ ನಿರೀಕ್ಷೆ ಇದೆ. ಆ ವರದಿಯು ಎಲ್ಲಾ ಲೋಪಗಳ ಬಗ್ಗೆ ಬೆಳಕು ಚೆಲ್ಲುವ ಕೆಲಸ ಮಾಡಬೇಕು. ಆ ಲೋಪಗಳು ಉಂಟಾಗಿದ್ದಕ್ಕೆ ಕಾರಣ ಏನು ಎಂಬುದನ್ನು ಹೇಳಬೇಕು. ತಪ್ಪಾಗಿದ್ದಲ್ಲಿ ಅವುಗಳನ್ನು ಸರಿಪಡಿಸಬೇಕು. ತಪ್ಪಿಗೆ ಕಾರಣರಾದವರನ್ನು ಹೊಣೆಗಾರರನ್ನಾಗಿಸಬೇಕು. ಸರಿಯಾದ ಯೋಜನೆ ಇದ್ದಲ್ಲಿ, ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಲ್ಲಿ ಲೋಪಗಳಿಗೆ ಆಸ್ಪದ ಇಲ್ಲದಂತೆ ಪರೀಕ್ಷೆ ನಡೆಸಲು ಸಾಧ್ಯವಿದೆ. ಈಗ ಎದುರಾಗಿರುವ ಸಮಸ್ಯೆಗಳನ್ನು ಇತ್ಯರ್ಥಪಡಿಸಿ. ಅವು ಮುಂದೆ ಮತ್ತೆ ಎದುರಾಗದಂತೆ ನೋಡಿಕೊಳ್ಳಬೇಕು.

# ಜನಜಾಗೃತಿ ಸಮಿತಿಯಿಂದ ಕೇಂದ್ರ ಸರಕಾರಕ್ಕೆ ಆಗ್ರಹ

## ■ ಹಿಂದೂ ಸಂತರು ಮತ್ತು ಸಂಪ್ರದಾಯಗಳ ತೇಜೋವಧೆ ಮಾಡುವ `ಮಹಾರಾಜ್' ಚಲನಚಿತ್ರವನ್ನು ಕೂಡಲೇ ನಿಷೇಧಿಸಿ !

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಚಲನಚಿತ್ರದ ವಿರುದ್ಧ ದೇಶಾದ್ಯಂತ ಆಕ್ರೋಶ**

**ಆದರೆ ಹಿಂದೂ ಸಂತರು, ಹಿಂದೂ ಧಾರ್ಮಿಕ ಆಚರಣೆಗಳನ್ನು ಸುಲಭವಾಗಿ ಗುರಿ ಮಾಡುತ್ತಾರೆ. ಹಿಂದೂಗಳು ಸಹಿಷ್ಣುಗಳಾಗಿದ್ದರಿಂದ ಮತ್ತು ''ಸೆಕ್ಯುಲರಿಸಂ' ಹೆಸರಿನಲ್ಲಿ ಕೇವಲ ಹಿಂದೂಗಳ ಧಾರ್ಮಿಕ ಭಾವನೆಗಳನ್ನು ತುಳಿಯಲಾಗುತ್ತದೆ. ಇದನ್ನು ಎಂದಿಗೂ ಸಹಿಸುವುದಿಲ್ಲ. ಈ ಚಲನಚಿತ್ರದ ವಿರುದ್ಧ ದೇಶಾದ್ಯಂತ ಆಕ್ರೋಶದ ಅಲೆ ಎದ್ದಿದೆ. ಸರ್ಕಾರ ಕೂಡಲೇ ಈ ಚಲಚಿತ್ರವನ್ನು ನಿಷೇಧಿಸಬೇಕು. ಅಲ್ಲದೆ, ದೇವತೆ, ಧರ್ಮ, ಸಂತರ ಅವಹೇಳನ ತಡೆಯಲು ದೇಶಾದ್ಯಂತ 'ಧರ್ಮನಿಂದನೆ ತಡೆ ಕಾನೂನು' ಜಾರಿಗೊಳಿಸಬೇಕು ಎಂದು ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಆಗ್ರಹಿಸಲಾಯಿತು.**

ಪುಣೆಯಲ್ಲಿ ಆಂದೋಲನದ ಮೂಲಕ ಹಿಂದೂ ಜನಜಾಗೃತಿ ಸಮಿತಿಯಿಂದ ಕೇಂದ್ರ, ಸರಕಾರಕ್ಕೆ ಆಗ್ರಹ !

ಹಿಂದೂ ಸಂತರು ಮತ್ತು ಸಂಪ್ರದಾಯಗಳ ತೇಜೋವಧೆ ಮಾಡುವ 'ಮಹಾರಾಜ್' ಚಲನಚಿತ್ರವನ್ನು ಕೂಡಲೇ ನಿಷೇಧಿಸಿ ! - ಹಿಂದೂ ಜನಜಾಗೃತಿ ಸಮಿತಿಯ ಆಗ್ರಹ

ಭಾರತವು ಸಾಧು-ಸಂತರ ಭೂಮಿಯಾಗಿದೆ. ಸಂತರು ಜಗತ್ತಿನಾದ್ಯಂತ ಸಂಚರಿಸಿ ಭಾರತೀಯ ಸಂಸ್ಕೃತಿ, ಧರ್ಮ, ಜ್ಞಾನ, ಕಲೆ, ಸಭ್ಯತೆ, ಸದಾಚಾರ ಭಗವದ್ ಭಕ್ತಿ ಕಲಿಸಿ ಸಮಾಜಕ್ಕೆ ಆದರ್ಶ ಜೀವನವನ್ನು ನಡೆಸಲು ಪ್ರೋತ್ಸಾಹಿಸುತ್ತಿದ್ದಾರೆ. ಹೀಗಿರುವಾಗ ನಟ ಅಮೀರ್ ಖಾನ್ ಅವರ ಮಗ ಜುನೈದ್ ಖಾನ್ ಹಾಗೆಯೇ 'ಯಶರಾಜ್ ಫಿಲ್ಮ್ಸ್' ಇವರ 'ಮಹಾರಾಜ್'' ಚಲನಚಿತ್ರನಲ್ಲಿ ಸಾಧು ಸಂತರನ್ನು ದುರಾಚಾರಿಗಳು, ಗೂಂಡಾಗಳೆಂದು ಬಿಂಬಿಸಿ ಅವರ ತೇಜೋವಧೆ ಮಾಡಲಾಗಿದೆ.

ಆದ್ದರಿಂದ ಈ ಚಲನಚಿತ್ರವನ್ನು ಕೂಡಲೇ ನಿಷೇಧಿಸಬೇಕು ಎಂದು ಹಿಂದೂ ಜನಜಾಗೃತಿ ಸಮಿತಿಯು ಆಂದೋಲನದ ಮಾಧ್ಯಮದಿಂದ ಆಗ್ರಹಿಸಿದೆ. ಜೂನ್ 12 ರಂದು ಮಧ್ಯಾಹ್ನ 4 ಗಂಟೆಗೆ ಪುಣೆಯ ಕೊಥರೂಡ ಎಂಬಲ್ಲಿನ ಶ್ರೀ ಶಿವಾಜಿ ಮಹಾರಾಜರ ಪುತ್ಥಳಿಯ ಸಮೀಪ ಈ ಆಂದೋಲನ ಮಾಡಲಾಯಿತು. ಈ ಆಂದೋಲನದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ಶ್ರೀ. ಪರಾಗ ಗೋಖಲೆ ಇವರು ಸಹಿತ ಸಮವಿಚಾರಿ ಸಂಘಟನೆಗಳೂ ಪಾಲ್ಗೊಂಡಿದ್ದವು.

ಅಮೀರ್ ಖಾನ್ ಈ ಹಿಂದೆಯೂ 'ಪಿಕೆ' ಚಲನ ಚಿತ್ರದಲ್ಲಿಯೂ ಭಗವಾನ ಶಿವನ ಬಗ್ಗೆ ಅವಹೇಳನಕಾರಿ ದೃಶ್ಯಗಳು, ಆಕ್ಷೇಪಾರ್ಹ ಸಂಭಾಷಣೆಗಳನ್ನು ತೋರಿಸಲಾಗಿತ್ತು.

ಹಿಂದೂ ಸಂತರನ್ನು ಗೂಂಡಾಗಳಂತೆ ತೋರಿಸಲಾಗಿತ್ತು. ಈಗ ಅದನ್ನೇ ಅವರ ಮಗ 'ಮಹಾರಾಜ್' ಚಲನಚಿತ್ರದಲ್ಲೂ ಮಾಡುತ್ತಿದ್ದಾರೆ. 150 ವರ್ಷಗಳ ಹಿಂದೆ ಬ್ರಿಟಿಷರ ಆಳ್ವಿಕೆಯಲ್ಲಿ ನಡೆದ ಘಟನೆಯಿಂದ ಇಂದು ಮತ್ತೊಮ್ಮೆ ಸಾಧುಸಂತರು ಮತ್ತು ವಲ್ಲಭ ಸಂಪ್ರದಾಯದ ಬಗ್ಗೆ ಸುಳ್ಳು ಚಿತ್ರಣವನ್ನು ಸೃಷ್ಟಿಸಲಾಗುತ್ತಿದೆ. ಈ ಚಲನಚಿತ್ರದ ಮೂಲಕ ದೇಶದೆಲ್ಲೆಡೆ ಸಾಧುಸಂತರ ಹಾಗೂ ವಲ್ಲಭ ಸಂಪ್ರದಾಯದ ತೇಜೋವಧೆ ಮಾಡುವ ಷಡ್ಯಂತ್ರ ಮಾಡಲಾಗುತ್ತಿದೆ. ಈ ಚಲನಚಿತ್ರದಲ್ಲಿ ಸಾಧು-ಸಂತರು ದುರಾಚಾರಿಗಳು ಮತ್ತು ಕಾಮುಕರಾಗಿರುತ್ತಾರೆಂದು ಚಿತ್ರಿಸುವ ಮೂಲಕ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರಲು ಪ್ರಯತ್ನಿಸಲಾಗಿದೆ ಮತ್ತು ಆ ಮೂಲಕ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗವಾದರೆ ಜುನೈದ್ ಖಾನ್, ಯಶರಾಜ್ ಫಿಲ್ಮ್ಸ್ ಮತ್ತು ನೆಟ್‌ಫ್ಲಿಕ್ಸ್ ಎಲ್ಲರೂ ಹೊಣೆಯಾಗುತ್ತಾರೆ.

ಜುನೈದ್ ಖಾನ್, ಅಮೀರ್ ಖಾನ್, ಯಶರಾಜ್ ಫಿಲ್ಮ್ಸ್ ಮತ್ತು ನೆಟ್‌ಫ್ಲಿಕ್ಸ್ ಗಳು ಮದರಸಾಗಳಲ್ಲಿ ಮೌಲ್ವಿಗಳಿಂದ ಹುಡುಗರು ಮತ್ತು ಹುಡುಗಿಯರ ಮೇಲಿನ ಲೈಂಗಿಕ ದೌರ್ಜನ್ಯದ ಕುರಿತು ಚಲನಚಿತ್ರವನ್ನು ನಿರ್ಮಿಸುತ್ತದೆಯೇ ಸಣ್ಣ ಮಕ್ಕಳ ಬುದ್ಧಿ ಭ್ರಮಣೆ ಮಾಡಿ ಜಿಹಾದಿ ಕೃತ್ಯಕ್ಕಾಗಿ ಪ್ರಚೋದನೆ ಮಾಡಿ ಅವರಿಂದ ಜಿಹಾದಿ ಕೃತ್ಯಗಳನ್ನು ಮಾಡಿಸಿಕೊಳ್ಳಲಾಗುತ್ತದೆ, ಈ ಬಗ್ಗೆ ಚಲನಚಿತ್ರ ನಿರ್ಮಿಸುವರೇ ? ಚರ್ಚ್ ಅಥವಾ ಚರ್ಚ್ ನಡೆಸುವ ವಸತಿನಿಲಯಗಳಲ್ಲಿ ಕ್ರೈಸ್ತ ಧರ್ಮಗುರುಗಳಿಂದಾಗುವ ಮಕ್ಕಳ ಮತ್ತು ಮಹಿಳೆಯರ ಮೇಲಿನ ದೌರ್ಜನ್ಯದ ಬಗ್ಗೆ ಅವರು ಚಲನಚಿತ್ರವನ್ನು ಮಾಡುತ್ತಾರೆಯೇ ಅಂತಹ ವಿಷಯಗಳ ಮೇಲೆ ಚಲನಚಿತ್ರಗಳನ್ನು ಮಾಡಲು ಬಾಲಿವುಡ್ ಧೈರ್ಯ ಮಾಡುವುದಿಲ್ಲ; ಸರ್ಕಾರ ಹಿಂದೂಗಳ ಸಹನೆಗೆ ಅಂತ್ಯ ಕಾಣಬಾರದು.

# ಅಮ್ಮ ಎನ್ನೋ ಎರಡು ಪದದಲಿ



ಹೆಚ್.ಎಸ್. ಪ್ರತಿಮಾ

• ಉದಯವಾಹಿನಿ, ವಿಶೇಷ

ಕರುಳ ಬಳ್ಳಿಯ ತೊರೆದು ಹೋಗದಿರಿ
ಅಮ್ಮನ ಒಡಲಲ್ಲಿ ಬೆಳೆದದ್ದು ಮರೆಯದಿರಿ
ರೆಕ್ಕೆ ಪುಕ್ಕ ಬಂದ ಮೇಲೆ ಎಲ್ಲವ ತೊರೆಯದಿರಿ
ಕನಸು ನಿಮ್ಮಿಂದ ಕಂಡಿಹರು ಎಂದು ತಿಳಿಯಿರಿ.....
ಭರವಸೆಯ ಮಣ್ಣ ಎಂದಿಗೂ ಮಾಡದಿರಿ
ಅಮ್ಮ ಜನನಕ್ಕೆ ಕಾರಣರಾದವಳು ಅರಿಯಿರಿ
ಮನಕೆ ಮುದವ ಜೀವನದಿ ನೀಡಿದವಳು
ಎಂತಹ ಕಷ್ಟದಲ್ಲೂ ಬಿಡದೆ ಕೈಹಿಡಿದವಳು.....
ಬವ ಬಂದದಲಿ ಪರಿತಪಿಸಿ ಕೊರಗುವರು



ಮಕ್ಕಳುಗಳೇ ಕಡೆಗಣಿಸಿ ಹೋದವರು ಇರುವವರು
ಬಹಳ ನೋವು ನೀಡುತ ಇದ್ದು ನರಳಿಸುತಿಹರು
ಅಮ್ಮ ಎನ್ನುವ ಎರಡು ಪದದಲಿ ಕರೆಯುತಿಹರು......
ಅದಕ್ಕಿರುವ ಬೆಲೆಯ ಕರೆದ ನಂತರ ನೋಡಿರಿ
ಬದುಕು ಭಾವನೆಗಳಲ್ಲಿ ಸಂಬಂಧವು ಒಂದು ತಿಳಿಯಿರಿ
ಉಳಿಸಿಕೊಂಡು ಹೋಗುವುದ ಎಲ್ಲರೂ ಕಲಿಯಿರಿ
ಎಲ್ಲರಲ್ಲೂ ಪ್ರೀತಿ ಪ್ರೇಮವ ಬಯಸುತ ಸಾಗುತಿರಿ.....
ದ್ರೋಹ, ಮೋಸ, ದ್ವೇಷ ದೂರ ಮಾಡಿರಿ
ಆಸೆ- ಆಕಾಂಕ್ಷೆಯ ಗುರಿಯ ಮುಟ್ಟಿರಿ
ಮಾತುಗಳಲಿ ಭಾವನೆಗಳಿಗೆ ಆಸೆ ಇರಲಿ
ನಮ್ಮ ದೇಶ ಉದ್ದಾರವಾಗುವಂತಿರಲಿ....

# ನೃತ್ಯ ಸಂಜೀವಿನಿ ಅಕಾಡೆಮಿಯ ನೃತ್ಯ ಸಂಭ್ರಮ -2024

• ಉದಯವಾಹಿನಿ, ವಿಶೇಷ

**ಯುವಪಥ ಸಭಾಂಗಣದಲ್ಲಿ ನೃತ್ಯ ಸಂಭ್ರಮ-2024' ವಾರ್ಷಿಕೋತ್ಸವ**



ಬೆಂಗಳೂರಿನ ಖ್ಯಾತ ನೃತ್ಯ ಸಂಜೀವಿನಿ ಅಕಾಡೆಮಿಯ ಸ್ಥಾಪಕ ಕಾರ್ಯದರ್ಶಿ ಪರಿಣತ ನೃತ್ಯ ಕಲಾವಿದೆ-ಗುರು ಡಾ. ಎನ್. ಎ. ಫಣಿಮಾಲಾ, ಎರಡು ದಶಕಗಳಿಗೂ ಹೆಚ್ಚಿನ ನೃತ್ಯಶಿಕ್ಷಣದ ಅನುಭವವುಳ್ಳ ನೃತ್ಯ ವಿದುಷಿ. ಅನೇಕ ವಿಶಿಷ್ಟ ನೃತ್ಯರೂಪಕಗಳನ್ನು ರೂಪಿಸಿರುವ ಇವರು, ವರ್ಷವಿಡೀ ಒಂದಲ್ಲ ಒಂದು ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದು, ಅನೇಕ ಸೃಜನಾತ್ಮಕ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದ್ದಾರೆ. ಇಂದು ನೂರಾರು ವಿದ್ಯಾರ್ಥಿಗಳು ಅವರ ಮಾರ್ಗದರ್ಶನದಲ್ಲಿ ತಯಾರಾಗಿ ಉತ್ತಮ ಕಲಾವಿದರಾಗಿ ರೂಪುಗೊಂಡಿದ್ದಾರೆ. ನಾಡಿನಾದ್ಯಂತ 'ನೃತ್ಯ ಸಂಜೀವಿನಿ ಅಕಾಡೆಮಿಯು ಉತ್ತಮ ನೃತ್ಯ ಪ್ರದರ್ಶನಗಳನ್ನು ನೀಡಿದ್ದು ಉದಯೋನ್ಮುಖ ಕಲಾವಿದರಿಗೆ ಪ್ರೋತ್ಸಾಹ ಮತ್ತು ವೇದಿಕೆ ಒದಗಿಸುವಲ್ಲಿ ಆದ್ಯತೆ ನೀಡುತ್ತದೆ. ಗುರು ಫಣಿಮಾಲ ಅವರ ಕಾರ್ಯೋನ್ಮುಖತೆಯ ಆಯಾಮಗಳು ಹಲವಾರು. ಪ್ರತಿವರ್ಷ ನಾಟ್ಯೋತ್ಸವ, ಕಾರ್ಯಾಗಾರ, ಪ್ರಾತ್ಯಕ್ಷಿಕೆ, ಉಪನ್ಯಾಸಗಳನ್ನು ಏರ್ಪಡಿಸುವುದು ''ನೃತ್ಯ ಸಂಜೀವಿನಿ ಅಕಾಡೆಮಿಯ ಪದ್ಧತಿ.

ಹಲವಾರು ನೃತ್ಯ ಪ್ರತಿಭೆಗಳನ್ನು ಪೋಷಿಸುತ್ತಿರುವ ಸಂಸ್ಥೆಯ ವತಿಯಿಂದ ಇದೇ ತಿಂಗಳ 16 ನೇ ತಾ. ಭಾನುವಾರ ಸಂಜೆ 4 ಗಂಟೆಗೆ ಜಯನಗರದ ಯುವಪಥ' ಸಭಾಂಗಣದಲ್ಲಿ 'ನೃತ್ಯ ಸಂಭ್ರಮ- 2024 ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ವಿಶೇಷವಾಗಿ 'ಚಿದ್ರೂಪ ದರ್ಶನಂ' -ನೃತ್ಯರೂಪಕ ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪ್ರಖ್ಯಾತ ವಿಮರ್ಶಕರು-ಚಿಂತಕರು ಎಸ್.ಆರ್.ವಿಜಯಶಂಕರ್, ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಆರ್. ಚಂದ್ರ ಶೇಖರ್ ಮತ್ತು ಪ್ರಖ್ಯಾತ ಲೇಖಕಿ, ಅಂಕಣಕಾರ್ತಿ, ನೃತ್ಯ-ನಾಟಕಗಳ ವಿಮರ್ಶಕರಾದ ವೈ.ಕೆ. ಸಂಧ್ಯಾ ಶರ್ಮ ಪಾಲ್ಗೊಳ್ಳುತ್ತಿದ್ದಾರೆ. ಉದಯೋನ್ಮುಖ ಕಲಾವಿದರ ಈ ನೃತ್ಯ ವೈಭವವನ್ನು ವೀಕ್ಷಿಸಲು ಸರ್ವರಿಗೂ ಸುಸ್ವಾಗತ.

# ದೇಶದ ಪ್ರಗತಿಯ ಬಗ್ಗೆ ಪ್ರತಿಯೊಬ್ಬರಲ್ಲೂ ಅರಿವಿರಬೇಕು ?

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ವಿಕಸಿತ ಭಾರತ -2047 ಕುರಿತ ಕಾರ್ಯ**

ಬರುವ 2047ರ ವೇಳೆಗೆ ಭಾರತ ವಿಶ್ವಗುರು ಸ್ಥಾನದಲ್ಲಿ ನಿಲ್ಲಲಿದ್ದು, ಭಾರತೀಯರಾದ ನಾವು ಹೆಮ್ಮೆಯಿಂದ ಭಾರತೀಯತೆಯನ್ನು ಸಾರುವ ದಿನ ಬಂದಿದೆ ಎಂದು ಮಾಜಿ ರಾಯಭಾರಿ ಡಾ.ದೀಪಕ್ ವೋಹ್ರಾ ಹೇಳಿದ್ದಾರೆ.

ನಗರದ ಆಚಾರ್ಯ ಪಾಠಶಾಲಾ ಶಿಕ್ಷಣ ಸಂಸ್ಥೆಯಲ್ಲಿ ಆಯೋಜಿಸಿದ್ದ ''ವಿಕಸಿತ ಭಾರತ -2047'' ಕುರಿತ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿ ಸಮುದಾಯ ಭಾರತದ ಇತಿಹಾಸ, ಪರಂಪರೆ, ಸಂಸ್ಕೃತಿ, ಸನಾತನ ಧರ್ಮದ ಬಗ್ಗೆ ತಿಳಿವಳಿಕೆ ಹೊಂದಿರಬೇಕು. ಪ್ರಸ್ತುತ ಭಾರತ ವಿಜ್ಞಾನ, ತಂತ್ರಜ್ಞಾನ, ಶಿಕ್ಷಣ, ವೈದ್ಯಕೀಯ, ಸೇನೆ ಒಳಗೊಂಡಂತೆ ಎಲ್ಲಾ ಕ್ಷೇತ್ರಗಳಲ್ಲಿ ಉತ್ಕೃಷ್ಟ ಸ್ಥಾನದಲ್ಲಿದೆ. ದೇಶದ ಪ್ರಗತಿಯ ಬಗ್ಗೆ ಪ್ರತಿಯೊಬ್ಬರೂ ಅರಿವು ಹೊಂದಿರಬೇಕು. ಪ್ರಗತಿಯ ಚಿತ್ರಣದಿಂದಾಗಿ ಭಾರತ ಕುರಿತಾದ ಪರಿಕಲ್ಪನೆ ಬದಲಾಗಿದೆ ಎಂದರು. ಏಪಿಎಸ್ ಸಂಸ್ಥೆಯ ಅಧ್ಯಕ್ಷ ಸಿ. ಎ.ಡಾ. ವಿಷ್ಣು ಭರತ್ ಅಲ್ಲಪಲ್ಲಿ, ಪ್ರಧಾನಮಂತ್ರಿಯವರ ಸಲಹೆಗಾರರಾದ ಆರ್ ಟಿ.ಎನ್ ಉದಯಕುಮಾರ್, ಭಾಸ್ಕರ್, ಪ್ರೊ.ಎ ಪ್ರಕಾಶ್ ಪ್ರಧಾನ ಕಾರ್ಯದರ್ಶಿ ಮತ್ತು ಎ ಎಸ್ ಶ್ರೀಕಾಂತ್ ಮತ್ತಿತರರು ಉಪಸ್ಥಿತರಿದ್ದರು.



# ಮಹಾಭಾರತ

## ಶಲ್ಯ ಪರ್ವ

• ಹಿಂದಿನ ಸಂಚಿಕೆಯಿಂದ

ಸಂಜೆ ಸಮೀಪಿಸುತ್ತಿದ್ದಂತೆ ಕೃಪ ಮುಂತಾದವರು ದ್ವೈಪಾಯನ ಸರೋವರದ ಬಳಿ ಹೋಗಿ ಮೃದುವಾಗಿ ಕರೆಯುತ್ತ, ''ದೊರೆಯೇ, ಮೇಲಕ್ಕೆ ಬಾ. ನಾವುಗಳಿನ್ನೂ ಬದುಕಿದ್ದೇವೆ. ನಾಲ್ವರೂ ಸೇರಿ ಪಾಂಡವರನ್ನು ಸೋಲಿಸೋಣ. ಗೆದ್ದರೆ ನೀನೇ ರಾಜನಾಗುವೆ; ಸೋತರೆ ಹೇಗೂ ವೀರ ಸ್ವರ್ಗವಿದೆ. ಅವರ ಸೈನ್ಯವೂ ಸ್ವಲ್ಪವಿದೆ; ನಮ್ಮ ಹೊಡೆತವನ್ನು ತಾಳಲಾರದು. ನೀನು ಇಲ್ಲಿರಬಾರದು. ನಾಯಕನಾಗಿ ನಮ್ಮನ್ನು ಮುನ್ನಡೆಸಬೇಕು ಎನ್ನಲು, ಅವರ ದನಿಯನ್ನು ಕೇಳಿದ ದುರ್ಯೋಧನನಿಗೆ ಸಂತೋಷವಾಯಿತು. ನೀರಿನೊಳಗಿಂದಲೇ, ನೀವು ಮೂರು ಜನ ಬದುಕಿರುವಿರಿ ಎಂದು ತಿಳಿದು ನನಗೆ ಸಂತೋಷವಾಗಿದೆ. ಪಾಂಡವರ ಮೇಲೆ ನಾನು ಯುದ್ಧಮಾಡುವವನೇ. ಆದರೆ ನನ್ನ ಮೈತುಂಬ ಗಾಯ, ಉರಿ; ಯುದ್ಧಮಾಡಲು ಶಕ್ತಿ ಉಳಿದಿಲ್ಲ. ಮನಸ್ಸಿಗೂ ತುಂಬ ವೇದನೆ. ಇಂದು ಯುದ್ಧಮಾಡಲಾರೆ. ಸಂಜೆಯೂ ಆಯಿತು; ನೀವೂ ದಣಿದಿರುವಿರಿ. ನಿಮ್ಮ ಪ್ರೀತಿಯ ಮಾತುಗಳನ್ನು ಕೇಳಿ ನನ್ನ ಹೃದಯ ತುಂಬಿಬಂದಿದೆ. ಇಷ್ಟೊಂದು ಪ್ರೀತಿಗೆ ಯೋಗ್ಯನಾಗುವುದಕ್ಕೆ ನಾನು ಏನು ಮಾಡಿರುವೆ? ನಿಮ್ಮ ಪ್ರೀತಿ ನನ್ನ ಮೇಲಿದೆ ಎಂಬುದೇ ನನಗೊಂದು ಹೆಮ್ಮೆ. ಆದರೆ, ಈಗ ಕತ್ತಲಾಯಿತು. ಇಂದು ನೀರಿನಲ್ಲಿ ವಿಶ್ರಾಂತಿ ತೆಗೆದುಕೊಳ್ಳುವೆ. ನಾಳೆಗೆ ನನಗೆ ಶಕ್ತಿ ಕೂಡಿರುತ್ತದೆ. ನಾಳೆ ಪಾಂಡವರೊಡನೆ ಯುದ್ಧ ಮಾಡೋಣ. ಎನ್ನಲು, ಅಶ್ವತ್ಥಾಮನು, ''ನಾಳೆಯವರೆಗೆ ಏಕೆ ಸಾಯಬೇಕು ಈಗಲೇ ಯುದ್ಧ ಮಾಡೋಣ ನಾನು ಅವರನ್ನೆಲ್ಲಾ ಕೊಲ್ಲುವೆ. ದುರ್ಯೋಧನ, ಮೇಲೆದ್ದು ಬಾ. ಈಗಲೇ ಯುದ್ಧಮಾಡೋಣ ಎಂದನು. ಅಕಸ್ಮಾತ್ತಾಗಿ ನೀರು ಕುಡಿಯುವುದಕ್ಕಾಗಿ ಅಲ್ಲಿಗೆ ಬಂದಿದ್ದ ಕೆಲವು ಬೇಡರು ಈ ಸಂಭಾಷಣೆಯನ್ನು ಕೇಳಿಸಿಕೊಂಡರು. ತಪ್ಪಿಸಿಕೊಂಡಿರುವ ದುರ್ಯೋಧನನ್ನು ಪಾಂಡವರು ಹುಡುಕುತ್ತಿರುವುದು ಅವರಿಗೆ ಗೊತ್ತಿತ್ತು. ಅವರಿಗೀಗ ದುರ್ಯೋಧನನು ಸರೋವರದಲ್ಲಿರುವುದು ಗೊತ್ತಾಯಿತು. ಈ ಸುದ್ದಿಯನ್ನು ತಿಳಿಸಿದರೆ ಯುಧಿಷ್ಠಿರನಿಂದ ಬಹುಮಾನ ದೊರೆಯುವುದು ಖಂಡಿತ ಎಂದೆನಿಸಿತು. ಅವರು ವೇಗವಾಗಿ ಪಾಂಡವ ಪಾಳೆಯಕ್ಕೆ ಹೋಗಿ ಭೀಮನನ್ನು ಕಂಡು ಈ ವಿಚಾರವನ್ನು ತಿಳಿಸಿದರು. ಸಂತೋಷದಿಂದ ಹುಚ್ಚಾದ ಭೀಮನು ಅವರನ್ನು ಯುಧಿಷ್ಠಿರನ ಬಳಿಗೆ ಕರೆದೊಯ್ದನು. ಸೂಕ್ತ ಬಹುಮಾನವನ್ನು ಅವರಿಗೆ ಕೊಟ್ಟು ಕಳುಹಿಸಿ, ತಕ್ಷಣವೇ ಪಾಂಡವ ವೀರರೆಲ್ಲರೂ ದ್ವೈಪಾಯನ ಸರೋವರದ ಕಡೆಗೆ ಹೊರಟರು. ಕೃಷ್ಣ, ಧೃಷ್ಟದ್ಯುಮ್ನ, ಸಾತ್ಯಕಿ, ದ್ರೌಪದಿಯ ಮಕ್ಕಳು, ಯುಧಾಮನ್ಯು, ಉತ್ತಮೌಜಸ್, ಶಿಖಂಡಿ ಎಲ್ಲರೂ ಪಾಂಡವರ ಜೊತೆಗೆ ನಡೆದರು. ಸಂಜೆಯಾಗುತ್ತ ಬಂದಿತ್ತು; ಸೂರ್ಯ ಇನ್ನೇನು ಮುಳುಗಲಿದ್ದನು. ಇವರು ಬರುತ್ತಿರುವುದು ಅಶ್ವತ್ಥಾಮಾದಿಗಳಿಗೆ ತಿಳಿಯಿತು. ಅವರು, ದೊರೆಯೇ, ಪಾಂಡವರು ಬರುತ್ತಿದ್ದಾರೆ. ನೀನಿರುವ ಸ್ಥಳ ಅವರಿಗೆ ತಿಳಿದಿದೆ. ಇಲ್ಲಿಂದ ಹೋಗುವೆವು ಎನ್ನಲು, ದುರ್ಯೋಧನನು, ''ಹಾಗೆಯೇ ಆಗಲಿ ಎಂದನು.

**ಮುಂದುವರಿಯುವುದು...**

# ಜನಸಂದಣಿ ತಪ್ಪಿಸಲು ತಿರುಪತಿಗೆ ಯಾವ ತಿಂಗಳು ಭೇಟಿ ನೀಡಿದರೆ ಸೂಕ್ತ?

## ■ ವಿಶೇಷವಲ್ಲದ ವಾರಾಂತ್ಯವಿದ್ದರೂ ತಿರುಪತಿ ಜನರಿಗೆ ನೆಚ್ಚಿನ ತಾಣವಾಗಿದೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ವಿಶ್ವವಿಖ್ಯಾತ ಏಳು ಬೆಟ್ಟಗಳ ಒಡೆಯ ತಿಮ್ಮಪ್ಪನ ದರ್ಶನ ಪಡೆಯಲು ವಿವಿಧ ಜಿಲ್ಲೆಗಳು ಮತ್ತು ರಾಜ್ಯಗಳಿಂದ ಮಾತ್ರವಲ್ಲದೆ ವಿದೇಶದಿಂದಲೂ ಹೆಚ್ಚಿನ ಸಂಖ್ಯೆಯ ಭಕ್ತರು ಪ್ರತಿದಿನ ತಿರುಪತಿ ದೇವಾಲಯಕ್ಕೆ ಭೇಟಿ ನೀಡುತ್ತಾರೆ. ತಿರುಪತಿ ಎಂದಾಕ್ಷಣ ಮೊದಲು ನೆನಪಾಗುವುದು ಜನಸಂದಣಿ.

ತಿರುಪತಿ ತಿಮ್ಮಪ್ಪನ ದೇವಸ್ಥಾನ ಯಾವುದೇ ಸಮಯ ಆದರೂ ಭಕ್ತರಿಂದ ತುಂಬಿ ತುಳುಕುತ್ತಿರುತ್ತದೆ. ವಿಶೇಷವಲ್ಲದ ವಾರಾಂತ್ಯವಿದ್ದರೂ ತಿರುಪತಿ ಜನರಿಗೆ ನೆಚ್ಚಿನ ತಾಣವಾಗಿದೆ. ಪ್ರತಿ ಶನಿವಾರ ಮತ್ತು ಭಾನುವಾರ ಬಹುತೇಕರಿಗೆ ರಜೆ ಇರುವುದರಿಂದ ಮತ್ತು ಬ್ಯಾಂಕ್ ಉದ್ಯೋಗಿಗಳಿಗೆ ಎಲ್ಲಾ ಭಾನುವಾರ, ಕೆಲವು ಶನಿವಾರಗಳು ರಜೆ ಇರುವುದರಿಂದ ಅವರು ತಮ್ಮ ಕುಟುಂಬದೊಂದಿಗೆ ತಿರುಪತಿಗೆ ತೆರಳುವುದು ಹೆಚ್ಚು.

> **ಹೀಗಾಗಿ ಫೆಬ್ರವರಿ ಮತ್ತು ನವೆಂಬರ್ ತಿಂಗಳುಗಳಲ್ಲಿ ತಿರುಪತಿಗೆ ಹೋದರೆ ತ್ವರಿತವಾಗಿ ಸ್ವಾಮಿಯ ದರ್ಶನ ಪಡೆಯಬಹುದು ಎನ್ನುತ್ತಾರೆ. ಅಲ್ಲದೆ ಆಂಧ್ರದಲ್ಲಿ ವಿನಾಯಕ ಚತುರ್ಥಿ ದಿನ ಆಂಧ್ರ, ತೆಲಂಗಾಣ ರಾಜ್ಯಗಳ ಜನರು ತಿರುಪತಿಗೆ ಬರುವುದಿಲ್ಲ. ಹಾಗಾಗಿ ಗಣೇಶ ಚತುರ್ಥಿಯ ಸಮಯದಲ್ಲೂ ಜನಸಂದಣಿ ಕಡಿಮೆ ಇರುತ್ತದೆ.**

ತಿರುಪತಿಯಲ್ಲಿ ಜನಸಂದಣಿ ಹೆಚ್ಚಾದಂತೆ ತಿರುಪತಿ ತಿಮ್ಮಪ್ಪನನ್ನು ನೋಡಲು ಸೆಕೆಂಡುಗಳಿಗಿಂತಲೂ ಬಹಳ ಕಡಿಮೆ ಸಮಯ ಸಿಗುತ್ತದೆ. ಗಂಟೆಗಟ್ಟಲೆ ಕಾದ ಭಕ್ತರಿಗೆ ಐದು ಸೆಕೆಂಡ್‌ಗಳ ಕಾಲ ದೇವರನ್ನು ನೋಡುವ ಭಾಗ್ಯ ಸಿಗುವುದಿಲ್ಲ. ಕೆಲವೊಮ್ಮೆ ದೇವರು ಕಣ್ಣಿಗೆ ಕಂಡರೆ ದೊಡ್ಡ ವಿಚಾರ ಎನ್ನುವಷ್ಟು ನೂಕುನುಗ್ಗಲು ಇರುತ್ತದೆ.

ಗಂಟೆಗಟ್ಟಲೆ ಕಾದು ದಿಢೀರನೆ ಅರ್ಧ ಸೆಕೆಂಡ್ ಕೂಡ ನೋಡಲು ಬಿಡದೆ ತಳ್ಳಿ ಬಿಡುತ್ತಾರೆ ಹಿಂದಿರುವ ಭಕ್ತರು. ಹೀಗಾಗಿ ತಿರುಪತಿಗೆ ಪ್ರತಿನಿತ್ಯ ಸಾವಿರಾರು ಜನ ಬರುವುದರಿಂದ ದೇವರ ದರ್ಶನ ಸುಲಭದ ಮಾತಲ್ಲ. ಅಲ್ಲದೆ ಹಬ್ಬ ಹರಿದಿನಗಳು, ವಾರಾಂತ್ಯ ಹಾಗೂ ರಜಾ ದಿನಗಳಲ್ಲಿ ಈ ಸಂಖ್ಯೆ ಲಕ್ಷಕ್ಕೂ ಹೆಚ್ಚಾಗಿರುತ್ತದೆ.

ತಿರುಪತಿಗೆ ಹೋಗಬೇಕಾದರೆ ತಿಂಗಳುಗಟ್ಟಲೆ ಕಾದು ಆನ್ ಲೈನ್‌ನಲ್ಲಿ ಟಿಕೆಟ್ ಕಾಯ್ದಿರಿಸಬೇಕಾದರೂ ಜನಸಂದಣಿಯಲ್ಲಿ ಸಿಲುಕಿಕೊಳ್ಳುವುದು ಅನಿವಾರ್ಯವಾಗಿರುತ್ತದೆ. ಆದರೆ ಕೆಲ ತಿಂಗಳುಗಳಲ್ಲಿ ಹೋದರೆ ಮಾತ್ರ ಜನಸಂದಣಿಯಲ್ಲಿ ಸಿಲುಕಿಕೊಳ್ಳದೆ ಸುಲಭವಾಗಿ ತಿರುಪತಿ ತಿಮ್ಮಪ್ಪನ ದರ್ಶನ ಪಡೆಯಬಹುದು. ಹಾಗಾದರೆ ಆ ತಿಂಗಳು ಯಾವುದು?

ತಿರುಪತಿಯಲ್ಲಿ ಸ್ವಾಮಿಯ ದರ್ಶನಕ್ಕೆ ಫೆಬ್ರವರಿ ಮತ್ತು ನವೆಂಬರ್ ತಿಂಗಳುಗಳು ಸೂಕ್ತ. ಈ ತಿಂಗಳುಗಳಲ್ಲಿ ಸೌಮ್ಯ ವಾತಾವರಣವಿರುತ್ತದೆ. ಇದು ಭಕ್ತರಿಗೆ ಉತ್ತಮ ಅನುಭವವನ್ನು ನೀಡುವುದು ಮಾತ್ರವಲ್ಲದೆ ಯಾವುದೇ ಜನಸಂದಣಿ ಇಲ್ಲದೆ ದರ್ಶನ ಪಡೆಯಬಹುದು. ಬೇಸಿಗೆ ರಜೆಯಲ್ಲಿ ಕಿಕ್ಕಿರಿದು ಭಕ್ತರು ಸ್ವಾಮಿಯ ದರ್ಶನಕ್ಕೆ ಬರುತ್ತಾರೆ. ಈ ವೇಳೆ ದರ್ಶನಕ್ಕೆ ಒಂದೂವರೆ ದಿನ ಬೇಕು. ಉಳಿದಂತೆ ಹಬ್ಬ ಹರಿದಿನ, ಶಾಲೆ ಕಾಲೇಜುಗಳಿಗೆ ರಜೆ, ವಿಶೇಷ ಪೂಜೆ ಇಂತೆಲ್ಲದಕ್ಕೆ ತಿರುಪತಿಯಲ್ಲಿ ಭಕ್ತರ ಸಂಖ್ಯೆ ಹೆಚ್ಚಾಗಿರುತ್ತದೆ.

> **ಅದೇ ರೀತಿ ಪೊಂಗಲ್ ಮತ್ತು ದೀಪಾವಳಿಯಂತಹ ಹಬ್ಬಗಳ ಸಂದರ್ಭದಲ್ಲಿ ತಿರುಪತಿಯಲ್ಲಿ ಜನಸಂದಣಿ ಕಡಿಮೆ ಇರುತ್ತದೆ. ಆದ್ದರಿಂದ ಇಂತಹ ದಿನಗಳಲ್ಲಿ ತಿರುಪತಿ ದೇವಸ್ಥಾನಕ್ಕೆ ಭೇಟಿ ನೀಡಬಹುದು. ಇದರಿಂದ ಸಮಯ ವ್ಯರ್ಥವಾಗುವುದನ್ನು ತಪ್ಪಿಸಬಹುದು. ನೀವೇನಾದರೂ ತಿರುಪತಿಗೆ ಭೇಟಿ ನೀಡಬೇಕು ಅಂದುಕೊಂಡಿದ್ದರೆ ಇದೇ ತಿಂಗಳು ಭೇಟಿ ನೀಡಿ.**

# ಅಪ್ಪು..ಅಪ್ಪುನೇ..ಎಂದ ನೆಟ್ಟಿಗರು: ಯುವರಾಜ ಕುಮಾರ್ ಮೇಲಿನ ಭರವಸೆ ಹುಸಿ ಆಯ್ತಾ?

• ಉದಯವಾಹಿನಿ, ಬೆಂಗಳೂರು

ಕನ್ನಡ 'ಯುವ' ಸಿನಿಮಾ ಮೂಲಕ ಬೆಳ್ಳಿತೆರೆಗೆ ಪಾದಾರ್ಪಣೆ ಮಾಡಿದ ದೊಡ್ಮನೆ ಕುಡಿ 'ಯುವ ರಾಜಕುಮಾರ್' ಅವರ ವೈಯಕ್ತಿಕ ಬಾಳಲ್ಲಿ ಬಿರುಗಾಳಿ ಎದ್ದಿದೆ. ಡಿವೋರ್ಸ್‌ಗಾಗಿ ಯುವ ಕೋರ್ಟ್ ಮೆಟ್ಟಿಲೇರಿದ್ದಾರೆ. ಇಂತದ್ದೊಂದು ಬೆಳವಣಿಗೆ ದೊಡ್ಮನೆ ನಡೆದಿದ್ದು, ಇದೇ ಮೊದಲು.

ಪಾರ್ವತಮ್ಮ ರಾಜಕುಮಾರ್, ಪವರ್ ಸ್ಟಾರ್ ಅಪ್ಪು ಇದ್ದಿದ್ದರೆ ಹೀಗೆ ಆಗಲು ಬಿಡುತ್ತಿರಲಿಲ್ಲ. ಯುವನಿಂದ ದೊಡ್ಮನೆ ಘನೆಗೆ ಕುಂದುಂಟಾಗಿದೆ. ಇನ್ನು ಮುಂದೆ ಅಪ್ಪು ಅವರ ಸ್ಥಾನದಲ್ಲಿ ಬೇರೆ ಯಾರನ್ನು ನೋಡುವುದಿಲ್ಲ ಎಂದು ನೆಟ್ಟಿಗರು ಬೇಸರ ಹೊರ ಹಾಕಿದ್ದಾರೆ.

ಹೌದು, ಹಿಂದಿನಿಂದಲೂ ಹೆಣ್ಣು ಮಕ್ಕಳಿಗೆ ವಿಶೇಷ ಗೌರವ ಕೊಟ್ಟು ಬಂದಿರುವುದು ಡಾ.ರಾಜಕುಮಾರ್ ಕುಟುಂಬ. ಅವರ ಮನೆಯ ಪ್ರತಿ ಸದಸ್ಯರು ಸರಳತೆ, ವಿನಯ, ಅತ್ಯುತ್ತಮ ವ್ಯಕ್ತಿತ್ವಕ್ಕೆ ಹೆಸರಾದವರು. ದೊಡ್ಮನೆಯವರು ಆನ್ ಸ್ಕ್ರೀನ್ ನಲ್ಲಿ ಮಾತ್ರವಲ್ಲದೇ ಆಫ್ ಸ್ಕ್ರೀನ್ ನಲ್ಲೂ ಹಿರೋಗಳಂತೆ ಬದುಕಿದವರು.ಇದೀಗ ಯುವ ರಾಜಕುಮಾರ್ ಅವರು ದೊಡ್ಮನೆಯ ಒಂದಷ್ಟು ಕಟ್ಟುಪಾಡುಗಳನ್ನು ಮುರಿದಿದ್ದಾರೆ. ಪತ್ನಿ ಶ್ರೀದೇವಿ ಅವರಿಗೆ ಡಿವೋರ್ಸ್ ನೋಟಿಸ್ ನೀಡುವ ಮೂಲಕ ರಾಘವೇಂದ್ರ ರಾಜಕುಮಾರ್ ಪುತ್ರ ದೊಡ್ಮನೆಗೆ ಕುಂದು ತಂದಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಹೀಗೆ ಹೇಳಲು ಕಾರಣಗಳು ಸಾಕಷ್ಟಿವೆ. ಡಿವೋರ್ಸ್ ಪ್ರಸ್ತಾಪವಾಗುತ್ತಿದ್ದಂತೆ ಯುವ ಪರ ವಕೀಲರು ಶ್ರೀದೇವಿ ಬಗ್ಗೆ ಕೆಲವು ಆರೋಪ ಮಾಡಿದ್ದರು.


ಉದಯವಾಹಿನಿ ಚಿತ್ರ


ಅಲ್ಲದೇ ದೊಡ್ಮನೆಯಲ್ಲಿ ಇಂತಹ ಘಟನೆಗಳು ಆಗದಂತೆ ಕುಟುಂಬ ಸದಸ್ಯರು ಬುದ್ಧಿವಾದ ಹೇಳಿದ್ದನ್ನು ದಾಟಿ ಯುವ ಕೋರ್ಟ್ ಮೆಟ್ಟಿಲೇರಿರುವುದು ಬೆಳಕಿಗೆ ಬಂದಿದೆ. ಅಲ್ಲಿಗೆ ಯುವ ತಾತ, ಚಿಕ್ಕಪ್ಪ ಹಾಕಿ ಕೊಟ್ಟ ಹಾದಿ ಬಿಟ್ಟು ಬೇರೆ ಹಾದಿ ಹಿಡಿದರೇ ಎಂಬ ಅನುಮಾನ ವ್ಯಕ್ತವಾಗುತ್ತಿದೆ.ಇನ್ನೂ ಪಾರ್ವತಮ್ಮ ಅವರು, ನಟ ಪುನೀತ್ ರಾಜಕುಮಾರ್ ಅವರು ಈಗ ಇದಿದ್ದರೆ ಇಷ್ಟೆಲ್ಲ ಆಗಲು ಬಿಡುತ್ತಲೇ ಇರಲಿಲ್ಲ. ಈಗಲೂ ನಟಿ ಅಶ್ವಿನಿ ಪುನೀತ್ ರಾಜಕುಮಾರ್, ಶಿವರಾಜ್ ಕುಮಾರ್ ಸೇರಿದಂತೆ ಹಲವರು ಯುವನಿಗೆ ಬುದ್ಧಿವಾದ ಹೇಳಿದ್ದರೂ ಅವರು ಕೇಳಿದೇ ಕೋರ್ಟ್ ಮೆಟ್ಟಿಲೇರಿದ್ದಾರೆ ಎಂದು ತಿಳಿದು ಬಂದಿದೆ. ವರನಟ ಡಾ.ರಾಜಕುಮಾರ್ ಅವರು ಹಾಕಿಕೊಟ್ಟ ಹಾದಿಯಲ್ಲೇ ಮನೆಯ ಸದಸ್ಯರು ಬೆಳೆದು ಬಂದಿದ್ದಾರೆ. ನಮ್ಮನ್ನಗಲಿರುವ ಕರ್ನಾಟಕ ರತ್ನ ಪುನೀತ್ ರಾಜ್ ಕುಮಾರ್ ಅವರು ತಮ್ಮ ನಟನೆ, ವಿನಯ, ಸರಳತೆ, ವ್ಯಕ್ತಿತ್ವ ಹಾಗೂ ಸಾಮಾಜಿಕ ಸೇವೆ, ಯಾವುದೇ ಸಣ್ಣ ಗಾಸಿಪ್ ಇಲ್ಲದೇ ಸಿನಿರಂಗದಲ್ಲಿನ ಪಯಣದಿಂದಲೇ ಅಪಾರ ಅಭಿಮಾನಿಗಳನ್ನು ಸಂಪಾದಿಸಿದ್ದಾರೆ. ಇದು ಎಂತವರಿಗೂ ಇಷ್ಟವಾಗುತ್ತದೆ. ಅಪ್ಪು ಅವರ ನಿಧನಾನಂತರ ಅವರ ಉತ್ತರಾಧಿಕಾರಿ ಯುವ ರಾಜ್ ಕುಮಾರ್ ಎಂದೇ ಎಲ್ಲಾ ಅಭಿಮಾನಿಗಳು ಭಾವಿಸಿದ್ದರು. ಹೀಗಾಗಿ 'ಅಪ್ಪು' ಅವರ ಮೊದಲ ಸಿನಿಮಾಗೆ ಸಿಕ್ಕಂತೆ 'ಯುವ' ಅವರ ಮೊದಲ ಸಿನಿಮಾವನ್ನು ಸ್ವಾಗತಿಸಿದ್ದರು. ತಲೆ ಮೇಲಿಟ್ಟುಕೊಂಡು ಸಿನಿಮಾವನ್ನು ಮೆರೆಸಿದರು. ಇನ್ನಿಲ್ಲದ ವಿಶ್ವಾಸ, ನಂಬಿಕೆ ಯುವ ಅವರ ಮೇಲಿತ್ತು. ಆದರೆ ಡಿವೋರ್ಸ್ ವಿಚಾರ ಹಾಗೂ ಅದರಲ್ಲಿ ನಡೆದ ಬೆಳವಣಿಗೆಗಳು ನೆಟ್ಟಿಗರಿಗೆ ಬೇಸರ ತರಿಸಿದೆ. ಅಪ್ಪು ಅವರ ಸ್ಥಾನದಲ್ಲಿ ಯುವ ಅವರನ್ನು ನೋಡಿದ್ದ ಜನರಿಗೆ ದೊಡ್ಮನೆಯಲ್ಲಿ ನಡೆಯುತ್ತಿರುವ ಬೆಳವಣಿಗೆಗಳನ್ನು ನೋಡಲು ಆಗುತ್ತಿಲ್ಲ. ಹೀಗಾಗಿ ಅಪ್ಪು..ಅಪ್ಪುನೇ...ಅವರ ಸ್ಥಾನ ಬೇರಾರು ತುಂಬಲು ಸಾಧ್ಯವಿಲ್ಲ. ನಾವು ನಂಬಿ ಮೋಸ ಹೋದೆವು ಎಂದು ಪೋಸ್ಟ್ ಮಾಡುತ್ತಿದ್ದಾರೆ.

# ಬಸವರಾಜ ಬೊಮ್ಮಾಯಿಗೆ ಸಚಿವ ಸ್ಥಾನ ತಪ್ಪಿದ್ದೇಕೆ?

## ಕೇಂದ್ರ ಸಚಿವ ಸಂಪುಟದಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರಿಗೆ ಸ್ಥಾನ ಸಿಗದಿರುವುದು ಹಾವೇರಿ ಗದಗ ಜನರಲ್ಲಿ ನಿರಾಸೆ

• **ಉದಯವಾಹಿನಿ, ಗದಗ**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಸ್ಥಾನ ಸಿಗದಿರುವುದು ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಜನರಲ್ಲಿ ನಿರಾಸೆ ಮೂಡಿಸಿದೆ. ಲಿಂಗಾಯತ ಕೋಟಾದಲ್ಲಿ ಬೊಮ್ಮಾಯಿ ಅವರಿಗೆ ಕೇಂದ್ರ ಸಚಿವ ಸ್ಥಾನ ಸಿಗಬಹುದು ಎಂಬ ಲೆಕ್ಕಾಚಾರದಲ್ಲಿದ್ದ ಸ್ಥಳೀಯ ಬಿಜೆಪಿ ಮುಖಂಡರು, ಕಾರ್ಯಕರ್ತರಿಗೂ ಬೇಸರ ತರಿಸಿದೆ.



ಲೋಕಸಭಾ ಚುನಾವಣೆಗೆ ಇನ್ನೂ ಪ್ರಚಾರ ನಡೆಸುತ್ತಿರುವ ಸಂದರ್ಭದಲ್ಲಿಯೇ ಪ್ರಧಾನಿ ನರೇಂದ್ರ ಮೋದಿ ಅವರು ಬೊಮ್ಮಾಯಿಗೆ ಪತ್ರ ಬರೆದು ಚುನಾವಣೆಯಲ್ಲಿ ಗೆದ್ದು ಬರುವಂತೆ ಶುಭ ಕೋರಿದ್ದರು. 'ನೀವು ಸಂಸದರಾಗಿ ನನ್ನ ತಂಡ ಸೇರುತ್ತಿರುವುದು ದೊಡ್ಡ ಆಸ್ತಿ' ಎಂದು ತಿಳಿಸಿದ್ದರು. ಬೊಮ್ಮಾಯಿ ಕುರಿತಾಗಿ ಪ್ರಧಾನಿ ಮೋದಿ ಅವರು ಹೇಳಿದ್ದ ಮಾತುಗಳು ಕ್ಷೇತ್ರದ ಜನರಲ್ಲಿ ಹೊಸ ನಿರೀಕ್ಷೆಗಳನ್ನು ಹುಟ್ಟುಹಾಕಿದ್ದವು. ಹಾವೇರಿ ಲೋಕಸಭಾ ಕ್ಷೇತ್ರದಿಂದ ಬೊಮ್ಮಾಯಿ ಅವರನ್ನು ಗೆಲ್ಲಿಸಿದರೆ ಕೇಂದ್ರದಲ್ಲಿ ಸಚಿವ ಆಗುತ್ತಾರೆ. ಹಾವೇರಿ, ಗದಗ ಜಿಲ್ಲೆಗಳಲ್ಲಿ ಅಭಿವೃದ್ಧಿಯ ಪರ್ವ ಶುರುವಾಗುತ್ತದೆ ಎಂದು ಭಾವಿಸಿದ್ದರು.

ಅದರಂತೆ, ಕ್ಷೇತ್ರದ ಮತದಾರರು ಬೊಮ್ಮಾಯಿ ಅವರನ್ನು 45,513 ಮತಗಳ ಅಂತರದಿಂದ ಗೆಲ್ಲಿಸಿದ್ದರು. ಆದರೆ, ಮೈತ್ರಿ ಪಕ್ಷಕ್ಕೆ ಒಂದು ಸ್ಥಾನ ಕೊಟ್ಟಿದ್ದರಿಂದ ಬೊಮ್ಮಾಯಿಗೆ ಮಂತ್ರಿ ಭಾಗ್ಯ ಸಿಗಲಿಲ್ಲ' ಎಂದು ಬಿಜೆಪಿ ನಾಯಕರೊಬ್ಬರು ತಿಳಿಸಿದ್ದಾರೆ. 2024ರ

> **ರಾಜ್ಯದಿಂದ ಗೆಲುವು ಸಾಧಿಸಿರುವ ಬಿಜೆಪಿ- ಜೆಡಿಎಸ್ ಮೈತ್ರಿಕೂಟದ ಸಂಸದರ ಪೈಕಿ ನಾಲ್ಕು ಮಂದಿಗೆ ಮಂತ್ರಿ ಭಾಗ್ಯ ಸಿಕ್ಕಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಪ್ರಲ್ಹಾದ ಜೋಶಿ ಅವರಿಗೆ ಮಾತ್ರ ಸಚಿವ ಸ್ಥಾನ ನೀಡಲಾಗಿದೆ.**

ಲೋಕಸಭಾ ಚುನಾವಣಾ ಫಲಿತಾಂಶ ಪ್ರಕಟಗೊಂಡ ನಂತರ ಸಾಕಷ್ಟು ಬೆಳವಣಿಗೆಗಳು ನಡೆದವು. ಈ ಬಾರಿ 400 ಸ್ಥಾನಗಳನ್ನು ಗೆಲ್ಲುವ ನಿರೀಕ್ಷೆಯಲ್ಲಿದ್ದ ಬಿಜೆಪಿಗೆ 240 ಸ್ಥಾನಗಳಷ್ಟೇ ಸಿಕ್ಕವು. ಇದರಿಂದಾಗಿ ನಾವು ಮೈತ್ರಿ ಪಕ್ಷಗಳ ಜತೆಗೂಡಿ ಸರ್ಕಾರ ರಚಿಸುವ ಅನಿವಾರ್ಯ ಸೃಷ್ಟಿ ಆಯಿತು.

ಕೇಂದ್ರ ಸಚಿವ ಸಂಪುಟ ರಚನೆ ವೇಳೆ ಎಲ್ಲರನ್ನೂ ಸಮಾಧಾನ ಪಡಿಸಬೇಕಾಗುತ್ತದೆ.

ಈ ಕಾರಣದಿಂದಾಗಿ ಬಸವರಾಜ ಬೊಮ್ಮಾಯಿ ಅವರಿಗೆ ಸದ್ಯ ಸಚಿವ ಸ್ಥಾನ ಕೈ ತಪ್ಪಿದೆ. ಆದರೆ,

### ಅವಕಾಶ ಸಿಗುವ ನಿರೀಕ್ಷೆ

**ರಾಜು ಕುರಡಗಿ, ಬಿಜೆಪಿ ಗದಗ ಜಿಲ್ಲಾ ಘಟಕದ ಅಧ್ಯಕ್ಷಬಸವರಾಜ ಬೊಮ್ಮಾಯಿ ಅವರಿಗೆ ಕೇಂದ್ರ ಸಚಿವ ಸ್ಥಾನ ಸಿಗಲಿಲ್ಲ. ಮುಂದೆ ಕೇಂದ್ರ ಸಚಿವ ಅಥವಾ ಅದಕ್ಕೆ ಸಮನಾದ ಬೇರೆ ಯಾವುದರೂ ಸ್ಥಾನಮಾನ ಸಿಗುವ ನಿರೀಕ್ಷೆ ಇದೆ. ಕಾಂತಿಲಾಲ್ ಬನ್ಸಾಲಿ, ಬಿಜೆಪಿ ಹಿರಿಯ ಮುಖಂಡಬಿಜೆಪಿ ಶಾಸಕರು ಇರುವ ಕ್ಷೇತ್ರಗಳಲ್ಲಿಯೇ ಪಕ್ಷದ ಅಭ್ಯರ್ಥಿಗಳಿಗೆ ಹಿನ್ನಡೆ ಆಗಿರುವುದು ಬೇಸರ ತರಿಸಿದೆ. ಬೊಮ್ಮಾಯಿ ಅವರಿಗೆ ಎರಡು ವರ್ಷಗಳ ನಂತರ ಅವಕಾಶ ಸಿಗುವ ನಿರೀಕ್ಷೆ ಇದೆ.**


ಮುಂದಿನ ದಿನಗಳಲ್ಲಿ ಅವರಿಗೆ ಅವಕಾಶ ಸಿಗುವ ನಿರೀಕ್ಷೆ ಇದೆ' ಎನ್ನುತ್ತಾರೆ ಗದಗ ಜಿಲ್ಲೆಯಲ್ಲಿ ಬಿಜೆಪಿಯನ್ನು ತಳಮಟ್ಟದಿಂದ ಕಟ್ಟಿರುವ ಹಿರಿಯ ನಾಯಕ ಕಾಂತಿಲಾಲ ಬನ್ಸಾಲಿ.

ಉತ್ತರ ಕರ್ನಾಟಕ ಭಾಗದಲ್ಲಿ ಪಕ್ಷವನ್ನು ಗೆಲುವಿನ ದಡ ಸೇರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಲಿಂಗಾಯತ ಸಮುದಾಯ ಕಡೆಗಣಿಸಲಾಗಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಬನ್ಸಾಲಿ, ಲಿಂಗಾಯತ ಸಮುದಾಯದಿಂದ ಗೆದ್ದಿರುವ ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್, ಈಗ ಸಚಿವರಾಗಿರುವ ಬ್ರಾಹ್ಮಣ ಸಮುದಾಯದ ಪ್ರಲ್ಹಾದ ಜೋಶಿ ಈ ಮೂವರು ಹುಬ್ಬಳ್ಳಿ ನಿವಾಸಿಗಳು.

ಎಲ್ಲರಿಗೂ ಸಚಿವ ಸ್ಥಾನ ಕೊಟ್ಟರೆ ಒಂದೇ ಊರಿನವರಿಗೆ ಕೊಡುತ್ತೀರೇನು ಎಂಬ ಪ್ರಶ್ನೆಯನ್ನು ಮೇಲಿನವರು ಕೇಳುತ್ತಾರೆ ಎಂಬ ತರ್ಕ ಮುಂದಿಟ್ಟರು.

# ಬಿಸಿಎಂ ಮಹಿಳಾ ವಸತಿನಿಲಯಕ್ಕೆ ದಿಢೀರನೆ ತಾಪಂ.ಇಒ ಭೇಟಿ

• **ಉದಯವಾಹಿನಿ,ಚಿಂಚೋಳಿ**



ಉದಯವಾಹಿನಿ ಚಿತ್ರ

**ಜಿಪಂಗೆ ಪತ್ರ ಬರೆಯಲು ಅಧಿಕಾರಿಗೆ ಸೂಚನೆ**

ಪಟ್ಟಣದ ಚಂದಾಪೂರದ ಬಿಸಿಎಂ ಮಹಿಳಾ ವಸತಿನಿಲಯಕ್ಕೆ ತಾಲ್ಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಂಕರ ರಾಠೋಡ್ ದಿಢಿರನೇ ಭೇಟಿ ನೀಡಿ ವಸತಿನಿಲಯದ ವಿಧ್ಯಾರ್ಥಿನಿಯರ ಕುಡಿಯುವ ನೀರು, ಶೌಚಾಲಯ ಸಮಸ್ಯೆ, ಬಿಸಿನೀರು, ತರಕಾರಿ, ಸೋಲಾರ್ ಸಣ್ಣಪುಟ್ಟ ಕುಂದು ಕೊರತೆಗಳನ್ನು ಆಲಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಲಿನ ವಸತಿನಿಲಯದಲ್ಲಿ 125 ವಿಧ್ಯಾರ್ಥಿನಿಯರು, ಕೆಳಗಡೆ ವಸತಿನಿಲಯದಲ್ಲಿ 125 ವಿಧ್ಯಾರ್ಥಿನಿಯರುವಿದ್ದು, ವಿಧ್ಯಾರ್ಥಿನಿಯರಿಗೆ ಊಟದ ಸಮಸ್ಯೆ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಹೇಳಿದಾಗ ಇಲ್ಲವೆಂದರೂ ಆದರೆ ಕೆಳಗಡೆ ಇರುವ ವಸತಿನಿಲಯದಲ್ಲಿ ಶೌಚಾಲಯ ಸಮಸ್ಯೆವಿದೆ ಹಾಗೂ ಕಟ್ಟಡದ ಸಮಸ್ಯೆ ಎಂದು ವಿಧ್ಯಾರ್ಥಿನಿಯರು ನನ್ನ ಗಮನಕ್ಕೆ ತಂದರು ಆಗ ತಕ್ಷಣ ಬಿಸಿಎಂ ಕಲ್ಯಾಣಾಧಿಕಾರಿ ಅನುಸೋಯಾ ಚವ್ಹಾಣ ರವರಿಗೆ ಜಿಲ್ಲಾ ಪಂಚಾಯತನಲ್ಲಿ ದುರಸ್ತಿಗಾಗಿ ಅನುದಾನವಿದೆ ತಾವು ಜಿಪಂ.ಗೆ ಪತ್ರ ಬರೆದು ಶೌಚಾಲಯ ಮತ್ತು ಕಟ್ಟಡ ದುರಸ್ತಿಗೆ ಅನುದಾನ ನೀಡುವಂತೆ ಪತ್ರ ಬರೆಯಿರಿ ಎಂದು ಸೂಚಿಸಿದ್ದೇನೆ ಎಂದರು. ಇನ್ನು ವಸತಿನಿಲಯಕ್ಕೆ ವಿಧ್ಯಾರ್ಥಿನಿಯರ ದಾಖಲಾತಿ ಆಗಬಹುದು ಮತ್ತು ಮಳೆಗಾಲವಿದೆ ವಸತಿನಿಲಯವು ಸ್ವಚ್ಛತೆಯನ್ನು ಕಾಪಾಡಿಕೋಳ್ಳಿ ವಿಧ್ಯಾರ್ಥಿನಿಯರ ಯಾವುದೇ ಸಮಸ್ಯೆಗಳು ಇರಲಿ ತಕ್ಷಣವೇ ಸ್ವಂದಿಸಿ ಪರಿಹರಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಬಿಸಿಎಂ ಕಲ್ಯಾಣಾಧಿಕಾರಿ ಅನುಸೋಯಾ ಚವ್ಹಾಣ, ವಸತಿನಿಲಯದ ಮೇಲ್ವಾಚಾರಕರು ಮತ್ತು ಅಂಕೀತಾ ಕಮಲಾಕರ್, ಎಂಎಂಕೆ ಅಜರೋದ್ದೀನ್ ಅನೇಕರಿದ್ದರು.

# ತಂತ್ರಾಂಶ ಬದಲು: ಹಣ ಜಮೆ ವಿಳಂಬ

• **ಉದಯವಾಹಿನಿ, ಹುಬ್ಬಳ್ಳಿ**

ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯಡಿ 2023ರ ಏಪ್ರಿಲ್‌ನಿಂದ 2024ರ ಜೂನ್‌ವರೆಗೆ ಜಿಲ್ಲೆಯಲ್ಲಿ 12,189 ಅರ್ಜಿ ಸಲ್ಲಿಕೆಯಾಗಿದೆ. ತಂತ್ರಾಂಶ (ಸಾಫ್ಟ್‌ವೇರ್) ಬದಲಾವಣೆ ಮತ್ತು ಚುನಾವಣಾ ನೀತಿ ಸಂಹಿತೆ ಜಾರಿ ಆಗಿದ್ದರಿಂದ 7,217 ಜನರ ಖಾತೆಗೆ ಹಣ ಜಮೆ ಆಗಬೇಕಿದೆ. ಮೊದಲ ಬಾರಿಗೆ ಗರ್ಭಿಣಿಯಾದವರು 7,582 ಅರ್ಜಿ ಸಲ್ಲಿಸಿದ್ದು, 2,595 ಜನರ ಖಾತೆಗೆ ಹಣ ಜಮೆಯಾಗಿದೆ. ಎರಡನೇ ಮಗು ಪಡೆದ 4,607 ಮಹಿಳೆಯರು ಅರ್ಜಿ ಸಲ್ಲಿಸಿದ್ದು, ಅದರಲ್ಲಿ 2,372 ಜನರ ಖಾತೆಗೆ ಹಣ ಜಮೆ ಆಗಿದೆ. ಈವರೆಗೂ ಒಟ್ಟು 4,967 ಜನರ ಖಾತೆಗೆ 2.20 ಕೋಟಿ ಹಣ ಜಮೆಯಾಗಿದೆ.

ಮೊದಲ ಬಾರಿಗೆ ಗರ್ಭಿಣಿಯಾದವರಿಗೆ 5 ಸಾವಿರ ಮತ್ತು ಎರಡನೇ ಹೆರಿಗೆ ನಂತರ ಹೆಣ್ಣುಮಗು ಜನಿಸಿದ್ದಲ್ಲಿ ಅವರಿಗೆ 6 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತಿದೆ. ಗರ್ಭಿಣಿಯರ ಆರೋಗ್ಯ ವರ್ಧನೆ ಹಾಗೂ ಆರೋಗ್ಯವಂತ ಮಗುವಿನ ಜನನಕ್ಕಾಗಿ ಪ್ರೋತ್ಸಾಹಧನ ನೀಡುವ ಉದ್ದೇಶದಿಂದ ಕೇಂದ್ರ ಸರ್ಕಾರ 2017ರಲ್ಲಿ ಈ ಯೋಜನೆ ಜಾರಿಗೆ ತಂದಿತ್ತು. 2023ರ ಏಪ್ರಿಲ್‌ನಿಂದ ಎರಡನೇ ಮಗು ಹೆಣ್ಣಾಗಿದ್ದಲ್ಲಿ ಅವರಿಗೂ ಪ್ರೋತ್ಸಾಹಧನ ನೀಡುತ್ತಿದ್ದು, ತಂತ್ರಾಂಶದಲ್ಲಿ ಕೆಲ ಬದಲಾವಣೆ ಮಾಡಲು ಸಮಯ ಬೇಕಾಯಿತು. ಆದ್ದರಿಂದ ಹಣ ಜಮೆ ವಿಳಂಬವಾಗಿದೆ' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಧಾರವಾಡ ಜಿಲ್ಲಾ ಉಪನಿರ್ದೇಶಕಿ ಪದ್ಮಾವತಿ ಜಿ ತಿಳಿಸಿದರು.

# ಕೆಸರುಮಯ ರಸ್ತೆಯಲ್ಲಿ ಸಾಗುವ ಸವಾಲು


• **ಉದಯವಾಹಿನಿ, ದಾವಣಗೆರೆ**

ಎಲ್ಲೆಂದರಲ್ಲಿ ಗುಂಡಿಗಳು, ನೋಡೋಣವೆಂದರೂ ಡಾಂಬರು ಸಿಗದಂತಹ ಮಣ್ಣಿನ ಹಾದಿ, ಮಳೆ ಬಂದರೆ ಸಂಪೂರ್ಣ ಕೆಸರು, ಬೇಸಿಗೆಯಲ್ಲಿ ದೂಳೋ ದೂಳು..

ದಾವಣಗೆರೆ – ಮಲೇಬೆನ್ನೂರು ಮಾರ್ಗದ ಮಿಟ್ಲಕಟ್ಟೆ ಬಳಿಯ ಜಿಲ್ಲಾ ಹೆದ್ದಾರಿ ರಸ್ತೆಯ ದುಃಸ್ಥಿತಿ ಇದು. ಇಲ್ಲಿ ವಾಹನ ಚಲಾಯಿಸುವುದೇ ಸವಾರರಿಗೆ ದುಸ್ತರವಾಗಿದೆ. ವಾಹನ ಚಲಾಯಿಸಲು ಭಾರಿ ವಾಹನಗಳ ಚಾಲಕರೇ ಇಲ್ಲಿ ಹರಸಾಹಸ ಪಡುತ್ತಿದ್ದು, ದ್ವಿಚಕ್ರ ವಾಹನ ಸವಾರರ ಪಾಡು ಹೇಳತೀರದು.

ಅಂದಾಜು ಅರ್ಧ ಕಿ.ಮೀ. ರಸ್ತೆಯಲ್ಲಿ 2–3 ವರ್ಷಗಳ ಹಿಂದೆಯೇ ಡಾಂಬರು ಸಂಪೂರ್ಣವಾಗಿ ಕಿತ್ತು ಹೋಗಿದೆ. ಮಳೆ ಬಂದಾಗ ರಸ್ತೆಯಲ್ಲಿ ನೀರು ನಿಲ್ಲುವುದರಿಂದ ಪ್ರವಾಹದ ಸ್ಥಿತಿ ಉಂಟಾಗುತ್ತಿದೆ. ಇಲ್ಲಿ ಸಂಚರಿಸಲು ನಿತ್ಯವೂ ಸಂಕಷ್ಟ ಅನುಭವಿಸುತ್ತಿದ್ದೇವೆ. ಆದರೂ, ಅಧಿಕಾರಿಗಳು, ಜನಪ್ರತಿನಿಧಿಗಳು ರಸ್ತೆ ಅಭಿವೃದ್ಧಿಗೆ ಮುಂದಾಗದಿರುವುದು ಬೇಸರ ತರಿಸಿದೆ' ಎಂದು ವಾಹನ ಸವಾರರು ದೂರುತ್ತಾರೆ.

ದಾವಣಗೆರೆಯಿಂದ ಶಾಮನೂರು ದಾಟಿ ಕಾಲುವೆ ಬರುವವರೆಗೂ ರಸ್ತೆ ಉತ್ತಮವಾಗಿದೆ. ಅರ್ಧ ಕಿ.ಮೀ.



ಉದಯವಾಹಿನಿ ಚಿತ್ರ

**ದಾವಣಗೆರೆಯಿಂದ ಮಿಟ್ಲಕಟ್ಟೆ, ಜರೇಕಟ್ಟೆ, ದೇವರಬೆಳಕೆರೆ, ಎರೆ ಬೂದಿಹಾಳ್, ಮಲೇಬೆನ್ನೂರು ಹಾಗೂ ಇನ್ನಿತರ ಗ್ರಾಮಗಳಿಗೆ ತೆರಳಲು ಈ ರಸ್ತೆಯನ್ನೇ ಮುಖ್ಯವಾಗಿ ಅವಲಂಬಿಸಬೇಕಿದೆ. ಸರ್ಕಾರಿ ಹಾಗೂ ಖಾಸಗಿ ಬಸ್‌ಗಳು, ಆಟೊ, ಕಾರ್, ಬೈಕ್, ಲಾರಿ ಸೇರಿದಂತೆ ನಿತ್ಯವೂ ಇಲ್ಲಿ ಸಾವಿರಾರು ವಾಹನಗಳು ಸಂಚರಿಸುತ್ತವೆ.**

ದಾಟಿದ ಬಳಿಕವೂ ರಸ್ತೆ ಸುಸ್ಥಿತಿಯಲ್ಲಿದೆ. ಆದರೆ, ಮಧ್ಯದಲ್ಲಿ ಮಾತ್ರ ರಸ್ತೆ ಪೂರ್ಣವಾಗಿ ಹದಗೆಟ್ಟಿದ್ದು, ನಿರ್ಲಕ್ಷ್ಯಕ್ಕೆ ಒಳಗಾಗಿದೆ.

ಇಲ್ಲಿ ವಾಹನ ಚಲಾಯಿಸುವಾಗ ಸ್ವಲ್ಪ ಎಚ್ಚರ ತಪ್ಪಿದರೂ, ಅಪಾಯ ಕಟ್ಟಿಟ್ಟಬುತ್ತಿ ಎಂಬ ಸ್ಥಿತಿ ಇದೆ.

# ಶಿಥಿಲಾವ್ಯಸ್ಥೆಯಲ್ಲಿ ಕಟ್ಟಡ: ವಿದ್ಯಾರ್ಥಿಗಳಿಗೆ ಆತಂಕ

• **ಉದಯವಾಹಿನಿ, ಮಸ್ಕಿ**



ಉದಯವಾಹಿನಿ ಚಿತ್ರ

ಪಟ್ಟಣದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಶಿಥಿಲಗೊಂಡ ಕಟ್ಟಡದಲ್ಲಿ ತಾತ್ಕಾಲಿಕವಾಗಿ ನಡೆಯುತ್ತಿರುವ ಸರ್ಕಾರಿ ಐಟಿಐ ಕಾಲೇಜು ವಿದ್ಯಾರ್ಥಿಗಳು ಜೀವಭಯದಲ್ಲಿ ತರಗತಿಗಳಿಗೆ ಹಾಜರಾಗುತ್ತಿದ್ದಾರೆ. ಹತ್ತು ವರ್ಷಗಳ ಹಿಂದೆ ಪಟ್ಟಣದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ಆರಂಭಿಸಿದ ಐಟಿಐ (ಕೈಗಾರಿಕಾ ತರಬೇತಿ ಕೇಂದ್ರ) ಕಾಲೇಜು ಕಟ್ಟಡಕ್ಕೆ ಸ್ವಂತ ಜಾಗ ಇಲ್ಲದ ಕಾರಣ ಸರ್ಕಾರಿ ಪಬ್ಲಿಕ್ ಶಾಲೆಯಲ್ಲಿನ ಶಿಥಿಲಗೊಂಡ ಕಟ್ಟಡದಲ್ಲಿ ತರಗತಿಗಳನ್ನು ನಡೆಸಲು ವ್ಯವಸ್ಥೆ ಕಲ್ಪಿಸಲಾಗಿದೆ.

ಕಟ್ಟಡದ ಚಾವಣಿ ಕುಸಿದು ಬೀಳುತ್ತಿದೆ. ಬೇರೆ ಮಾರ್ಗವಿಲ್ಲದ ಪ್ರಾಚಾರ್ಯರು ಇದೇ ಕಟ್ಟಡದಲ್ಲಿ ವಿದ್ಯಾರ್ಥಿಗಳ ಪಾಠ ಹಾಗೂ ತರಬೇತಿ ನಡೆಸುತ್ತಿದ್ದಾರೆ. ಹಲವಾರು ಬಾರಿ ಕಟ್ಟಡ ಚಾವಣಿಯ ಪದರುಗಳು ಉದುರಿ ಬಿದ್ದು ಸ್ವಲ್ಪದರಲ್ಲಿಯೇ ವಿದ್ಯಾರ್ಥಿಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬೆಂಚ್, ಟೇಬಲ್‌ಗಳು ಮುರಿದಿವೆ. ಮಳೆ ಬಂದರೆ ಸಾಕು ಇಡೀ ಕೊಠಡಿಗಳು ಸೋರುತ್ತವೆ. ಹತ್ತು ವರ್ಷಗಳಿಂದ ಕೈಗಾರಿಕಾ ತರಬೇತಿ ಕೇಂದ್ರ ನಡೆಯುತ್ತಿದ್ದರೂ ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳು ಈ ಕಡೆ ಗಮನ ಹರಿಸದೇ ಇರುವುದಕ್ಕೆ ಸಾರ್ವ ಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಡಮಕ್ಕಳಿಗೆ ಕೈಗಾರಿಕಾ ತರಬೇತಿ ನೀಡಿ ಅವರಿಗೆ ಸ್ವಉದ್ಯೋಗ ಕಲ್ಪಿಸಬೇಕು ಎಂಬ ಉದ್ದೇಶದಿಂದ ಆರಂಭಿಸಿದ ಈ ಕೇಂದ್ರದಲ್ಲಿ ಪ್ರಥ ಮ, ದ್ವಿತೀಯ ವರ್ಷ ಸೇರಿ 80 ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿದ್ದಾರೆ.

### ಈ ಬಗ್ಗೆ ಗಮನ ಹರಿಸುತ್ತಾರೆಯೇ ಎಂದು ಕಾದು ನೋಡಬೇಕು

**ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲ ಸೌಕರ್ಯಗಳು ಇಲ್ಲ. ಪ್ರತಿನಿತ್ಯ ವಿದ್ಯಾರ್ಥಿಗಳು ಸೌಕರ್ಯಕ್ಕಾಗಿ ಪರದಾಡಬೇಕಾಗಿದೆ. ಸ್ವಂತ ಕಟ್ಟಡಕ್ಕೆ ಕವಿತಾಳ ರಸ್ತೆಯಲ್ಲಿ ಭೂಮಿ ಗೊತ್ತು ಮಾಡಲಾಗಿದೆ. ಅದು ಕಾಗದಲ್ಲಿಯೇ ಉಳಿದಿದೆ. ಸೂಕ್ತ ಕಟ್ಟಡ ಹಾಗೂ ಸೌಕರ್ಯಗಳನ್ನು ಒದಗಿಸದಿದ್ದರೆ ತಾಲ್ಲೂಕಿನ ಮಹತ್ವಾಂಕ್ಷೆಯ ಕೈಗಾರಿಕಾ ತರಬೇತಿ ಕೇಂದ್ರ ಮುಚ್ಚುವ ಸಾಧ್ಯತೆ ಅಲ್ಲಗಳೆಯುವಂತಿಲ್ಲ. ಶಾಸಕರು ಹಾಗೂ ಅಧಿಕಾರಿಗಳು ಈ ಬಗ್ಗೆ ಗಮನ ಹರಿಸುತ್ತಾರೆಯೇ ಎಂದು ಕಾದು ನೋಡಬೇಕಾಗಿದೆ.**

# ಕೆಪಿಎಸ್‌ಗೆ ಹೆಚ್ಚುವರಿ ಕೊಠಡಿ ಮಂಜೂರಾತಿಗೆ ಕ್ರಮ: ಶಿವಗಂಗಾ

• **ಉದಯವಾಹಿನಿ, ಸಂತೇಬೆನ್ನೂರು**

ಗ್ರಾಮದಲ್ಲಿ ಪರಿಪೂರ್ಣ ಶಿಕ್ಷಣ ನೀಡಲು ಕರ್ನಾಟಕ ಪಬ್ಲಿಕ್ ಶಾಲೆಗೆ ಬೇಕಾದ ಮೂಲ ಸೌಲಭ್ಯಗಳ ಜತೆ ಶೀಘ್ರ, ಹೆಚ್ಚುವರಿ ಕೊಠಡಿಗಳ ಮಂಜೂರಾತಿಗೆ ಕ್ರಮ ಕೈಗೊಳ್ಳಲಾಗುವುದು' ಎಂದು ಶಾಸಕ ಬಸವರಾಜು ವಿ.ಶಿವಗಂಗಾ ಹೇಳಿದರು. ಇಲ್ಲಿನ ಕರ್ನಾಟಕ ಪಬ್ಲಿಕ್ ಶಾಲೆಗೆ ಮಂಗಳವಾರ ಭೇಟಿ ನೀಡಿ ಅವರು ಮಾತನಾಡಿದರು.



ಉದಯವಾಹಿನಿ ಚಿತ್ರ

ಎಲ್‌ಕೆಜಿಯಿಂದ ದ್ವಿತೀಯ ಪಿಯುವರೆಗೆ ಒಂದೇ ಸೂರಿನಡಿ 1,600 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಪ್ರಾಥಮಿಕ, ಪ್ರೌಢ ಹಾಗೂ ಪಿಯು ಹಂತದ ಶಿಕ್ಷಕರೊಂದಿಗೆ ಸಮಾಲೋಚನೆ ನಡೆಸಿ ಕೊರತೆ ಪಟ್ಟಿ ಮಾಡಲಾಗಿದೆ. ಶುದ್ಧ ನೀರಿನ ಘಟಕ, ಡಿಜಿಟಲ್ ಗ್ರಂಥಾಲಯವನ್ನು ಶೀಘ್ರ ಮಂಜೂರು ಮಾಡಲಾಗುವುದು. ಎಲ್‌ಕೆಜಿ ಇನ್ನೊಂದು ತರಗತಿ ತೆರೆಯಲು ಪ್ರಾಥಮಿಕ ಶಿಕ್ಷಣ ನಿರ್ದೇಶಕರೊಂದಿಗೆ ಮಾತನಾಡಲಾಗಿದೆ. ಒಂದೆರಡು ದಿನಗಳಲ್ಲಿ ಮಂಜೂರಾಗುವ ಭರವಸೆ ಇದೆ. ಬಡ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಸರ್ಕಾರ ಸಕಲ ಸೌಲಭ್ಯ ನೀಡಿದೆ. ಶಿಕ್ಷಕರು ಗುಣಮಟ್ಟದ ಶಿಕ್ಷಣ ನೀಡಿ ಭವಿಷ್ಯ ರೂಪಿಸುವ ಫಲಿತಾಂಶ ತರಬೇಕು' ಎಂದರು.

ಕರ್ನಾಟಕ ಪಬ್ಲಿಕ್ ಶಾಲೆಗೆ ಸೇರಿದ 42 ಎಕರೆ ಜಮೀನಿನ ಬಗ್ಗೆ ಸಾರ್ವಜನಿಕರು ಗಮನ ಸೆಳೆದ ನಂತರ ಪ್ರತಿಕ್ರಿಯಿಸಿ, 'ಜಮೀನಿನ ಎಲ್ಲಾ ದಾಖಲೆಗಳನ್ನು ಸಂಗ್ರಹಿಸಲು ಕಾಲೇಜು ಅಭಿವೃದ್ಧಿ ಸಮಿತಿಗೆ ಸೂಚಿಸಲಾಗಿದೆ. ಆನಂತರ ತಹಶೀಲ್ದಾರ್‌ರೊಂದಿಗೆ ಭೇಟಿ ಮಾಡಿ ಹದ್ದುಬಸ್ತು ಮಾಡಿಸಲಾಗುವುದು. ಸರ್ಕಾರದ ಜಮೀನನ್ನು ಯಾರೂ ತಮ್ಮ ಲಾಭಕ್ಕೆ ಬಳಸಬಾರದು' ಎಂದು ಹೇಳಿದರು.


# ಬಕ್ರೀದ್: ಆಡು-ಕುರಿಗಳಿಗೆ ಬೇಡಿಕೆ

• **ಉದಯವಾಹಿನಿ, ನವಲಗುಂದ**

ಜೂನ್ 17 ರಂದು ಬಕ್ರೀದ್ ಹಬ್ಬವಿದ್ದು ಮುಸ್ಲಿಂ ಸಮುದಾಯದವರಲ್ಲಿ ಭಾರೀ ಸಿದ್ಧತೆ ನಡೆದಿದೆ. ಈ ನಿಟ್ಟಿನಲ್ಲಿ ಕುರಿಗಳಿಗೆ ಬೇಡಿಕೆ ಬಂದಿದೆ. ಎಪಿ ಎಂಸಿ ಮಾರುಕಟ್ಟೆಯಲ್ಲಿಕುರಿ, ಆಡುಗಳ ಮಾರಾಟ ಜೋರಾಗಿದೆ. ಹಳ್ಳಿಯಿಂದ ಪಟ್ಟಣಕ್ಕೆ ತರುವ ಆಡು, ಕುರಿಗಳನ್ನು ಸೂಕ್ತ ಬೆಲೆಗೆ ಮಾರಿ ಸಾಕಾಣೆದಾರರು ಜೇಬು ತುಂಬಿಸಿಕೊಳ್ಳುತ್ತಿದ್ದಾರೆ.

ಈ ಬಾರಿಯಂತೂ ಮನೆಯಲ್ಲಿ ಸಾಕಿದ ಕುರಿ ಮಾರುಕಟ್ಟೆಯಲ್ಲಿ ಬೇಡಿಕೆ ಬಂದಿದೆ.

ಕುರಿಗಳನ್ನು ಕೊಂಡೊಯ್ಯಲು ಬೇರೆ ಬೇರೆ ಜಿಲ್ಲೆಗಳಿಂದ ಗ್ರಾಹಕರು ಬರುತ್ತಿದ್ದಾರೆ. ಕಳೆದು ತಿಂಗಳು 7 ಸಾವಿರದಿಂದ 8 ಸಾವಿರವರೆಗೆ ಮಾ



ಉದಯವಾಹಿನಿ ಚಿತ್ರ

ರಾಟವಾಗಿದ್ದ ಕುರಿಗಳು ಈ ವಾರ 40 ಸಾವಿರದಿಂದ 45 ಸಾವಿರವರೆಗೆ ಮಾರಾಟವಾವೆ.

ಬೇರೆ ಬೇರೆ ಜಿಲ್ಲೆಗಳಿಂದಲೂ ರೈತರು ಆಗಮಿಸಿ ಇಲ್ಲಿನ ಮಾರುಕಟ್ಟೆಯಲ್ಲಿ ಹೆಚ್ಚಿನ ಲಾಭಗಿಟ್ಟಿಸಿಕೊಳ್ಳುತ್ತಿದ್ದಾರೆ.

ಕುರಿಗಳ ಸಂತೆಯಲ್ಲಿ ಎಷ್ಟೇ ದರವಿದ್ದರೂ ಖರೀದಿದಾರರು ಖರೀದಿಸುತ್ತಿದ್ದಾರೆ. ಒಟ್ಟಿನಲ್ಲಿ ತ್ಯಾಗ, ಬಲಿದಾನದ ಸಂಕೇತವಾಗಿ ನಡೆಸುವ ಬಕ್ರೀದ್ ಹಬ್ಬದ ಹಿನ್ನೆಲೆ ಆಡು-ಕುರಿ ವ್ಯಾಪಾರಿಗಳಿಗೆ ಲಾಭವನ್ನು ತಂದುಕೊಟ್ಟಿದೆ.

### ಗೋಹತ್ಯೆ ನಿಷೇಧ ಕಾನೂನು

**ರಾಜ್ಯದಲ್ಲಿ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಾರ್ವತ್ರಿಕ ಅಧಿನಿಯಮ ಜಾರಿಯಾಗಿದೆ. ದನ, ಎತ್ತು, ಕೋಣಗಳ ಬಲಿ ಕೊಡುವುದಕ್ಕೆ ಜನ ಹಿಂದೇಟು ಹಾಕುತ್ತಿದ್ದಾರೆ. ಹಿಂದೆ ಬಕ್ರೀದ್ ಸಂದರ್ಭ ದನ, ಎತ್ತು ಖರೀದಿ ಮಾಡುತ್ತಿದ್ದ ಹೆಚ್ಚಿನವರು ಈ ಬಾರಿ ಆಡು, ಕುರಿ ಖರೀದಿಸುವುದರಿಂದ ಬೇಡಿಕೆ ಹೆಚ್ಚಾಗಿದೆ ಎನ್ನಲಾಗುತ್ತಿದೆ.**

# ಅವ್ಯವಸ್ಥೆಯ ತಾಣವಾದ ಹೊಳೆ ಆಲೂರು

• **ಉದಯವಾಹಿನಿ, ಹೊಳೆ ಆಲೂರು**

ಯೆಚ್ಚರೇಶ್ವರ ಸ್ವಾಮೀಜಿ ಪಾವನ ಕ್ಷೇತ್ರ ಎಂದೇ ಹೆಸರಾದ ಗ್ರಾಮ ಹೊಳೆಆಲೂರು ಇಂದು ಅಕ್ಷರಶಃ ಕೊಳಚೆ ಪ್ರದೇಶವಾಗಿದೆ. ಗ್ರಾಮದ ಜನಸಂಖ್ಯೆ, ವ್ಯಾಪ್ತಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಆದರೆ, ಗ್ರಾಮದ ಬೆಳವಣಿಗೆಗೆ ತಕ್ಕಂತೆ ಮೂಲಸೌಕರ್ಯ ಕಲ್ಪಿಸುವಲ್ಲಿ ಗ್ರಾಮ ಪಂಚಾಯ್ತಿ ವಿಫಲವಾಗಿದೆ. ಗ್ರಾಮದ ಸಂತೆ ಬಜಾರ್‌ನಿಂದಾಗಿ ಪ್ರತಿ ಶುಕ್ರವಾರ ಗ್ರಾಮದಲ್ಲಿ ವಿಪರೀತ ಎನ್ನುವಷ್ಟು ಸಂಚಾರ ಸಮಸ್ಯೆಯಾಗುತ್ತಿದ್ದರೂ ಗ್ರಾಮ ಪಂಚಾಯ್ತಿ ಮಾತ್ರ ವಾರದ ಸಂತೆ ಸ್ಥಳಾಂತರಿಸಲು ಸಿದ್ಧವಿಲ್ಲ.

ಸಂತೆ ಬಜಾರ್‌ನ ಶೌಚಾಲಯಗಳು ಗಬ್ಬೆದ್ದು ನಾರುತ್ತಿದ್ದರೂ ಪಂಚಾಯ್ತಿ ಆಡಳಿತ ವ್ಯವಸ್ಥೆ ಮಾತ್ರ ತಲೆಕೆಡಿಸಿಕೊಳ್ಳುತ್ತಿಲ್ಲ. ಪಕ್ಕದಲ್ಲಿ ಸರ್ಕಾರಿ ಶಾಲೆ ಇದ್ದು, ಗ್ರಾಮದ ವ್ಯಾಪಾರಸ್ಥರು, ಶಾಲಾ ವಿದ್ಯಾರ್ಥಿಗಳು ಮೂಗು ಮುಚ್ಚಿಕೊಂಡು ಓಡಾಡಬೇಕಾದ ಪರಿಸ್ಥಿತಿ ಇದೆ. ಗ್ರಾಮದ ಮಧ್ಯಭಾಗದಲ್ಲಿರುವ ರೈಲ್ವೆ ಕೆಳಸೇತುವೆ ಮಳೆನೀರಿನಿಂದ ತುಂಬಿದ್ದು ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳನ್ನು ಹರಡುವ ತಾಣವಾಗಿದೆ. ಆದರೂ, ಸ್ಥಳೀಯ ಆಡಳಿತ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಲು ಕ್ರಮ ಕೈಗೊಳ್ಳುತ್ತಿಲ್ಲ. ವಾಹನ ಸವಾರರು, ಪಾದಚಾರಿಗಳು ಕೊಳಚೆ ನೀರಿನಲ್ಲಿ ಹಾದು ಹೋಗಬೇಕಾಗಿದೆ.

ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಮೇಘರಾಜ ನಗರಕ್ಕೆ ಹೋಗುವ 8ನೇ ವಾರ್ಡ್ ರಸ್ತೆ ಕೂಡ ಸಂಪೂರ್ಣ ಹಾಳಾಗಿದ್ದು, ದ್ವಿಚಕ್ರ ವಾಹನಗಳು ಅಪಘಾತಕ್ಕೆ ಒಳಗಾಗುತ್ತಿವೆ. ಮಳೆಗಾಲದಲ್ಲಿ ಸಮಸ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದ್ದು, ಕೂಡಲೇ ಗ್ರಾಮ ಪಂಚಾಯ್ತಿ ಇತ್ತಕಡೆ ಗಮನ ಹರಿಸಬೇಕು ಎಂಬುದು ಗ್ರಾಮಸ್ಥರ ಆಗ್ರಹವಾಗಿದೆ.

# ಗಬ್ಬೆದ್ದು ನಾರುವ ತಾಲ್ಲೂಕು ಆಡಳಿತ ಕಚೇರಿಯ ಶೌಚಾಲಯ

## ಸ್ವಚ್ಛತೆ ಇಲ್ಲದೇ ಗಬ್ಬೆದ್ದು ಹೋಗಿರುವ ಶೌಚಾಲಯಗಳು, ಅರ್ಧಭಾಗ ಮುರಿದು ಹೋಗಿರುವ ಶೌಚಾಲಯದ ಕೊಠಡಿಗಳ ಬಾಗಿಲು

• **ಉದಯವಾಹಿನಿ, ಹೊನ್ನಾಳಿ**

ತಾಲ್ಲೂಕಿನ ಜನತೆಗೆ ಸ್ವಚ್ಛತೆಯ ಪಾಠ ಹೇಳುವ ತಾಲ್ಲೂಕು ಆಡಳಿತ ತನ್ನ ಕಚೇರಿಯಲ್ಲಿನ ಶೌಚಾಲಯಗಳ ಸ್ಥಿತಿಗತಿಯನ್ನು ಮರೆತಿದೆ. ಸ್ವಚ್ಛತೆ ಇಲ್ಲದೇ ಗಬ್ಬೆದ್ದು ಹೋಗಿರುವ ಶೌಚಾಲಯಗಳು, ಅರ್ಧಭಾಗ ಮು ರಿದುಹೋಗಿರುವ ಶೌಚಾಲಯದ ಕೊಠಡಿಗಳ ಬಾಗಿಲುಗಳು ತಾಲ್ಲೂಕು ಆಡಳಿತದ ಅನೈರ್ಮಲ್ಯವನ್ನು ಎತ್ತಿ ತೋರುತ್ತದೆ.

ಶೌಚದ ಕೊಠಡಿಗಳು ಸಂಪೂರ್ಣ ಕೆಂಪು, ಹಳದಿ ಹಾಗೂ ಕಪ್ಪು ಬಣ್ಣಕ್ಕೆ ತಿರುಗಿವೆ. ಇನ್ನು ಕೈ ತೊಳೆದುಕೊಳ್ಳುವ ಸಿಂಕುಗಳಿಂದ ನೀರು ಸೋರಿಕೆಯಾಗುತ್ತಿದ್ದು, ಅವುಗಳಿಂದ ಸಣ್ಣ ಪ್ರಮಾಣದಲ್ಲಿ ಹರಿದು ಹೋಗುವ ನೀರನ್ನು ತಡೆಗಟ್ಟುವ, ನಿಯಂತ್ರಿಸುವ ಕೆಲಸಕ್ಕೆ ಕಚೇರಿಯ ಸಿಬ್ಬಂದಿ ಮುಂದಾಗದಿರುವುದು ಸೋಜಿಗದ ಸಂಗತಿ. ಇನ್ನು ಮೂತ್ರಾಲಯಕ್ಕೆ ಹೋಗಲು ಪುರುಷರಿಗೆಂದೇ ಮೀಸಲಾಗಿರುವ ಜಾಗಗಳಲ್ಲಿ ನೀರಿನ ಪೂರೈಕೆ ಇಲ್ಲ ಎನ್ನುವ ದೂರುಗಳು ಕೇಳಿಬಂದಿವೆ. ಮೂತ್ರಕ್ಕೆ ಹೋಗದಂತೆ ಅಡ್ಡಲಾಗಿ



ಉದಯವಾಹಿನಿ ಚಿತ್ರ

ಅನುಪಯುಕ್ತ ವಸ್ತುಗಳನ್ನು ಇಟ್ಟಿರುವುದರಿಂದ ಅಲ್ಲಿಗೆ ಯಾರೂ ಹೋಗಲಾಗುತ್ತಿಲ್ಲ. ತಾಲ್ಲೂಕು ಕಚೇರಿಯಲ್ಲಿ ಒಟ್ಟು ನಾಲ್ಕು ಮೂತ್ರಾಲಯಗಳಿದ್ದು, ಒಂದನ್ನು ಮಹಿಳೆಯರಿಗೆ ಮೀಸಲಿರಿಸಲಾಗಿದೆ. ಅಲ್ಲಿ ಅಷ್ಟೊಂದು ಸಮಸ್ಯೆ ಇಲ್ಲ ಎನ್ನಲಾಗಿದೆ. ಖಜಾನೆ ಶಾಖೆ ಸಿಬ್ಬಂದಿಗೆ ಮೀಸಲಿರುವ ಇನ್ನೊಂದು ಶೌಚಾಲಯದಲ್ಲೂ ಸಮಸ್ಯೆ ಇದೆ.

ಡಿ. ದರ್ಜೆ ನೌಕರರಿಂದ ತಹಶೀಲ್ದಾರ್‌ವರೆಗಿನ ಸುಮಾರು 29 ಸಿಬ್ಬಂದಿ ಕಚೇರಿಯಲ್ಲಿ ಇದ್ದಾರೆ. ಕಚೇರಿಗೆ ಆಗಾಗ್ಗೆ ಬಂದು ಹೋಗುವ ಗ್ರಾಮ ಲೆಕ್ಕಾಧಿಕಾರಿಗಳು, ಕಂದಾಯ ನಿರೀಕ್ಷಕರು ಸೇರಿ ಒಟ್ಟು 40 ಸಿಬ್ಬಂದಿ ಈ ಶೌಚಾಲಯಕ್ಕೆ ಬಂದು ಹೋಗುತ್ತಾರೆ. ಬಹುತೇಕ ಸಿಬ್ಬಂದಿ ಅನಿವಾರ್ಯವಾಗಿ ಮೂಗು ಮುಚ್ಚಿಕೊಂಡು ಮೂತ್ರಕ್ಕೆ ಮತ್ತು ಶೌಚಕ್ಕೆ ಹೋಗುತ್ತಿರುವುದು ಕಂಡು ಬರುತ್ತಿದೆ. ಈ ಕಚೇರಿಯ ಹಿರಿಯ ಅಧಿಕಾರಿಗಳಾದ ಗ್ರೇಡ್- 2 ತಹಶೀಲ್ದಾರ್ ಹಾಗೂ ಶಿರಸ್ತೇದಾರ್‌ಗಳು ಶೌಚಾಲಯದ ಸ್ವಚ್ಛತೆ ಬಗ್ಗೆ ನಿರ್ಲಕ್ಷ್ಯ ತೋರಿರುವುದು ಅಚ್ಚರಿಯ ಸಂಗತಿ.

> **ಸಮಸ್ಯೆ ಸರಿಪಡಿಸುವವರಾರು ಮಿನಿ ವಿಧಾನಸೌಧದಲ್ಲಿರುವ ಶೌಚಾಲಯದ ಸ್ಥಿತಿಯನ್ನು ನಾನು ಕಣ್ಣಾರೆ ನೋಡಿದ್ದೇನೆ. ಅಲ್ಲಿ ಸ್ವಚ್ಛತೆ ಇಲ್ಲ ನಲ್ಲಿಗಳಲ್ಲಿ ನೀರಿಲ್ಲ. ನೀರಿನ ಪೈಪ್‌ಲೈನ್ ಗಳು ಸರಿ ಇಲ್ಲ. ಇಷ್ಟೆಲ್ಲ ಸಮಸ್ಯೆಗಳಿದ್ದರೂ ಅಲ್ಲಿ ಕೆಲಸ ಮಾಡುತ್ತಿರುವ ನೌಕರರು ಕಣ್ಣುಮುಚ್ಚಿ ಕೊಂಡು ಹೋಗಿ ಬರುತ್ತಿದ್ದಾರೆ. ಹಾಗಾದರೆ ಇದನ್ನು ಸರಿಪಡಿಸುವವರಾರು**
> **-ಎಂ. ವಾಸಪ್ಪ, ಮಾಜಿ ಸೈನಿಕ ಹೊನ್ನಾಳಿ**

> **ತಾಲ್ಲೂಕು ಕಚೇರಿಯಲ್ಲಿನ ಶೌಚಾಲಯವನ್ನು ಸ್ವಚ್ಛ ಮಾಡುವಂತೆ ಆಗಾಗ್ಗೆ ಪುರಸಭೆಯ ಆರೋಗ್ಯ ನಿರೀಕ್ಷಕರಿಗೆ, ಕಿರಿಯ ಎಂಜಿನಿಯರ್‌ಗೆ ಪತ್ರ ಬರೆದರೂ ಏನೂ ಪ್ರಯೋಜನವಾಗುತ್ತಿಲ್ಲ.**
> **-ಸುರೇಶ್‌ನಾಯ್ಕ, ಗ್ರೇಡ್- 2 ತಹಶೀಲ್ದಾರ್**

ತಹಶೀಲ್ದಾರ್ ಕೊಠಡಿಯಲ್ಲಿ ಪ್ರತ್ಯೇಕ ಶೌಚಾಲಯ ಇರುವುದರಿಂದ ಅವರಿಗೆ ಸಿಬ್ಬಂದಿ ಬಳಸುವ ಶೌಚಾಲಯದ ವಾಸ್ತವ ಸ್ಥಿತಿ ಗಮನಕ್ಕೆ ಬಂದಿಲ್ಲ. ಈ ವಿಷಯವನ್ನು ಗ್ರೇಡ್–2 ತಹಶೀಲ್ದಾರ್ ಆಗಲಿ ಅಥವಾ ಶಿರಸ್ತೇದಾರ್ ಆಗಲಿ ತಹಶೀಲ್ದಾರ್ ಗಮನಕ್ಕೆ ತರುವ ಕೆಲಸ ಮಾಡಬಹುದಿತ್ತು ಎನ್ನುವ ಒತ್ತಾಯ ಸಿಬ್ಬಂದಿಯದ್ದು.

**ಕುಡಿಯುವ ನೀರಿನ ವ್ಯವಸ್ಥೆ ಇಲ್ಲ:** ನಿತ್ಯ ತಾಲ್ಲೂಕು ಕಚೇರಿಗೆ ಬಂದು ಹೋಗುವ ಸಿಬ್ಬಂದಿಗೆ ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ.

> **ಶೌಚಾಲಯ ಸ್ವಚ್ಛ ಮಾಡುವ ಕುರಿತು ತಾಲ್ಲೂಕು ಕಚೇರಿಯಿಂದ ಪುರಸಭೆಗೆ ಪತ್ರ ಬಂದಿರುವ ಬಗ್ಗೆ ನನಗೆ ಮಾಹಿತಿ ಇಲ್ಲ**
> **-ಹರ್ಷವರ್ಧನ್, ಕಿರಿಯ ಆರೋಗ್ಯ ನಿರೀಕ್ಷಕ ಪುರಸಭೆ ಹೊನ್ನಾಳಿ**

ಕಚೇರಿಯಲ್ಲಿ ತಹಶೀಲ್ದಾರ್ ಇದ್ದಾಗ ಮಾತ್ರ ಕಾಣಿಸಿಕೊಳ್ಳುವ ಜವಾನರು, ಅವರು ಇಲ್ಲದಿದ್ದಾಗ ಕಾಣೆಯಾಗಿರುತ್ತಾರೆ ಎನ್ನುವ ಆರೋಪ ಸಾರ್ವಜನಿಕರದ್ದು. ತಾಲ್ಲೂಕು ಕಚೇರಿ ಸೇರಿ ಶೌಚಾಲಯದ ಸ್ವಚ್ಛತೆ, ಕುಡಿಯುವ ನೀರು, 'ಡಿ' ದರ್ಜೆ ಮತ್ತು ವಾಹನ ಚಾಲಕರ ಇತಿಮಿತಿಗಳ ಬಗ್ಗೆ ಕಚೇರಿಯ ಶಿರಸ್ತೇದಾರ್, ಇಲ್ಲವೇ ಗ್ರೇಡ್–2 ತಹಶೀಲ್ದಾರ್‌ಗಳು ತಮ್ಮ ಮೇಲಧಿಕಾರಿಗಳ ಗಮನಕ್ಕೆ ತರಬೇಕು ಎನ್ನುವ ಅಭಿಪ್ರಾಯಗಳು ಸಾರ್ವಜನಿಕ ವಲಯದಿಂದ ಕೇಳಿಬಂದಿವೆ.

ಹೊನ್ನಾಳಿ ತಾಲ್ಲೂಕು ಕಚೇರಿಯಲ್ಲಿ ಪುರುಷರು ಮೂತ್ರಕ್ಕೆ ಹೋಗಬೇಕಾದ ಜಾಗದಲ್ಲಿ ಉಪಯುಕ್ತ ವಸ್ತುಗಳನ್ನು ಇಟ್ಟಿರುವುದು.

## ಮಿನಿ ನ್ಯೂಸ್

### ಹಣ ಕಳೆದುಕೊಂಡವರ ನೆರವಿಗೆ ಸರ್ಕಾರ ಧಾವಿಸಲಿ

• **ಉದಯವಾಹಿನಿ, ಮಂಗಳೂರು**

ಹಣ ಹೂಡಿಕೆ ಮಾಡಿದರೆ ಹೆಚ್ಚು ಬಡ್ಡಿ ನೀಡುವುದಾಗಿ ನಂಬಿಸಿ ಕೆಲವು ಕಂಪನಿಗಳು ಗ್ರಾಹಕರಿಗೆ ಲಕ್ಷಾಂತರ ರೂಪಾಯಿ ವಂಚಿಸಿವೆ. ಇಂತಹ ಪ್ರಕರಣಗಳ ತನಿಖೆಯನ್ನು ಸಿಬಿಐಗೆ ವಹಿಸಬೇಕು. ವಂಚನೆ ಎಸಗಿರುವ ಆರೋಪಿಗಳನ್ನು ತಕ್ಷಣವೇ ಬಂಧಿಸಬೇಕು' ಎಂದು ಸಂತ್ರಸ್ತರು ಆಗ್ರಹಿಸಿದ್ದಾರೆ. ಲಕ್ಷಾಂತರ ಗ್ರಾಹಕರನ್ನು ವಂಚಿಸುವ ಇಂತಹ ಹಣಕಾಸು ದಂಧೆಯನ್ನು ನಿಗ್ರಹಿಸಲು ಸರ್ಕಾರ ಬಲವಾದ ಕಾನೂನು ರೂಪಿಸಬೇಕು. ಸಂತ್ರಸ್ತ ಗ್ರಾಹಕರಿಗೆ ಹಣ ಮರಳಿಸಲು ಸರ್ಕಾರ ಕ್ರಮ ವಹಿಸಬೇಕು' ಎಂದು ಸಂತ್ರಸ್ತರು ಒತ್ತಾಯಿಸಿದರು.

ಇಲ್ಲಿ ಸುದ್ದಿಗೋಷ್ಠಿಯಲ್ಲಿ ಸಂತ್ರಸ್ತರ ಪರವಾಗಿ ಮಂಗಳವಾರ ಮಾತನಾಡಿದ ತುಳುನಾಡ ರಕ್ಷಣಾ ವೇದಿಕೆಯ ಯೋಗೀ ಶ್ ಶೆಟ್ಟಿ ಜೆಪ್ಪು, ಅಂಗವಿಕಲರೂ ಆಗಿರುವ ಹಿರಿಯ ನಾಗರಿಕ ಆರ್. ಬಾಲಚಂದರ್ ಬಲ್ಮಠದಲ್ಲಿ ಶಾಖಾ ಕಚೇರಿ ಹೊಂದಿದ್ದ ಕೆನರಾ ಫಿಶ್ ಆಯಂಡ್ ಫಾರ್ಮರ್ ಕಂಪನಿಯಲ್ಲಿ 4 ಲಕ್ಷ ಹಣ ಹೂಡಿಕೆ ಮಾಡಿ ದ್ದರು. ಈ ಕಂಪನಿ ಕಳೆದ ತಿಂಗಳು ಮುಚ್ಚಿದೆ. ಇವರಂತೆಯೇ 120 ಗ್ರಾಹಕರು ವಂಚನೆಗೆ ಒಳಗಾಗಿದ್ದಾರೆ. ಈ ಬಗ್ಗೆ ಕದ್ರಿ ಠಾಣೆಯಲ್ಲಿ ಎಫ್‌ಐಆರ್ ಕೂಡ ದಾಖಲಾಗಿದೆ. ಕಂಪನಿ ಬಾಗಿಲು ಹಾಕುವ ಮುನ್ಸೂಚನೆ ಸಿಕ್ಕಿದ ತಕ್ಷಣವೇ ಮಾಹಿತಿ ನೀಡಿದರೂ ಆರೋಪಿಗಳ ಬಂಧನಕ್ಕೆ ಕ್ರಮವಹಿಸಿಲ್ಲ' ಎಂದು ಆರೋಪಿಸಿದರು.

### ಎಫ್‌ಐಆರ್ ಹಿಂಪಡೆಯದಿದ್ದರೆ ಹೋರಾಟ: ಬಿಜೆಪಿ ಎಚ್ಚರಿಕೆ

• **ಉದಯವಾಹಿನಿ, ಮಂಗಳೂರು**

ಅಮಾಯಕರ ವಿರುದ್ಧ ಪ್ರಕರಣ ದಾಖಲಿಸುವ ಪರಿಪಾಟವನ್ನು ರಾಜ್ಯ ಸರ್ಕಾರ ಮುಂದುವರಿಸಿದೆ. ನರೇಂದ್ರ ಮೋದಿಯವರು ಮೂ ರನೇ ಸಲ ಪ್ರಧಾನಿಯಾಗಿದ್ದಕ್ಕೆ ಬೋಳಿಯಾರ್‌ನಲ್ಲಿ ಏರ್ಪಡಿಸಿದ್ದ ವಿಜಯೋತ್ಸವದಲ್ಲಿ ಪಟಾಕಿ ಸಿಡಿಸಿ, ಭಾರತ್ ಮಾತಾ ಕಿ ಜೈ ಎಂದು ಘೋಷಣೆ ಕೂಗಿದವರ ವಿರುದ್ಧವೂ ಎಫ್‌ಐಆರ್ ದಾಖಲಿಸಲಾಗಿದೆ' ಎಂದು ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ ಕುಂಪಲ ಆರೋಪಿಸಿದರು.

ಬೋಳಿಯಾರ್ ವಿಜಯೋತ್ಸವದಲ್ಲಿ ಪಟಾಕಿ ಸಿಡಿಸಿದವರ ವಿರುದ್ಧ ಪ್ರಕರಣ ದಾಖಲಿಸುವುದಿಲ್ಲ ಎಂದು ಭರವಸೆ ನೀಡಿದ್ದ ಪೊಲೀಸರು 8 ಮಂದಿ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಅಮಾಯಕರ ವಿರುದ್ಧ ದಾಖಲಾದ ಎಫ್‌ಐಆರ್ ರದ್ದುಪಡಿಸದಿದ್ದರೆ ಹೋರಾಟ ನಡೆಸಲಿದ್ದೇವೆ' ಎಂದು ಎಚ್ಚರಿಕೆ ನೀಡಿದರು.

ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲೆಗೆ ಭೇಟಿ ನೀಡಿದ್ದಾಗ ಅಮಾಯಕರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು. ಜಿಲ್ಲಾ ಉಸ್ತು ವಾರಿ ಸಚಿವ ದಿನೇಶ್ ಗುಂಡೂರಾವ್ ಜಿಲ್ಲೆಗೆ ಭೇಟಿ ನೀಡಿದಾಗಲೂ ಅಮಾಯಕರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಪೊಲೀಸ್ ಇಲಾಖೆಯನ್ನು ಕಾಂಗ್ರೆಸ್ ನಾಯಕರೇ ನಿಯಂತ್ರಿಸುತ್ತಿದ್ದಾರೆ' ಎಂದರು. ಬಿಜೆಪಿಯ ಇಬ್ಬರು ಕಾರ್ಯಕರ್ತರಿಗೆ ಚೂರಿಯಿಂದ ಇರಿಯಲಾಗಿದ್ದು, ಆತಂಕದ ವಾತಾವರಣ ಸೃಷ್ಟಿಯಾಗಿದೆ. ಜಿಲ್ಲೆಯಲ್ಲಿ ಪೊಲೀಸರಿಗೆ ಹೊಡೆದರೂ ಕೇಳುವವರಿಲ್ಲ. ಅವರೂ ಭಯದಲ್ಲಿದ್ದಾರೆ' ಎಂದರು.

### ಎಲ್ಲೆಂದರಲ್ಲಿ ಕಸದ ರಾಶಿ

• **ಉದಯವಾಹಿನಿ, ಆಲ್ದೂರು**

ಪಟ್ಟಣದ ವಾರ್ಡ್‌ಗಳಲ್ಲಿ ಎಲ್ಲೆಂದರಲ್ಲಿ ಕಸದ ರಾಶಿ ಕಂಡು ಬರುತ್ತಿದ್ದು, ಸ್ಥಳೀಯ ಆಡಳಿತ ಕಸ ವಿಲೇವಾರಿಯನ್ನು ಗಂಭೀರವಾಗಿ ಪರಿಗಣಿಸಿ, ಸಮಸ್ಯೆ ಬಗೆಹರಿಸುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಆವರಣ ಗೋಡೆಯ ಪಕ್ಕ, ಸಂತೆ ಮೈದಾನ ವಾರ್ಡ್‌ನ ಹಂದಿ ಮಾಂಸದ ಅಂಗಡಿಯ ಸಮೀಪ, ಆಟೋ ನಿಲ್ದಾಣದ ಹತ್ತಿರ ಕಸ ರಾಶಿಗಟ್ಟಲೆ ಬಿದ್ದಿದ್ದು, ಪಂಚಾಯಿತಿ ಸ್ವಚ್ಛತಾ ಕಾರ್ಯ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿದೆ ಎಂದು ಸ್ಥಳೀಯರು ಬೇಸರ ವ್ಯಕ್ತಪಡಿಸಿದ್ದಾರೆ. ಪ್ಲಾಸ್ಟಿಕ್ ಜತೆಗೆ ಕೊಳೆತ ಹಣ್ಣು ಮತ್ತು ತರಕಾರಿಗಳನ್ನು ಎಸೆಯುತ್ತಿದ್ದು ಜಾನುವಾರುಗಳು ಇದನ್ನು ತಿನ್ನಲು ಕಸದ ರಾಶಿಗೆ ಬಾಯಿ ಹಾಕುತ್ತಿದ್ದು, ಪ್ಲಾಸ್ಟಿಕ್ ಕೂಡ ಮೂಕ ಪ್ರಾಣಿಗಳ ಒಡಲು ಸೇರುತ್ತಿದೆ. ಶಾಲೆಗಳ ಸಮೀಪದಲ್ಲಿ ಕಸದ ರಾಶಿ ಇರುವುದರಿಂದ ದುರ್ವಾಸನೆ ಮತ್ತು ಸೊಳ್ಳೆಗಳ ಕಾಟದಿಂದ ವಿದ್ಯಾರ್ಥಿಗಳು, ಶಿಕ್ಷಕರು ತೊಂದರೆ ಅನುಭವಿಸುತ್ತಿದ್ದಾರೆ.

ಕಳೆದ ತಿಂಗಳು ಆಲ್ದೂರು ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ 11 ಡೆಂಗಿ ಪ್ರಕರಣಗಳು ದಾಖಲಾಗಿವೆ. ಶಾಲಾ ಮಕ್ಕಳಿಗೆ ಸಾಂಕ್ರಾಮಿಕ ಕಾಯಿಲೆ ಹರಡಿದರೆ ಯಾರು ಹೊಣೆ ಎಂದು ಪ್ರಶ್ನಿಸುತ್ತಾರೆ ಸಾಮಾಜಿಕ ಕಾರ್ಯಕರ್ತ ಅರೇನೂರು ಸುಪ್ರೀತ್. ಎಲ್ಲಿ ಬೇಕೆಂದರಲ್ಲಿ ಕಸ ಎಸೆಯುವರ ವಿರುದ್ಧ ಕಠಿಣ ಕ್ರಮ ಜರುಗಿಸದ ಕಾರಣ, ಕಸದ ಸಮಸ್ಯೆ ಮುಂದುವರಿದಿದೆ. ಸ್ಥಳೀಯ ಜನಪ್ರತಿನಿಧಿಗಳು, ಪಂಚಾಯತಿಯವರು ಕೂಡ ಇದನ್ನು ಗಂಭೀರವಾಗಿ ಪರಿಗಣಿಸಿಲ್ಲ' ಎಂದು ಸಂತೆ ಮೈದಾನ ವಾರ್ಡ್ ನಿವಾಸಿ ಎ.ಆರ್. ನಾಗರಾಜ್ ಹೇಳಿದರು.

### ನೀಟ್ ಪರೀಕ್ಷೆಯ ಅಕ್ರಮದ ತನಿಖೆ ನಡೆಸುವಂತೆ ಒತ್ತಾಯಿಸಿ ಪ್ರತಿಭಟನೆ

• **ಉದಯವಾಹಿನಿ, ರಾಯಚೂರು**

ವೈದ್ಯಕೀಯ ಶಿಕ್ಷಣ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆಸಿರುವ ನೀಟ್ (ಯುಜಿ) ಪರೀಕ್ಷೆಯ ಫಲಿತಾಂಶದಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಜೇಶನ್ (ಎಐಡಿಎಸ್‌ಒ) ಜಿಲ್ಲಾ ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಟಿಪ್ಪುಸುಲ್ತಾನ್ ಉದ್ಯಾನದಲ್ಲಿ ಪ್ರತಿಭಟನೆ ನಡೆಸಿದ ಜಿಲ್ಲಾ ಘಟಕದ ಪದಾಧಿಕಾರಿಗಳು ಆನಂತರ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು. ಜೂನ್ 4ರಂದು ಪ್ರಕಟಗೊಂಡ ನೀಟ್ ಪರೀಕ್ಷಾ ಫಲಿತಾಂಶದ ಪಾರದರ್ಶಕತೆಯ ಕುರಿತು ದೇಶವ್ಯಾಪಿ ವಿದ್ಯಾರ್ಥಿಗಳು ಹಾಗೂ ಪಾಲಕರು ಹಲವಾರು ಪ್ರಶ್ನೆಗಳನ್ನು ಎತ್ತಿದ್ದಾರೆ. ಯುಜಿಸಿ ಪರೀಕ್ಷಾ ಮಾರ್ಗಸೂಚಿ ಅನ್ವಯ ಅಂಕಗಳನ್ನು ನೀಡಿದ್ದಲ್ಲಿ ವಿದ್ಯಾರ್ಥಿಗಳು ಪಡೆಯಬಹುದಾದ ಅಂಕಗಳೊಂದಿಗೆ ಪ್ರಸ್ತುತ ಒಂದಿಷ್ಟು ವಿದ್ಯಾರ್ಥಿಗಳು ಪಡೆದಿರುವ ಅಂಕಗಳು ಹೊಂದಾಣಿಕೆಯಾಗುತ್ತಿಲ್ಲ ಎಂದು ದೂರಿದರು.

ಪರೀಕ್ಷೆ ಬರೆದ ಕೆಲವು ವಿದ್ಯಾರ್ಥಿಗಳಿಗೆ ಹೆಚ್ಚುವರಿ ಅಂಕ ನೀಡಿರುವುದಾಗಿ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ (ಎನ್‌ಟಿಎ) ಸಮಜಾಯಿಷಿ ನೀಡಿದೆ. ಆದರೆ, ಹೆಚ್ಚುವರಿ ಅಂಕಗಳನ್ನು ನೀಡಿರುವ ಮಾನದಂಡವು ಸಂಪೂರ್ಣವಾಗಿ ಪಕ್ಷಪಾತಿಯಾಗಿದೆ' ಎಂದು ಎಐಡಿಎಸ್ ಒ ಜಿಲ್ಲಾ ಘಟಕದ ಅಧ್ಯಕ್ಷ ಹಯ್ಯಾಳಪ್ಪ ಆರೋಪಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಪೋಷಕರಿಗೆ ಮಹತ್ವಾಕಾಂಕ್ಷೆಯನ್ನು ಬಹಿರಂಗಪಡಿಸಲು ಸರಿಯಾದ ಸಮಯ. ಅವರು ಸಂಪೂರ್ಣವಾಗಿ ನಿಮಗೆ ಬೆಂಬಲ ನೀಡುತ್ತಾರೆ. ನೀವು ಗಮನ ಹರಿಸಬೇಕು ಮತ್ತು ಇದನ್ನು ಸಾಧಿಸಲು ಶ್ರಮಪಡಬೇಕು.

**ವೃಷಭ** ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಮನೆ ಅಥವಾ ಸಾಮಾಜಿಕ ಸಮಾರಂಭಗಳಲ್ಲಿನ ಒಂದು ದುರಸ್ತಿ ಕೆಲಸ ನಿಮ್ಮನ್ನು ವ್ಯಸ್ತವಾಗಿರಿಸುವ ಸಾಧ್ಯತೆಯಿದೆ.

**ಮಿಥುನ** ಯಾರಾದರೂ ನಿಮ್ಮನ್ನು ಬಲಿಪಶುವನ್ನಾಗಿ ಮಾಡಲು ಪ್ರಯತ್ನಿಸಬಹುದಾದ್ದರಿಂದ ಎಚ್ಚರಿಕೆಯಿಂದಿರಿ. ಒತ್ತಡ ಹೆಚ್ಚಾಗಬಹುದು. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ

**ಕರ್ಕಾಟಕ** ಇಂದು ಹಣದ ಬಗ್ಗೆ ಕುಟುಂಬ ಸದಸ್ಯರಲ್ಲಿ ಗೊಂದಲ ಉಂಟಾಗಬಹುದು. ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು.

**ಸಿಂಹ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ – ನಿಮ್ಮ ಪ್ರೀತಿಪಾತ್ರರು ನಿಮಗೆ ಅಪಾರ ಸಂತೋಷ ತರುತ್ತಾರೆ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ.

**ಕನ್ಯಾ** ನೀವು ಸುತ್ತಲಿರುವವರು ನಿಮಗೆ ಬೆಂಬಲ ನೀಡುವುದರಿಂದ ನೀವು ಸಂತೋಷವಾಗಿರುವಿರಿ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ತುಲಾ** ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ.

**ವೃಶ್ಚಿಕ** ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ಮನದನ್ನೆಯ ವಿಚಿತ್ರ ನಡವಳಿಕೆ ನಿಮ್ಮ ಪ್ರೇಮವನ್ನು ಘಾಸಿಗೊಳಿಸುತ್ತದೆ. ಸಹಭಾಗಿತ್ವದ ಅವಕಾಶಗಳು ಚೆನ್ನಾಗಿ ಕಂಡರೂ ಎಲ್ಲವನ್ನೂ ಸ್ಪಷ್ಟವಾಗಿ ತಿಳಿದುಕೊಳ್ಳಿ.

**ಧನಸ್ಸು** ಪ್ರವಾಸ-ಪಾರ್ಟಿಗಳು ಮತ್ತು ಆನಂದ ವಿಹಾರಗಳು ಇಂದು ನಿಮ್ಮನ್ನು ಉತ್ತಮ ಮೂಡ್‌ನಲ್ಲಿಡುತ್ತವೆ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ.

**ಮಕರ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ.

**ಕುಂಭ** ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಕೌಟುಂಬಿಕ ಸಂತೋಷ ಕಾಣುತ್ತಿಲ್ಲ.

**ಮೀನ** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ.

# ವಿಐಎಸ್‌ಎಲ್‌ಗೆ ಮತ್ತೆ ಕಾಯಕಲ್ಪದ ಕನಸು?

## ಎಚ್.ಡಿ.ಕುಮಾರಸ್ವಾಮಿ ಅವರಿಗೆ ಕೇಂದ್ರದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಉಕ್ಕು ಸಚಿವಾಲಯದ ಹೊಣೆ

• ಉದಯವಾಹಿನಿ ಶಿವಮೊಗ್ಗ

ದೇಶದಲ್ಲಿ ಉಕ್ಕು ಉದ್ಯಮದ ವಿಸ್ತರಣೆಗೆ ಈ ವರ್ಷ ಭಾರತೀಯ ಉಕ್ಕು ಪ್ರಾಧಿಕಾರ 1 ಲಕ್ಷ ಕೋಟಿ ಹೂಡಿಕೆಗೆ ಮುಂದಾಗಿದೆ. ಜೊತೆಗೆ ಕರ್ನಾಟಕದವರೇ ಆದ ಎಚ್.ಡಿ.ಕುಮಾರಸ್ವಾಮಿ ಕೇಂದ್ರದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಉಕ್ಕು ಸಚಿವಾಲಯದ ಹೊಣೆ ಹೊತ್ತಿದ್ದಾರೆ.

**1 ಲಕ್ಷ ಕೋಟಿ ಹೂಡಿಕೆ**

ಇದು ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ (ವಿಐಎಸ್‌ಎಲ್) ನೌಕರರಲ್ಲಿ ಹೊಸ ಉತ್ಸಾಹ ತುಂಬಿದೆ. ದೇಶದಲ್ಲಿ ಉಕ್ಕು ಉತ್ಪಾದನೆಯ ಗುರಿಯನ್ನು ವಾರ್ಷಿಕ 15 ದಶಲಕ್ಷ ಟನ್‌ಗೆ ಹೆಚ್ಚಿಸುವ ಜೊತೆಗೆ ಹಸಿರು ಉಕ್ಕು (ಪರಿಸರ ಸ್ನೇಹಿ) ಉತ್ಪಾದನೆಗೆ ಒತ್ತು ನೀಡಲು 1 ಲಕ್ಷ ಕೋಟಿ ಹೂಡಿಕೆಗೆ ಭಾರತೀಯ ಉಕ್ಕು ಪ್ರಾಧಿಕಾರ ಕಳೆದ ಮೇ ತಿಂಗಳಲ್ಲಿ ಕೇಂದ್ರದಿಂದ ಮಂಜೂರಾತಿ ಪಡೆದಿದೆ. ಇದರಡಿ ಹಾಲಿ ಇರುವ ಕಾರ್ಖಾನೆಗಳ ಉತ್ಪಾದನಾ ಸಾಮರ್ಥ್ಯ ಹೆಚ್ಚಳ, ಹೊಸ ತಾಂತ್ರಿಕತೆ ಅಳವಡಿಕೆ ಹಾಗೂ ವಿಸ್ತರಣೆಗೆ ಅವಕಾಶ ಇದೆ. ಸೇಯ್ಲ್‌ನ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಇಷ್ಟು ದೊಡ್ಡ ಮೊತ್ತದ ಹೂಡಿಕೆ ಆಗುತ್ತಿದೆ. ಉಕ್ಕು ಉದ್ಯಮದಲ್ಲಿನ ಈ ರೂಪಾಂತರ ಭದ್ರಾವತಿಯ ವಿಐಎಸ್‌ಎಲ್‌ಗೆ ಜೀವ ತುಂಬಲು ನೆರವಾಗಲಿದೆ' ಎಂಬುದು ಅಲ್ಲಿನ ಕಾರ್ಮಿಕ ಮುಖಂಡರ ಅಭಿಮತ. ಕಳೆದ ವಿಧಾನಸಭೆ ಚುನಾವಣೆಗೆ ಮುನ್ನ ಎಚ್.ಡಿ.ಕುಮಾರಸ್ವಾಮಿ ಭದ್ರಾವತಿಗೆ ಬಂದಿದ್ದರು.

ಯಾವುದೇ ಕಾರಣಕ್ಕೂ ವಿಐಎಸ್‌ಎಲ್ ಮುಚ್ಚಲು ಅವಕಾಶ ಕೊಡುವುದಿಲ್ಲ ಎಂದು ಆಗ ಕಾರ್ಮಿಕರಿಗೆ ವಾಗ್ದಾನ ನೀಡಿದ್ದರು. ಲೋಕ ಸಭಾ ಚುನಾವಣೆ ಪ್ರಚಾರಕ್ಕೆ ಬಂದಾಗಲೂ ಅದನ್ನೇ ಪುನರುಚ್ಚರಿಸಿದ್ದರು. ಈಗ ವಿಐಎಸ್‌ಎಲ್‌ನ ಮಾತೃಸಂಸ್ಥೆ ಆದ ಭಾರತೀಯ ಉಕ್ಕು ಪ್ರಾಧಿಕಾರ, ಎಚ್.ಡಿ. ಕುಮಾರಸ್ವಾಮಿ ಅವರ ಸಚಿವಾಲಯದ ಅಧೀನದಲ್ಲಿಯೇ ಬರುತ್ತದೆ. ಹೀಗಾಗಿ ಖಂಡಿತವಾಗಿಯೂ ಅವರು ಮಾತು ಉಳಿಸಿಕೊಳ್ಳಲಿದ್ದಾರೆ ಎಂಬುದು ಕಾರ್ಮಿಕರ ನಿರೀಕ್ಷೆ. ಕೇಂದ್ರದ ಉಕ್ಕು ಸಚಿವಾಲಯ ದೇಶದಲ್ಲಿ ನಷ್ಟದಲ್ಲಿರುವ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಗಳನ್ನು ಶಾಶ್ವತವಾಗಿ ಮುಚ್ಚುವ ನಿರ್ಧಾರ ಕೈಗೊಂಡಿದೆ. ಅದಕ್ಕೆ ಪೂರಕವಾಗಿ ಭದ್ರಾವತಿಯ ವಿಐಎಸ್‌ಎಲ್ ಕಾರ್ಖಾನೆಯನ್ನು ಹಂತಹಂತವಾಗಿ ಮುಚ್ಚುವ ನಿರ್ಧಾರ ಕೈಗೊಳ್ಳಲಾಗಿದೆ. ಆ ಬಗ್ಗೆ ಸೇಯ್ಲ್ ಅಧಿಕೃತ ಆದೇಶವನ್ನೂ ಹೊರಡಿಸಿದೆ. ಆ ಹಾದಿಯಲ್ಲಿಯೇ ವಿಐಎಸ್‌ಎಲ್‌ನಲ್ಲಿ ಉತ್ಪಾದನೆ ಸ್ಥಗಿತಗೊಳಿಸಲು ಕಳೆದ ವರ್ಷ ಸೇಯ್ಲ್ ಆಡಳಿತ ಮಂಡಳಿ ನಿರ್ಧಾರ ಕೈಗೊಂಡಿತ್ತು. ಆಗಿನಿಂದಲೂ ಕಾರ್ಖಾನೆಯ ಕಾರ್ಮಿಕರು ನಿರಂತರವಾಗಿ ಹೋರಾಟ ಕೈಗೆತ್ತಿಕೊಂಡಿದ್ದಾರೆ.


ಉದಯವಾಹಿನಿ ಚಿತ್ರ

> ವಿಐಎಸ್‌ಎಲ್ ಕಾರ್ಖಾನೆ ಉಳಿಸುವ ವಿಚಾರದಲ್ಲಿ ಇಲ್ಲಿಯವರೆಗೂ ಬದ್ಧತೆಯಿಂದ ಕೆಲಸ ಮಾಡಿದ್ದೇನೆ. ಅದನ್ನು ಈಗಲೂ ಮುಂದುವರೆಸುವೆ. ಎಚ್.ಡಿ. ಕುಮಾರಸ್ವಾಮಿ ಅವರ ಭೇಟಿಗೆ ಸಮಾಯಾವಕಾಶ ಪಡೆಯುವೆ. ಎಲ್ಲರೂ ದೆಹಲಿಗೆ ತೆರಳಿ ಮನವಿ ಸಲ್ಲಿಸೋಣ. ಭದ್ರಾವತಿಗೂ ಅವರನ್ನು ಆಹ್ವಾನಿಸಿ ಕಾರ್ಖಾನೆಯ ಕಾಯಕಲ್ಪಕ್ಕೆ ಕೇಂದ್ರದಿಂದ ನೆರವು ಪಡೆಯೋಣ -ಬಿ.ವೈ.ರಾಘವೇಂದ್ರ

**ಎಚ್.ಡಿ ಕುಮಾರಸ್ವಾಮಿ ಭೇಟಿಗೆ ಮನವಿ**

ಭದ್ರಾವತಿಯ ವಿಐಎಸ್‌ಎಲ್ ಉಳಿಸುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಕೆಗೆ ಸಮಯಾವಕಾಶ ಕೊಡಿಸುವಂತೆ ಕಾರ್ಖಾನೆಯ ಕಾರ್ಮಿಕ ಮುಖಂಡರು ಮಂಗಳವಾರ ಸಂಸದ ಬಿ.ವೈ. ರಾಘವೇಂದ್ರ ಅವರನ್ನು ಶಿವಮೊಗ್ಗದಲ್ಲಿ ಭೇಟಿ ಮಾಡಿ ಮನವಿ ಸಲ್ಲಿಸಿದರು.

ಸ್ವಾತಂತ್ರ್ಯಾನಂತರ ಇದೇ ಮೊದಲ ಬಾರಿಗೆ ಕೇಂದ್ರದಲ್ಲಿ ಕರ್ನಾಟಕದವರೊಬ್ಬರು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಖಾತೆಯ ಹೊಣೆ ಹೊತ್ತಿದ್ದಾರೆ. ಮುಂದಿನ 100 ವರ್ಷಗಳ ಅವಧಿಗೆ ವಿಐಎಸ್‌ಎಲ್ ಭವಿಷ್ಯ ನಿರ್ಧರಿಸಲು ಇದು ಸಂಕ್ರಮಣ ಕಾಲವಾಗಿದೆ ಎಂದು ಕಾರ್ಖಾನೆಯ ಗುತ್ತಿಗೆ ಕಾರ್ಮಿಕರ ಸಂಘದ ಮುಖಂಡ ಅಮೃತ್ ಹೇಳುತ್ತಾರೆ.

90ರ ದಶಕದಲ್ಲಿ ಎಚ್.ಡಿ. ದೇವೇಗೌಡ ಅವರು ವಿಐಎಸ್‌ಎಲ್ ಕಾರ್ಖಾನೆಯನ್ನು ಸೇಯ್ಲ್‌ತೆಕ್ಕೆಗೆ ವಹಿಸಿ ಅದು ಆಗಲೇ ಮುಚ್ಚುವುದನ್ನು ತಡೆದಿದ್ದರು. ಕಾರ್ಖಾನೆಯನ್ನು ಶಾಶ್ವತವಾಗಿ ಉಳಿಸುವ ಅವಕಾಶ ಈಗ ಅವರ ಪುತ್ರನಿಗೆ ಒದಗಿಬಂದಿದೆ. ಭದ್ರಾವತಿಯ ವೈಭವದ ದಿನಗಳು ಮರಳಬಹುದು' ಎಂದು ಅವರು ವಿಶ್ವಾಸ ವ್ಯಕ್ತಪಡಿಸುತ್ತಾರೆ.

ಮೈಸೂರಿನಲ್ಲಿ ಯದುವೀರ ಅವರು ಗೆಲುವು ಸಾಧಿಸಿದ್ದಾರೆ. ಕಾರ್ಖಾನೆ ಅವರ ಪೂರ್ವಜರ ಕೊಡುಗೆ. ಜೊತೆಗೆ ಸ್ಥಳೀಯ ಸಂಸದರಾದ ಬಿ.ವೈ. ರಾಘವೇಂದ್ರ, ಕೂಡ ಕಾರ್ಖಾನೆ ಉಳಿಸಲು ನಮ್ಮೊಂದಿಗೆ ಕೈ ಜೋಡಿಸಲಿದ್ದಾರೆ' ಎಂದು ಅವರು ಹೇಳುತ್ತಾರೆ.

## ಜಿಲ್ಲೆಯಾದ್ಯಂತ 5000 ಸಸಿ ನೆಡುವ ಅಭಿಯಾನ

• ಉದಯವಾಹಿನಿ ಯಾದಗಿರಿ

ಜಿಲ್ಲೆಯಾದ್ಯಂತ 5000 ಸಸಿ ನೆಡುವ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಹೇಳಿದರು.

ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ತಾತಳಗೇರಾ ಗ್ರಾಮದ ಸರ್ಕಾರಿ ಶಾಲಾ ಆವರಣದಲ್ಲಿ ಸಸಿ ನೆಡುವ ಅಭಿಯಾನದ ಅಂಗವಾಗಿ ಸಿಂಗರಿಸಿದ ಎತ್ತಿನ ಗಾಡಿಯಲ್ಲಿ ಸಸಿಗಳನ್ನಿಟ್ಟು ಗ್ರಾಮದ ಪ್ರಮುಖ ಬೀದಿಗಳಲ್ಲಿ ಬಾಜ ಭಜಂತ್ರಿಗಳ ಸಮೇತ ನಡೆಸಿದ ಮೆರವಣಿಗೆಗೆ ಅದ್ದೂರಿ ಚಾಲನೆ ನೀಡಿ ಮಾತನಾಡಿ ಈ ಬಾರಿಯ ಮುಂಗಾರಿನಲ್ಲಿ ಇಂತಹ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಇಂದು ಗ್ರಾಮದಲ್ಲಿ ಚಾಲನೆ ನೀಡಿದ ಅಭಿಯಾನ ಗ್ರಾಮ ಹೋಬಳಿ ತಾಲ್ಲೂಕು ಸೇರಿದಂತೆ ವಿವಿಧೆಡೆ ಸಂಚರಿಸಿ ಸಸಿ ನೆಡಲಾಗುವುದು ಬರುವ ಆಗಸ್ಟ್ ತಿಂಗಳ ಕೊನೆಯವರೆಗೆ ಈ ಅಬಿಯಾನ ನಡೆಯಲಿದೆ ಎಂದು ತಿಳಿಸಿದರು. ಪ್ರತಿಯೊಬ್ಬರು ಸಸಿಗಳನ್ನು ನೆಟ್ಟು ಅದಕ್ಕೆ ತಮ್ಮ ಮಕ್ಕಳ ಹೆಸರು ಇಟ್ಟು ಬೆಳೆಸಬೇಕು ಮಕ್ಕಳಂತೆ ಸಸಿಗಳನ್ನು ಬೆಳೆಸಿ ದೊಡ್ಡ ಮರಗಳನ್ನಾಗಿ ಮಾಡಿದಲ್ಲಿ ಪರಿಸರ ರಕ್ಷಣೆಯಾಗುತ್ತದೆ ಇದರಿಂದ ಮುಂದಿನ ಪೀಳಿಗೆಗೆ ಉತ್ತಮ ವಾತಾವರಣ ಬಿಟ್ಟುಕೊಟ್ಟು ಹೋಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಪಿಯುಸಿಯಲ್ಲಿ ಶೇ. 92 ಅಂಕ ಪಡೆದ ಗ್ರಾಮೀಣ ವಿದ್ಯಾರ್ಥಿ ಕನಕಪ್ಪ ಮೇದಾರ ಈತನಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಜಯವಂತ ದಳಪತಿ, ಜಲ್ಲಪ್ಪ, ರಫೀಕ್ ಪಟೇಲ್, ಬಾಬಾ ಖಾನ್, ಮಲ್ಲಿಕಾರ್ಜುನ ಎಸ್ಡಿಎಂಸಿ, ಶರಣಪ್ಪ, ಸಾಬಣ್ಣ, ಹುಸೇನಪ್ಪ, ಇಬ್ರಾಹಿಂ, ಸಣ್ಣ ಹಣಮಂತ, ಬಾಲಪ್ಪ, ಶರಣಪ್ಪ, ಸಣ್ಣ ಮರಗಪ್ಪ, ತಾಯಪ್ಪ, ಸಾಬಣ್ಣ, ಹನುಮವ್ವ, ಗುಂಜಲಮ್ಮ ಸೇರಿ ಅನೇಕರು ಇದ್ದರು.

## ಜಿಗಜಿಣಗಿಗೆ ಉಪ ಪ್ರಧಾನಿ ಹುದ್ದೆ ನೀಡಲು ಮಾದಿಗರ ಒಕ್ಕೂಟ ಒತ್ತಾಯ

• ಉದಯವಾಹಿನಿ ವಿಜಯಪುರ

ಮೋದಿ ನೇತೃತ್ವದಲ್ಲಿ ರಚನೆಯಾದ ಮೂರನೇ ಅವಧಿಯ ಕೇಂದ್ರ ಸಂಪುಟದಲ್ಲಿ ಮಾದಿಗ ಸಮುದಾಯಕ್ಕೆ ಆದ್ಯತೆ ನೀಡದೇ ಅನ್ಯಾಯ ಮಾಡಲಾಗಿದೆ. ಹೀಗಾಗಿ ಕರ್ನಾಟಕದ ದಲಿತ ಕೋಟಾದಲ್ಲಿ ಹಿರಿಯ ರಾಜಕೀಯ ನಾಯಕ ರಮೇಶ ಜಿಗಜಿಣಗಿ ಅವರಿಗೆ ಉಪ ಪ್ರಧಾನಿ ಹುದ್ದೆಯನ್ನೂ, ಸಂಸದ ಗೋವಿಂದ ಕಾರಜೋಳ ಅವರಿಗೆ ಸಂಪುಟ ದರ್ಜೆ ಸಚಿವ ಸ್ಥಾನ ನೀಡುವಂತೆ ಆಗ್ರಹ ಕೇಳಿ ಬಂದಿದೆ.

ನಗರದಲ್ಲಿ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವಿಜಯಪುರ ಜಿಲ್ಲಾ ಮಾದಿಗರ ಒಕ್ಕೂಟದ ಪ್ರಮುಖರಾದ ಹಣಮಂತ ಬಿರಾದಾರ, ಪರಶುರಾಮ ರೋಣಿಹಾಳ, ಮೂರನೇ ಅವಧಿಗೆ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿರುವ ಮೋದಿ ಅವರು ರಾಜ್ಯದ ದಲಿತರಿಗೆ ಅನ್ಯಾಯ ಮಾಡಿದ್ದಾರೆ ಎಂದು ಅಸಮಧಾನ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ 4 ಬಾರಿ ಶಾಸಕರಾಗಿ, ಹೆಗಡೆ ಅವರ ಸರ್ಕಾರದಲ್ಲಿ ವಿವಿಧ ಖಾತೆಗಳ ಸಚಿವರಾಗಿ ಸಮರ್ಥವಾಗಿ ಆಡಳಿತ ನೀಡಿರುವ ಜಿಗಜಿಣಗಿ, ಸತತ 7 ಬಾರಿ ಸಂಸದರಾಗಿ ಆಯ್ಕೆಯಾಗಿರುವ ದೇಶದ ಹಿರಿಯ ಸಂಸದರೂ ಆಗಿದ್ದಾರೆ. ರಾಜ್ಯದಲ್ಲಿ ಸಚಿವರಾಗಿದ್ದಾಗಲೇ ಚಿಕ್ಕೋಡಿ ಕ್ಷೇತ್ರದಲ್ಲಿ ಸಂಸದರಾಗಿ ಸತತ 3 ಬಾರಿ ಹಾಗೂ ವಿಜಯಪುರದಲ್ಲಿ 4 ಬಾರಿ ಆಯ್ಕೆಯಾಗಿ ದಾಖಲೆ ಬರೆದಿದ್ದಾರೆ ಎಂದರು.

ಗೋವಿಂದ ಕಾರಜೋಳ ಅವರಿಗೆ ಪಕ್ಷದ ವರಿಷ್ಠರು ಕೊನೆಯ ಹಂತದಲ್ಲಿ ಟಿಕೆಟ್ ನೀಡಿದರೂ ಚಿತ್ರದುರ್ಗ ಲೋಕಸಭೆ ಕ್ಷೇತ್ರದಲ್ಲಿ ಸುಲಭವಾಗಿ ಗೆದ್ದು, ಬಿಜೆಪಿ ಸ್ಥಾನ ಉಳಿಸಿಕೊಂಡಿದ್ದಾರೆ. ರಾಜ್ಯದಲ್ಲಿ ಉಪ ಮುಖ್ಯಮಂತ್ರಿಯಾಗಿ ಸಮರ್ಥ ಆಡಳಿತ ನೀಡಿರುವ ಕಾರಜೋಳ ಅವರಿಗೆ ಸಂಪುಟ ದರ್ಜೆ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

**ಬಿಜೆಪಿ ಪಕ್ಷಕ್ಕೆ ತಕ್ಕ ಪಾಠ**

ರಾಜ್ಯದಲ್ಲಿ ಟಿಕೆಟ್ ಪಡೆದಿದ್ದ ಮಾದಿಗ ಸಮುದಾಯದ ಇಬ್ಬರೂ ಸಂಸದರಾಗಿ ಆಯ್ಕೆಯಾಗಿದ್ದಾರೆ. ಕಾರಣ ಪ್ರಧಾನಿ ನರೇಂದ್ರ ಮೋದಿ ಅವರು ಕರ್ನಾಟಕದ ದಲಿತರಿಗೆ ರಾಜಕೀಯ ಅಧಿಕಾರ ನೀಡುವಲ್ಲಿ ಆಗಿರುವ ಅನ್ಯಾಯ ಸರಿಪಡಿಸಲು ಮುಂದಾಗಬೇಕು. ಇಲ್ಲವಾದಲ್ಲಿ ಬರುವ ಚುನಾವಣಗಳಲ್ಲಿ ಬಿಜೆಪಿ ಪಕ್ಷಕ್ಕೆ ತಕ್ಕ ಪಾಠ ಕಲಿಸುವುದಾಗಿ ಎಚ್ಚರಿಸಿದರು.

## ಮುಂಗಾರು ಚುರುಕು : ರೈತಾಪಿ ಜನರು ಬಿತ್ತನೆಗೆ ಸಿದ್ಧತೆ

• ಉದಯವಾಹಿನಿ ಉಪ್ಪಿನಬೆಟಗೇರಿ

ಗ್ರಾಮ ಸೇರಿದಂತೆ ಸುತ್ತಲಿನ ಗ್ರಾಮದ ರೈತಾಪಿ ಜನರು ಮುಂಗಾರು ಬಿತ್ತನೆಗೆ ಸಿದ್ದತೆ ಮಾಡತೊಡಗಿದ್ದು, ಗೊಬ್ಬರ, ಬಿತ್ತನೆ ಬೀಜ ಖರೀದಿಗೆ ಮುಂದಾಗಿದ್ದಾರೆ. ಕಳೆದೊಂದು ವಾರ ಸುರಿದ ಮಳೆಗೆ ಕೃಷಿ ಭೂಮಿ ಹಸಿಯಾಗಿ ಈಗ ಹದಕ್ಕೆ ಬಂದಿದ್ದು, ಬಿತ್ತನೆ ಕಾರ್ಯ ಚುರುಕುಗೊಂಡಿವೆ.

**ಬಿತ್ತನೆ ಕಾರ್ಯ ಚುರುಕು**

ಕಳೆದ ಹತ್ತುದಿನಗಳ ಹಿಂದೆ ಅಡ್ಡ ಮಳೆ, ಮುಂಗಾರು ಮಳೆ ಸರಿಯಾದ ಪ್ರಮಾಣದಲ್ಲಿ ಆಗದ ಕಾರಣ ಕೃಷಿ ಚಟುವಟಿಕೆಗೆ ಹಿನ್ನಡೆಯಾಗಿತ್ತು. ಈಗ ರೈತಾಪಿ ಜನ ರಾಸಾಯನಿಕ ಗೊಬ್ಬರ ಖರೀದಿಸಲು ಕೃಷಿ ಪತ್ತಿನ ಸಹಕಾರ ಸಂಘ, ಅಗ್ರೋ ಕೇಂದ್ರ, ರೈತ ಸಂಪರ್ಕ ಕೇಂದ್ರಕ್ಕೆ ಹೋಗಿ ಖರೀದಿಸುತ್ತಿದ್ದಾರೆ.

ಹದಿನೈದು ದಿನದ ಹಿಂದೆ ಉಪ್ಪಿನಬೆಟಗೇರಿ ಹಾಗೂ ಸುತ್ತಲಿನ ಗ್ರಾಮದ ರೈತರು ಬೀಜ, ಗೊಬ್ಬರ ಖರೀದಿಸಿ ದಾಸ್ತಾನು ಮಾಡಿಟ್ಟುಕೊಂಡಿದ್ದಾರೆ. ಇನ್ನೂ ಕೆಲ ರೈತರು ಮುಂಗಾರು ಮಳೆ ಸುರಿದ ಮೇಲೆ ಖರೀದಿಸಿದರಾಯ್ತು ಎಂದು ಬಿಟ್ಟಿದ್ದರು. ಈಗ ಉತ್ತಮ ಮಳೆಯಾಗಿ ಬಿತ್ತಲು ಹದ ಬಂದಿರೊದ್ರಿಂದ ರೈತರು ರಾಸಾಯನಿಕ ಗೊಬ್ಬರ, ಬಿತ್ತನೆ ಬೀಜ ಖರೀದಿಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

ಮುಂಗಾರು ಹಂಗಾಮಿನಲ್ಲಿ ಹೆಸರು, ಉದ್ದು, ಸೋಯಾಬೀನ, ಶೇಂಗಾ ಮೊದಲಾದ ಬೆಳೆಗಳ ಬಿತ್ತನೆ ಮಾಡಲು ಮುಂದಾಗಿದ್ದೇವೆ.

> ಮೊದಲೇ ರಾಸಾಯನಿಕ ಗೊಬ್ಬರ ಸಿಗುವುದು ಕಷ್ಟವಾಗಿದೆ. ಆದ್ದರಿಂದ ಸೋಸಾಯಿಟಿ ನಿಯಮದಂತೆ ಖರೀದಿಸುವುದು ಅನೀವಾರ್ಯವಾಗಿದೆ
> -ಬಸವರಾಜ ಬಿಸ್ನಾಳ, ರೈತ

ರಾಸಾಯನಿಕ ಗೊಬ್ಬರದ ಸಲುವಾಗಿ ಆದಾರ ಕಾರ್ಡ ಸಮೇತ ತೆರಳಿ ಸರತಿ ಸಾಲಲ್ಲಿ ನಿಂತು ಖರೀದಿ ಮಾಡಿದ್ದೇವೆ. 50 ಕೆ.ಜಿ ಪ್ಯಾಕೇಟ್ ಡಿಎಪಿ ಗೊಬ್ಬರಕ್ಕೆ 1350 ಇದೆ. ಎರಡು ಪ್ಯಾಕೇಟ್ ಗೊಬ್ಬರಕ್ಕೆ 225 ರ ನ್ಯಾನೋ ಯೂರಿಯಾದ ಔಷಧಿ ಡಬ್ಬಿ ಮತ್ತು ಮೂರು, ನಾಲ್ಕು ಪ್ಯಾಕೇಟ್‌ಗೆ 600 ದರದ ಪೊಟ್ಯಾಶ್ ಗೊಬ್ಬರದ ಪ್ಯಾಕೇಟ್ ಹೆಚ್ಚುವರಿಯಾಗಿ ಖರೀದಿಸಬೇಕೆಂದು ನಿಯಮ ಮಾಡಿದ್ದಾರೆ.

## ನಕಲಿ ಆರ್‌ಎಂಡಿ ಗುಟ್ಕಾ ತಯಾರಿಕೆ ಜಾಲ ಪತ್ತೆ

### 7 ಆರೋಪಿಗಳ ಬಂಧನ,30 ಲಕ್ಷ ರೂ. ಮೌಲ್ಯದ ವಸ್ತು ಜಪ್ತಿ

• ಉದಯವಾಹಿನಿ ಬಾಗಲಕೋಟೆ

ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಪೊಲೀಸರು ಭರ್ಜರಿ ಬೇಟೆಯಾಡಿದ್ದು,ಇದೀಗ ನಕಲಿ ಆರ್‌ಎಂಡಿ ಗುಟ್ಕಾ ತಯಾರಿಕ ಜಾಲವನ್ನು ಪತ್ತೆ ಮಾಡಿದ್ದು, 7 ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತರಿಂದ 30 ಲಕ್ಷ ರೂಪಾಯಿ ಮೌಲ್ಯದ ವಸ್ತುಗಳನ್ನು ಕೂಡ ಜಪ್ತಿ ಮಾಡಿಕೊಂಡಿದ್ದಾರೆ ಎಂದು ತಿಳಿದು ಬಂದಿದೆ.

ಹೌದು ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಮಹಾಂತೇಶ್ ಮೂಲಿಮನಿ ಎಂಬುವವರ ದೂರಿನ ಮೇಲೆ ಕಾರ್ಯಾಚರಣೆ ಆರಂಭಿಸಿದ್ದ ಪೊಲೀಸರು, ಆರ್‌ಎಂಡಿ ಪಾನ್ ಮಸಾಲಾ ಮತ್ತು ಎಂ ಗೋಲ್ಡ್ ಸೆಂಟೆಡ್ ಟೊಬ್ಯಾಕೋ ಹೆಸರಿನ ಪೌಚ್ ತಯಾರಿಕೆ ಮಾಡುತ್ತಿದ್ದವರ ದಾಳಿ ಮಾಡಿ, ಏಳು ಜನ ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ.



ಉದಯವಾಹಿನಿ ಚಿತ್ರ

ಬಂಧಿತರು ದೆಹಲಿ, ಹೈದ್ರಾಬಾದ್, ಬೆಳಗಾವಿ ಹಾಗೂ ನಿಪ್ಪಾಣಿ ಮೂಲದವರಾಗಿದ್ದಾರೆ ಎಂದು ತಿಳಿದುಬಂದಿದೆ. ಬಂಧಿತ ಆರೋಪಿಗಳನ್ನು ಮಹಮ್ಮದ ವಶೀಮ್ ಮುನೀರ, ಹಿಮಾಯತ, ಮಹ್ಮದ್, ವಿಕಾಸ್ ಚವ್ಹಾಣ, ಸಂತೋಷ ಬಳ್ಳೊಳ್ಳಿ, ಜಹೀರ , ಇಕ್ಬಾಲ್ ಎಂದು ಹೇಳಲಾಗುತ್ತಿದ್ದು, ಸುಮಾರು 30 ಲಕ್ಷ ರೂ. ಮೌಲ್ಯದ ಎಂ ಗೋಲ್ಡ್ ಸೆಂಟೆಡ್ ಟೊಬ್ಯಾಕೋ ಹಾಗೂ ಆರ್‌ಎಂಡಿ ಪಾನ್ ಮಸಾಲಾ ಮತ್ತು ನಕಲಿಯಾಗಿ ತಯಾರಿಸಲು ಬಳಸುವ ಪ್ರಿಂಟೇಡ್ , ಕಟಿಂಗ್ ಮಶೀನ್‌ಗಳನ್ನು ಜಪ್ತಿ ಮಾಡಿದ್ದಾರೆ.

## ಹಳ್ಳದ ನೀರು ಕೊಟ್ಟಿಗೆಗೆ ನುಗ್ಗಿ ಜೋಡೆತ್ತು ಸಾವು

• ಉದಯವಾಹಿನಿ ಕಮಲಾಪುರ


ಉದಯವಾಹಿನಿ ಚಿತ್ರ

ಆಳಂದ ತಾಲ್ಲೂಕಿನ ಕಮಲಾನಗರ ಗ್ರಾಮದಲ್ಲಿ ಮಂಗಳವಾರ ರಾತ್ರಿ ಸುರಿದ ಧಾರಾಕಾರ ಮಳೆಗೆ ಹಳ್ಳದ ನೀರು ದನದ ಕೊಟ್ಟಿಗೆಗೆ ನುಗ್ಗಿ ಜೋಡೆತ್ತುಗಳು ಸ್ಥಳದಲ್ಲೇ ಮೃತಪಟ್ಟಿವೆ. ರೈತ ಕಲ್ಯಾಣಿ ಬಸವರಾಜ ಕೆರುಳ್ಳಿ ಅವರಿಗೆ ಸೇರಿ ಎರಡು ಎತ್ತುಗಳು ಮೃತಪಟ್ಟಿವೆ.ಕೃಷಿ ಪರಿಕರಗಳು ಕೊಚ್ಚಿಹೋಗಿದ್ದು, ಸುಮಾರು 1.50 ಲಕ್ಷ ಹಾನಿಯಾಗಿದೆ. ಕಲ್ಯಾಣಿ ಅವರು ಮಂಗಳವಾರ ಸಂಜೆ ತಮ್ಮ ಜಮೀನಿನ ಕೊಟ್ಟಿಗೆಯಲ್ಲಿ ಎತ್ತುಗಳನ್ನು ಕಟ್ಟಿ ಮನೆಗೆ ಬಂದಿದ್ದರು. ರಾತ್ರಿಯಿಡಿ ರಭಸದಿಂದ ಮಳೆ ಸುರಿದಿದೆ. ಕಮಲಾನಗರ-ಬೆಡಜುರ್ಗಿ ಮಧ್ಯದ ಗಡಿಹಳ್ಳದಲ್ಲಿ ಪ್ರವಾಹ ಉಂಟಾಗಿದೆ. ಪ್ರವಾಹದ ನೀರು ದನದ ಕೊಟ್ಟಿಗೆಗೆ ನುಗ್ಗಿದ್ದು, ದನಗಳನ್ನ ದಾವಣಿಗೆ ಕಟ್ಟಿದ್ದರಿಂದ ಪ್ರವಾಹ ಎದುರಿಸಲು ಆಗದೆ ಉಸಿರು ಗಟ್ಟಿ ಸ್ಥಳದಲ್ಲೇ ಮೃತಪಟ್ಟಿವೆ. ಸುಮಾರು 1 ಲಕ್ಷ ಮೌಲ್ಯದ ಎತ್ತು ಹಾಗೂ 50 ಸಾವಿರ ಮೌಲ್ಯದ ಪಂಪ್‌ಸೆಟ್, ಸ್ಪಿಂಕಲರ್ ಪೈಪ್ ಕೊಚ್ಚಿ ಹೋಗಿವೆ ಎಂದು ಕಲ್ಯಾಣಿ ತಿಳಿಸಿದರು.

ಪಶು ವೈದ್ಯಾಧಿಕಾರಿ ಬಸವರಾಜ ಸಪ್ಪಾಣಿ, ಕಂದಾಯ ನಿರೀಕ್ಷಕ ಮಲ್ಲಿನಾಥ ಮರಗುತ್ತಿ, ಗ್ರಾಮ ಲೆಕ್ಕಾಧಿಕಾರಿ ಸುನಿತಾ ಮತ್ತಿತರರು ಭೇಟಿ ನೀಡಿ ಪರಿಶೀಲಿಸಿದರು.

## ಪಾಕಿಸ್ಥಾನ್ ಜಿಂದಾಬಾದ್ ಘೋಷಣೆ

• ಉದಯವಾಹಿನಿ ಬೆಳಗಾವಿ


ಉದಯವಾಹಿನಿ ಚಿತ್ರ

ಇಲ್ಲಿನ ಜಿಲ್ಲಾ ನ್ಯಾಯಾಲಯದಲ್ಲೇ ಪಾಕಿಸ್ಥಾನ್ ಜಿಂದಾಬಾದ್ ಘೋಷಣೆ ಕೂಗಿದ ಘಟನೆ ಬುಧವಾರ ನಡೆದಿದೆ. ನಟೋರಿಯಸ್ ಪಾತಕಿ ಪುತ್ತೂರು ಮೂಲದ ಜಯೇಶ್ ಪೂಜಾರಿ ಘೋಷಣೆ ಕೂಗಿದ ವ್ಯಕ್ತಿಯಾಗಿದ್ದಾನೆ. ಕೋರ್ಟ್ ಒಳ ಭಾಗದಲ್ಲೇ ಘೋಷಣೆ ಕೂಗುತ್ತಿದ್ದಂತೆ ವಕೀಲರು, ಸಾರ್ವಜನಿಕರು ಧರ್ಮದೇಟು ನೀಡಿದ್ದಾರೆ. ಆಕ್ರೋಶಗೊಂಡು ಥಳಿಸುತ್ತಿದ್ದಂತೆ ಪೊಲೀಸರು ಆರೋಪಿಯನ್ನು ರಕ್ಷಣೆ ಮಾಡಿ ಹೊರ ಕರೆದುಕೊಂಡು ಬಂದು, ಎಪಿಎಂಸಿ ಠಾಣೆಗೆ ಕರೆದುಕೊಂಡು ಹೋಗಿದ್ದಾರೆ. ಹಿಂಡಲಗಾ ಜೈಲಿನಲ್ಲಿದ್ದುಕೊಂಡೇ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ಗೆ ಜೀವ ಬೆದರಿಕೆ ಹಾಕಿದ್ದ ಕೇಸ್ ವಿಚಾರಣೆಗಾಗಿ ಜಯೇಶ್ ಪೂಜಾರಿಯನ್ನು ಕೋರ್ಟ್ ಗೆ ಕರೆತರಲಾಗಿತ್ತು. ಈ ಹಿಂದೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರಿಗೂ 100 ಕೋಟಿ ರೂ. ಬೇಡಿಕೆ ಇಟ್ಟು ಜೈಲಿನಿಂದ ಕರೆ ಮಾಡಿ ಜೀವ ಬೆದರಿಕೆ ಹಾಕಿದ್ದ.

## ಕ್ಯಾನ್ಸರ್‌ಗೆ ಬಲಿಯಾದ ಪತಿ: ಭಯದಿಂದ ಮನೆಯೊಳಗೆ ಶವ ತರಲು ಬಿಡದ ಪತ್ನಿ

• ಉದಯವಾಹಿನಿ ಬಾಗಲಕೋಟೆ



ಕ್ಯಾನ್ಸರ್ ನಿಂದ ಮೃತಪಟ್ಟ ಪತಿಯ ಶವವನ್ನು ಪತ್ನಿ ಮನೆಯೊಳಗೆ ತರಲು ಬಿಡದ ಅಮಾನವೀಯ ಘಟನೆ ಬಾಗಲಕೋಟೆ ಜಿಲ್ಲೆಯ ಬನಹಟ್ಟಿ ನಗರದ ಸೋಮವಾರ ಪೇಟೆಯಲ್ಲಿ ನಡೆದಿದೆ. 51 ವರ್ಷದ ಗುರು ಕಿತ್ತೂರು ಎಂಬುವವರು ಕ್ಯಾನ್ಸರ್ ನಿಂದ ಸಾವನ್ನಪ್ಪಿದ್ದರು. ಕ್ಯಾನ್ಸರ್ ಗೆ ಹೆದರಿ ಗುರು ಪತ್ನಿ ಹಾಗೂ ಕುಟುಂಬದವರು ಶವವನ್ನು ಮನೆಯೊಳಗೆ ತರಲು ಬಿಟ್ಟಿಲ್ಲ. ಬಳಿಕ ಸ್ಥಳೀಯರು ಮನೆಯ ಹೊರಗೆ ವಿದ್ಯುತ್ ಕಂಬಕ್ಕೆ ಶವವನ್ನು ಆಧಾರವಾಗಿರಿಸಿ ಅಂತಿಮ ವಿಧಿ-ವಿಧಾನ ನೆರವೇರಿಸಿದ್ದಾರೆ.

ಕ್ಯಾನ್ಸರ್ ನಿಂದ ಜೀವನದಲ್ಲಿ ಜಿಗುಪ್ಸೆಗೊಂಡಿದ್ದ ಗುರು ಕಿತ್ತೂರ್ ಇತ್ತೀಚೆಗೆ ಮನೆಬಿಟ್ಟು ಹೋಗಿದ್ದರು. ಬನಹಟ್ಟಿ ನಗರದ ವೈಭವ ಚಿತ್ರಮಂದಿರ ಬಳಿ ರಸ್ತೆಯ ಪಕ್ಕದಲ್ಲಿ ಜೂನ್ 11ರಂದು ಮೃತಪಟ್ಟಿದ್ದರು. ಗುರು ಕಿತ್ತೂರ ಮೃತಪಟ್ಟಿರುವುದು ತಿಳಿದು ಸ್ಥಳೀಯರು ಮನೆಗೆ ಶವ ತಂದಿದ್ದಾರೆ ಈ ವೇಳೆ ಪತ್ನಿ ಹಾಗೂ ಕುಟುಂಬದವರು ಮನೆಯೊಳಗೆ ಶವ ತರಲು ಬಿಟ್ಟಿಲ್ಲ. ಬಳಿಕ ಅಕ್ಕ-ಪಕ್ಕದವರು ಮನೆಯವರಿಗೆ ತಿಳಿ ಹೇಳಿ ಕ್ಯಾನ್ಸರ್ ಬಗ್ಗೆ ಅರಿವು ಮೂಡಿಸಿದ್ದಾರೆ. ಬಳಿಕ ಶವ ತಂದು ಅಂತಿಮ ವಿಧಿವಿಧಾನ ನೆರವೇರಿಸಲು ಮನೆಯವರು ಅವಕಾಶ ಮಾಡಿಕೊಟ್ಟಿದ್ದಾರೆ.

## ಟಿಪ್ಪು ಮೈಮೇಲೆ ಬಂದಂತೆ ವರ್ತಿಸುವ ಸಿದ್ದರಾಮಯ್ಯ : ಆರ್ ಅಶೋಕ್

• ಉದಯವಾಹಿನಿ ಉಳ್ಳಾಲ



ಉಳ್ಳಾಲ ತಾಲ್ಲೂಕಿನ ಬೋಳಿಯಾರ್ ನಲ್ಲಿ ಬಿಜೆಪಿಯ ಇಬ್ಬರು ಕಾರ್ಯಕರ್ತರಿಗೆ ಚೂರಿ ಇರಿದಿರುವುದು ಪೂರ್ವಯೋಜಿತ ಕೃತ್ಯ. ಟಿಪ್ಪು ಮೈಮೇಲೆ ಬಂದಂತೆ ನಡೆದುಕೊಳ್ಳುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದಲ್ಲಿ ತಾಲಿಬಾನ್ ಸರ್ಕಾರ ನಡೆಸುತ್ತಿದ್ದಾರೆ' ಎಂದು ಆರ್. ಅಶೋಕ್ ಹೇಳಿದರು.ಬೋಳಿಯಾರ್ ಚೂರಿ ಇರಿತ ಪ್ರಕರಣದಲ್ಲಿ ಗಾಯಗೊಂಡ ಹರೀಶ್ ಹಾಗು ನಂದ ಕುಮಾರ್ ಅವರ ಆರೋಗ್ಯ ವಿಚಾರಿಸಿ ಮಾತನಾಡಿದರು.ಡ್ಯಾಗರ್ ನಿಂದ ಇರಿದಿರುವುದನ್ನು ಗಮನಿಸಿದರೆ ಇದೊಂದು ಪೂರ್ವಯೋಜಿತ ಕೃತ್ಯದಂತೆ ಕಾಣಿಸುತ್ತದೆ. ತಕ್ಷಣಕ್ಕೆ ಡ್ಯಾಗರ್ ಎಲ್ಲಿಂದ ಬರುತ್ತೆ. ಭಾರತ್ ಮಾತಾ ಕಿ ಜೈ ಅನ್ನುವ ಘೋಷಣೆ ವೀಡಿಯೋ ಗಮನಿಸಿದ್ದೇನೆ. ಮಸೀದಿ ಮುಂದೆ ಭಾರತ್ ಮಾತಾ ಕಿ ಜೈ ಅಂದಿದ್ದಾರೆ. ದೇಶದಲ್ಲಿ ಎಲ್ಲಿಯೂ ದೇಶಕ್ಕೆ ಜೈ ಅಂದಲ್ಲಿ ಸನ್ಮಾನ ಮಾಡ್ತಾರೆ, ಕರ್ನಾಟಕದಲ್ಲಿ ಹಾಗೂ ಮಂಗಳೂರು- ಉಡುಪಿ ಭಾಗದಲ್ಲಿ ಭಾರತ್ ಮಾತಾ ಕಿ ಜೈ ಅಂದಲ್ಲಿ ಡ್ಯಾಗರ್‌ನಿಂದ ಇರಿಯುವ ಕೃತ್ಯಗಳು ನಡೆಯುತ್ತಿವೆ. ರಾಜ್ಯದಲ್ಲಿರುವ ತಾಲಿಬಾನ್ ಸರ್ಕಾರವನ್ನು ಹೇಳೋರೂ ಕೇಳೋರು ಯಾರು ಇಲ್ಲದಾಗಿದೆ ಎಂದರು.

## ದರ್ಶನ್‌ನನ್ನು ಸಿನಿಮಾ ಇಂಡಸ್ಟ್ರಿಯಿಂದಲೇ ಬ್ಯಾನ್ ಮಾಡ್ಬೇಕು

• ಉದಯವಾಹಿನಿ ಚಿತ್ರದುರ್ಗ

ಮಗ ರೇಣುಕಾಸ್ವಾಮಿಯನ್ನು ಚಿತ್ರಹಿಂಸೆ ನೀಡಿ ಕೊಲೆ ಮಾಡಿದ ಆರೋಪಿಗಳಿಗೆ ರೇಣುಕಾಸ್ವಾಮಿ ತಾಯಿ ರತ್ನಪ್ರಭಾ ಹಿಡಿಶಾಪ ಹಾಕಿದ್ದಾರೆ.

ಮಗನನ್ನು ಕಳೆದುಕೊಂಡ ನೋವಿನಲ್ಲಿರುವ ರೇಣುಕಾಸ್ವಾಮಿ ತಾಯಿ ನಟ ದರ್ಶನ್ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ದರ್ಶನ್ ನನ್ನು ಸಿನಿಮಾ ಇಂಡಸ್ಟ್ರಿಯಿಂದಲೇ ಬ್ಯಾನ್ ಮಾಡ್ಬೇಕು ಎಂದು ರೇಣುಕಾಸ್ವಾಮಿ ತಾಯಿ ಆಕ್ರೋಶ ಹೊರ ಹಾಕಿದ್ದಾರೆ.


ಉದಯವಾಹಿನಿ ಚಿತ್ರ

ದರ್ಶನ್ ರ ಯಾವುದೇ ಸಿನಿಮಾಗಳನ್ನು ರಿಲೀಸ್ ಮಾಡಬಾರದು. ನನ್ನ ಮಗನಿಗೆ ಆದ ಸ್ಥಿತಿ ಇವನಿಗೆ ಆಗಬೇಕು. ಅವರ ಕುಟುಂಬವೇ ಸರ್ವನಾಶವಾಗಬೇಕು ಎಂದು ಹಿಡಿಶಾಪ ಹಾಕಿದ್ದಾರೆ. ನನ್ನ ಪತಿಯನ್ನು ಚಿತ್ರಹಿಂಸೆ ನೀಡಿ ಕೊಂದಿದ್ದಾರೆ. ನಮ್ಮ ಕುಟುಂಬಕ್ಕೆ ಯಾರು ದಿಕ್ಕು..? ಅವರನ್ನು ವಾರ್ನ್ ಮಾಡಿ ಬಿಡಬಹುದಿತ್ತು ಎಂದು ರೇಣುಕಾಸ್ವಾಮಿ ಪತ್ನಿ ಕೂಡ ಕಣ್ಣೀರಿಟ್ಟಿದ್ದಾರೆ.

# ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಸೇರಿಸಿ

### • ಮಕ್ಕಳು ಶಾಲೆಗೆ ಬಂದಾಗ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯವಾಗುತ್ತದೆ: ನ್ಯಾ.ಸಂತೋಷ್

• ಉದಯವಾಹಿನಿ ಶಿವಮೊಗ್ಗ

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಬರುವಂತೆ ಮಾಡಬೇಕು ಹಾಗೂ ಹೆಚ್ಚಿನ ಬಾಲ ಕಾರ್ಮಿಕ ತಪಾಸಣೆಯನ್ನು ಕೈಗೊಂಡು ಮಕ್ಕಳನ್ನು ಮುಖ್ಯವಾಹಿನಿಗೆ ತರಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ್ ಎಂ ಎಸ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕರ ಯೋಜನಾ ಸೊಸೈಟಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ವಕೀಲರ ಸಂಘ, ಶಿವಮೊಗ್ಗ ಹಾಲು ಒಕ್ಕೂಟ ಇವರ ಸಂಯುಕ್ತಾಶ್ರಯದಲ್ಲಿ ಜೂ.12 ರಂದು ದುರ್ಗಿಗುಡಿ ಸರ್ಕಾರಿ ಪ್ರೌಢಶಾಲೆಯಲ್ಲಿ ಏರ್ಪಡಿಸಲಾಗಿದ್ದ 'ವಿಶ್ವ ಬಾಲ ಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ-2024' ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016 ರ ಕುರಿತು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು. ಹಾಗೂ ಕಾಯ್ದೆಯನ್ನು ಇನ್ನೂ ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು. ಬಾಲ ಕಾರ್ಮಿಕ ತಪಾಸಣೆಯನ್ನು ಹೆಚ್ಚೆಚ್ಚು ಕೈಗೊಂಡು ಮಕ್ಕಳು ದುಡಿಯುತ್ತಿರುವುದು ಕಂಡು ಬಂದಲ್ಲಿ, ಸೂಕ್ತ ಕ್ರಮ ಕೈಗೊಂಡು ಮಕ್ಕಳು ಶಾಲೆಗೆ ಬರುವಂತೆ ಮಾಡಬೇಕೆಂದು ತಿಳಿಸಿದರು.

**ಕಾನೂನು ಅರಿವು ಜಾಥಾ**

ಬೆಳಿಗ್ಗೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ನಗರದ ಶಿವಪ್ಪ ಸರ್ಕಲ್‌ನಿಂದ ದುರ್ಗಿಗುಡಿ ಸರ್ಕಾರಿ ಪ್ರೌಢಶಾಲೆವರೆಗೆ ಏರ್ಪಡಿಸಲಾಗಿದ್ದ ಸ್ತಬ್ಧಚಿತ್ರ ವಾಹನ ಹಾಗೂ ಕರಪತ್ರ ಮೂಲಕ ಕಾನೂನು ಅರಿವು ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜುನಾಥ ನಾಯಕ್ ಮತ್ತು ಜಿಲ್ಲಾ ಪಂಚಾಯತ್ ಸಿಇಓ ಸ್ನೇಹಲ್ ಸುಧಾಕರ ಲೋಖಂಡೆ ಚಾಲನೆ ನೀಡಿದರು.

ಮಕ್ಕಳು ಶಾಲೆಗೆ ಬಂದಾಗ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯವಾಗುತ್ತದೆ. ಆದ್ದರಿಂದ ಎಲ್ಲಾ ಮಕ್ಕಳು ಶಾಲೆಗೆ ಬಂದು ವಿದ್ಯಾಭ್ಯಾಸದಲ್ಲಿ ತೊಡಗಬೇಕು. ಶಾಲೆ ಬಿಟ್ಟ ಮಕ್ಕಳನ್ನು ಗುರುತಿಸಿ ಕಡ್ಡಾಯವಾಗಿ ಶಾಲೆಗೆ ಬರುವಂತೆ ಮಾಡಬೇಕೆಂದು ತಿಳಿಸಿದರು.


ಉದಯವಾಹಿನಿ ಚಿತ್ರ

> ಶಿಶು ಅಭಿವೃದ್ಧಿ ಯೋಜನ ಅಧಿಕಾರಿ ಗಂಗಾ ಬಾಯಿ ಮಾತನಾಡಿ, ಬಾಲ್ಯ ವಿವಾಹ ತಡೆಗಟ್ಟಲು ಎಲ್ಲರೂ ಸಹಕರಿಸಬೇಕು. ಈ ನಿಟ್ಟಿನಲ್ಲಿ ಮಕ್ಕಳು ಮನೆಯಲ್ಲಿ ಮಾಹಿತಿಯನ್ನು ನೀಡಿ ಜಾಗೃತಿ ಮೂಡಿಸಬೇಕು. ಹಾಗೂ ಮಕ್ಕಳ ಮತ್ತು ಮಹಿಳೆಯರ ಸಾಗಣೆ ಬಗ್ಗೆ ಅತ್ಯಂತ ಎಚ್ಚರಿಕೆಯಿಂದ ಇರಬೇಕು. ಅಂತಹ ಘಟನೆಗಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098 ಗೆ ಹಾಗೂ 112 ಗೆ ಕರೆ ಮಾಡಿ ಸಹಕರಿಸಬೇಕು
> – ಗಂಗಾ ಬಾಯಿ, ಯೋಜನ ಅಧಿಕಾರಿ

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ರೇಖಾ ಜಿ.ಎಂ ಮಾತನಾಡಿ, ನಿಮ್ಮ ಸುತ್ತ ಮುತ್ತಲಿನ ಪ್ರದೇಶಗಳಾದ ಗ್ಯಾರೇಜ್ಗಳು, ಕಟ್ಟಡ ಕೆಲಸ, ಭಿಕ್ಷಟಾನೆ ಮತ್ತು ಬೇರೆ ಯಾವುದೇ ಕ್ಷೇತ್ರದಲ್ಲಿ ಮಕ್ಕಳನ್ನು ಕೆಲಸಕ್ಕೆ ಸೇರಿಸಿಕೊಂಡರೆ ಅಥವಾ ಮಕ್ಕಳು ಕೆಲಸ ಮಾಡುತ್ತಿದ್ದರೆ ಅಂತಹ ಮಕ್ಕಳನ್ನು ರಕ್ಷಣೆ ಮಾಡಲು ಮುಂದಾಗಬೇಕು.

**ಬಾಲಕಾರ್ಮಿಕ ವಿರೋಧಿ ದಿನ**

ಮಕ್ಕಳ ಸಹಾಯವಾಣಿ 1098 ಕರೆ ಮಾಡಿ ಮಾಹಿತಿ ನೀಡಿ ರಕ್ಷಣೆ ಕಾರ್ಯದಲ್ಲಿ ಕೈಜೋಡಿಸಿರೆಂದು ಸಾರ್ವಜನಿಕರಿಗೆ ಮನವಿ ಮಾಡಿದರು.

ಬೆಳಗ್ಗೆ 10 ರಿಂದ ಸಂಜೆ 4.30 ವರೆಗೆ ಮಕ್ಕಳು ಶಾಲೆಯಲ್ಲಿ ಕಲಿಯಬೇಕು. ಕೆಲಸಕ್ಕೆ ಹೋಗಬಾರದು. ಆ ರೀತಿ ಕೆಲಸ ಮಾಡುವ ನಿಮ್ಮ ಸ್ನೇಹಿತರು ಕಂಡು ಬಂದರೆ ಶಾಲಾ ಶಿಕ್ಷಕರಿಗೆ ತಿಳಿಸಿ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದ ಅವರು ಮಕ್ಕಳು ಮೊಬೈಲ್ ಬಳಕೆಯನ್ನು ಮಿತವಾಗಿ ಮಾಡಬೇಕು. ಕೇವಲ ಕಲಿಕೆಯ ವಿಷಯವಾಗಿ ಮಾತ್ರ ಬಳಕೆ ಮಾಡಬೇಕೆಂದು ತಿಳಿ ಹೇಳಿದರು. ಹಾಗೂ ಈ ಮಾಹಿತಿಯನ್ನು ತಂದೆ ತಾಯಿ, ಸುತ್ತಮುತ್ತಲಿನ ಜನರಿಗೆ ತಿಳಿಸಿ ಜಾಗೃತಿ ಮೂಡಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾರ್ಮಿಕ ನಿರೀಕ್ಷಕ ಭೀಮೇಶ್ ಪಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಮಡು ಬಾಲಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಹಾಗೂ ತಿದ್ದುಪಡಿ 2016 ಕುರಿತು ಮಾಹಿತಿ ನೀಡಿದರು.

ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ರಘು ನಾಥ, ಕಾರ್ಮಿಕ ಅಧಿಕಾರಿ ವೇಣುಗೋಪಾಲ್, ದುರ್ಗಿ ಗುಡಿ ಶಾಲೆ ಮುಖ್ಯೋಪಾಧ್ಯಾಯ ಮೋಹನ್, ದೈಹಿಕ ಶಿಕ್ಷಕ ನಿರಂಜನಮೂರ್ತಿ, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಆರ್ಶದೀಪ್ ಸಿಂಗ್ ಬೆಂಕಿ ಬೌಲಿಂಗ್

# ಮೂರಂ ಕಿ ಮೊತ್ತ ಗಳಿಸಲು ತಿಣುಕಾಡಿದ ಅಮೆರಿಕ..!




ಎಡಗೈ ವೇಗಿ ಆರ್ಶದೀಪ್ ಸಿಂಗ್ ಮಾರಕ ದಾಳಿಗೆ ತತ್ತರಿಸಿದ ಆತಿಥೇಯ ಯುಎಸ್ಎ ತಂಡವು ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 110 ರನ್ ಬಾರಿಸಿದ್ದು, ಬಲಾಢ್ಯ ಟೀಂ ಇಂಡಿಯಾಗೆ ಸಾಧಾರಣ ಗುರಿ ನೀಡಿದೆ. ಟಿ20 ವಿಶ್ವಕಪ್ ಇತಿಹಾಸದಲ್ಲಿ ಶ್ರೇಷ್ಠ ಬೌಲಿಂಗ್ ಪ್ರದರ್ಶನ ತೋರಿದ ಆರ್ಶದೀಪ್ ಸಿಂಗ್ 9 ರನ್ ನೀಡಿ 4 ವಿಕೆಟ್ ಕಬಳಿಸುವ ಮೂಲಕ ಅಮೆರಿಕ ತಂಡವನ್ನು ಅಲ್ಪ ಮೊತ್ತಕ್ಕೆ ಕಟ್ಟಿ ಹಾಕುವಲ್ಲಿ ಯಶಸ್ವಿಯಾದರು.

ಇಲ್ಲಿನ ನಾಸೌ ಕೌಂಟಿ ಅಂತಾರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ಟಾಸ್ ಗೆದ್ದ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಮೊದಲು ಬೌಲಿಂಗ್ ಮಾಡುವ ತೀರ್ಮಾನ ತೆಗೆದುಕೊಂಡರು. ನಾಯಕನ ನಿರ್ಧಾರವನ್ನು ಸಮರ್ಥಿಸಿಕೊಳ್ಳುವಂತೆ ಬೌಲಿಂಗ್ ಮಾಡುವಲ್ಲಿ ಟೀಂ ಇಂಡಿಯಾ ಬೌಲರ್‌ಗಳು ಯಶಸ್ವಿಯಾದರು. ಇನಿಂಗ್ಸ್‌ನ ಮೊದಲ ಓವರ್‌ನ ಮೊದಲ ಎಸೆತದಲ್ಲೇ ಎಡಗೈ ವೇಗಿ ಆರ್ಶದೀಪ್ ಸಿಂಗ್ ಯುಎಸ್ಎ ತಂಡದ ಆರಂಭಿಕ ಬ್ಯಾಟರ್ ಜಹಾಂಗೀರ್ ಅವರನ್ನು ಎಲ್‌ಬಿ ಬಲೆಗೆ ಕೆಡಹುವಲ್ಲಿ ಯಶಸ್ವಿಯಾದರು. ಇನ್ನು ಆಂಡ್ರಿಸ್ ಗೌಸ್ ಅವರನ್ನು ಮೊದಲ ಓವರ್‌ನ ಕೊನೆಯ ಎಸೆತದಲ್ಲಿ ಆರ್ಶದೀಪ್ ಪೆವಿಲಿಯನ್ನಿಗಟ್ಟಿದರು. ಮೊದಲ ಓವರ್‌ನಲ್ಲೇ ಎರಡು ವಿಕೆಟ್ ಕಳೆದುಕೊಂಡು ಕಂಗಾಲಾದ ಅಮೆರಿಕ ತಂಡವು ಸಾಕಷ್ಟು ರಕ್ಷಣಾತ್ಮಕ ಆಟಕ್ಕೆ ಮೊರೆ ಹೋಯಿತು. ಪರಿಣಾಮ ಮೊದಲ 6 ಓವರ್‌ಗಳ ಪವರ್‌ಪ್ಲೇನಲ್ಲಿ ಯುಎಸ್ಎ ತಂಡವು 2 ವಿಕೆಟ್ ನಷ್ಟಕ್ಕೆ ಕೇವಲ 18 ರನ್ ಗಳಿಸಲಷ್ಟೇ ಶಕ್ತವಾಯಿತು.

ಇನ್ನು ಎಂಟನೇ ಓವರ್‌ನಲ್ಲಿ ಯುಎಸ್ಎ ತಂಡದ ಅಪಾಯಕಾರಿ ಬ್ಯಾಟರ್ ಆರೋನ್ ಜೋನ್ಸ್(11) ಅವರನ್ನು ಬಲಿ ಪಡೆಯುವಲ್ಲಿ ಹಾರ್ದಿಕ್ ಪಾಂಡ್ಯ ಯಶಸ್ವಿಯಾದರು. ಮೊದಲ 10 ಓವರ್ ಅಂತ್ಯದ ವೇಳೆಗೆ ಯುಎಸ್ಎ ತಂಡವು 3 ವಿಕೆಟ್ ಕಳೆದುಕೊಂಡು 42 ರನ್ ಗಳಿಸಲಷ್ಟೇ ಶಕ್ತವಾಯಿತು.

ಒಂದು ಕಡೆ ನಿರಂತರ ವಿಕೆಟ್ ಬೀಳುತ್ತಿದ್ದರೂ ಮತ್ತೊಂದು ತುದಿಯಲ್ಲಿ ರಕ್ಷಣಾತ್ಮಕ ಆಟವಾಡಿದ ಆರಂಭಿಕ ಬ್ಯಾಟರ್ ಸ್ಟೀವನ್ ಟೇಲರ್ 30 ಎಸೆತಗಳನ್ನು ಎದುರಿಸಿ ಎರಡು ಸಿಕ್ಸರ್ ಸಹಿತ 24 ರನ್ ಬಾರಿಸಿ ಅಕ್ಷರ್ ಪಟೇಲ್ ಬೌಲಿಂಗ್‌ನಲ್ಲಿ ಕ್ಲೀನ್ ಬೌಲ್ಡ್ ಮಾಡುವಲ್ಲಿ ಯಶಸ್ವಿಯಾದರು.

ಇನ್ನು ಮಧ್ಯಮ ಕ್ರಮಾಂಕದಲ್ಲಿ ನಿತೀಶ್ ಕುಮಾರ್ 23 ಎಸೆತಗಳನ್ನು ಎದುರಿಸಿ 2 ಬೌಂಡರಿ ಹಾಗೂ ಒಂದು ಸಿಕ್ಸರ್ ಸಹಿತ 27 ರನ್ ಸಿಡಿಸಿ ಆರ್ಶದೀಪ್ ಸಿಂಗ್‌ಗೆ ಮೂರನೇ ಬಲಿಯಾದರು. ಇನ್ನು ಕೋರಿ ಆಂಡರ್‌ಸನ್ 14 ಹಾಗೂ ಹರ್ಮಿತ್ ಸಿಂಗ್ 10 ರನ್ ಸಿಡಿಸಿ ತಂಡಕ್ಕೆ ಉಪಯುಕ್ತ ರನ್ ಕಾಣಿಕೆ ನೀಡಿದರು

### ಆರ್ಶದೀಪ್ ಸಿಂಗ್ ಮಾರಕ ದಾಳಿ

**ಮೊದಲ ಓವರ್‌ನಲ್ಲೇ 2 ವಿಕೆಟ್ ಕಬಳಿಸಿದ್ದ ಟೀಂ ಇಂಡಿಯಾ ಎಡಗೈ ವೇಗಿ ಆರ್ಶದೀಪ್ ಸಿಂಗ್, ಆ ಬಳಿಕವೂ ಶಿಸ್ತುಬದ್ಧ ದಾಳಿ ನಡೆಸುವ ಮೂಲಕ ಯುಎಸ್ಎ ಬೌಲರ್‌ಗಳನ್ನು ಕಾಡಿದರು. ಆರ್ಶದೀಪ್ 4 ಓವರ್ ಬೌಲಿಂಗ್ ಮಾಡಿ ಕೇವಲ 9 ರನ್ ನೀಡಿ 4 ವಿಕೆಟ್ ಕಬಳಿಸುವಲ್ಲಿ ಯಶಸ್ವಿಯಾದರು. ಈ ಮೂಲಕ ಟಿ20 ವಿಶ್ವಕಪ್ ಇತಿಹಾಸದಲ್ಲಿ ಟೀಂ ಇಂಡಿಯಾ ಪರ ಶ್ರೇಷ್ಠ ಬೌಲಿಂಗ್ ಪ್ರದರ್ಶನ ತೋರಿದ ಆಟಗಾರ ಎನ್ನುವ ಹಿರಿಮೆಗೆ ಪಾತ್ರರಾದರು.**

**ಟಿ20 ವಿಶ್ವಕಪ್‌ನಲ್ಲಿ ಕೊಹ್ಲಿ ಮತ್ತೊಮ್ಮೆ ವಿಫಲರಾಗಿದ್ದಾರೆ. ಅಮೆರಿಕ ವಿರುದ್ಧದ ಪಂದ್ಯದಲ್ಲಿ ಕೊಹ್ಲಿ ಮೊದಲ ಎಸೆತದಲ್ಲೇ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು.**

# ವಿರಾಟ್ ಕೊಹ್ಲಿಗೆ ಪ್ರಪೋಸ್, ಗೆಳೆತಿ ಜೊತೆ ವಿವಾಹವಾದ ಇಂಗ್ಲೆಂಡ್ ಆಟಗಾರ್ತಿ

ಇಂಗ್ಲೆಂಡ್ ತಂಡದ ಆಲ್‌ರೌಂಡರ್ ಡೇನಿಯಲ್ ವ್ಯಾಟ್ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ಅದು ಸಹ ತಮ್ಮ ಗೆಳೆತಿಯ ಜೊತೆ ಎಂಬುದು ವಿಶೇಷ. ಅಂದರೆ ತಮ್ಮ ಬಹುಕಾಲದ ಗೆಳೆತಿ ಜಾರ್ಜಿ ಹಾಡ್ಜ್ ಜೊತೆ ಡೇನಿಯಲ್ ವ್ಯಾಟ್ ಹೊಸ ಇನಿಂಗ್ಸ್ ಆರಂಭಿಸಿದ್ದಾರೆ.



ಇಂಗ್ಲೆಂಡ್ ಕ್ರಿಕೆಟ್ ಆಟಗಾರ್ತಿ ಡೇನಿಯಲ್ ವ್ಯಾಟ್ ತನ್ನ ಬಹುಕಾಲದ ಗೆಳೆತಿ ಜಾರ್ಜಿ ಹಾಡ್ಜ್ ಅವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ಈ ವಿವಾಹವಾದ ಬೆನ್ನಲ್ಲೇ ಡೇನಿಯಲ್ ವ್ಯಾಟ್ ಹೆಸರು ಮತ್ತೊಮ್ಮೆ ಮುಂಚೂಣಿಗೆ ಬಂದಿದೆ.





ಇದಕ್ಕೆ ಮುಖ್ಯ ಕಾರಣ ಡೇನಿಯಲ್ ವ್ಯಾಟ್ ಈ ಹಿಂದೆ ವಿರಾಟ್ ಕೊಹ್ಲಿಯನ್ನು ಪ್ರಪೋಸ್ ಮಾಡಿರುವುದು. 2014 ರಲ್ಲಿ ವ್ಯಾಟ್, ಸೋಷಿಯಲ್ ಮೀಡಿಯಾ ಮೂಲಕ ನನ್ನನ್ನು ಮದುವೆಯಾಗು ಎಂದು ಪ್ರಪೋಸ್ ಮಾಡಿದ್ದರು. ಈ ಟ್ವೀಟ್ ಸಿಕ್ಕಾಪಟ್ಟೆ ವೈರಲ್ ಆಗಿತ್ತು. ಇದೀಗ ಡೇನಿಯಲ್ ವ್ಯಾಟ್ ತಮ್ಮ ಬಹುಕಾಲದ ಗೆಳೆತಿಯೊಂದಿಗೆ ಹೊಸ ಜೀವನ ಆರಂಭಿಸಿದ್ದಾರೆ. ಅದರಂತೆ ಇತ್ತೀಚೆಗೆ ಈ ಜೋಡಿ ಸಾಂಪ್ರಾದಾಯಿಕವಾಗಿ ಮದುವೆಯಾಗಿದ್ದು, ಇದರ ಫೋಟೋಗಳನ್ನು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಮಾಧ್ಯಮ ವರದಿಗಳ ಪ್ರಕಾರ, ಡೇನಿಯಲ್ ವ್ಯಾಟ್ ಅವರ ಸಂಗಾತಿ ಜಾರ್ಜಿ ಹಾಡ್ಜ್ ಬೇಸ್ ಮಹಿಳಾ ಫುಟ್ಬಾಲ್ ತಂಡದ ಮುಖ್ಯಸ್ಥರಾಗಿದ್ದಾರೆ. ಡೇನಿಯಲ್ ಮತ್ತು ಜಾರ್ಜಿ ಕಳೆದ ಕೆಲವು ವರ್ಷಗಳಿಂದ ಪರಸ್ಪರ ಡೇಟಿಂಗ್ ಮಾಡುತ್ತಿದ್ದರು. ಇದೀಗ ಇಬ್ಬರೂ ಮದುವರೆಯಾಗುವ ಮೂಲಕ ಹೊಸ ಜೀವನ ಆರಂಭಿಸಿದ್ದಾರೆ.

33 ವರ್ಷದ ಡೇನಿಯಲ್ ವ್ಯಾಟ್ ಇಂಗ್ಲೆಂಡ್ ಪರ 110 ಏಕದಿನ ಮತ್ತು 156 ಟಿ20 ಪಂದ್ಯಗಳನ್ನಾಡಿದ್ದಾರೆ. ಈ ವೇಳೆ ಕ್ರಮವಾಗಿ 1907 (ಏಕದಿನ) ಮತ್ತು 2726 (ಟಿ20) ರನ್ ಕಲೆಹಾಕಿದ್ದಾರೆ. ಅಲ್ಲದೆ ಈ ವೇಳೆ ಒಟ್ಟು 73 ವಿಕೆಟ್‌ಗಳನ್ನು ಕಬಳಿಸಿದ್ದಾರೆ.

# ವಿಶ್ವ ದಾಖಲೆ ನಿರ್ಮಿಸಿದ ಹ್ಯಾರಿಸ್ ರೌಫ್

ಟಿ20 ವಿಶ್ವಕಪ್‌ನ 22ನೇ ಪಂದ್ಯದಲ್ಲಿ ಪಾಕಿಸ್ತಾನ್ ತಂಡದ ವೇಗಿ ಹ್ಯಾರಿಸ್ ರೌಫ್ ಟಿ20 ಕ್ರಿಕೆಟ್‌ನಲ್ಲಿ 100 ವಿಕೆಟ್‌ಗಳನ್ನು ಪೂರೈಸಿದ್ದಾರೆ. ಈ ಮೂಲಕ ಈ ಸಾಧನೆ ಮಾಡಿದ 2ನೇ ಪಾಕ್ ಬೌಲರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಪಾಕಿಸ್ತಾನ್ ತಂಡದ ಸ್ಪಿನ್ನರ್ ಶಾದಾಬ್ ಖಾನ್ ಈ ಸಾಧನೆ ಮಾಡಿದ್ದರು. ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಕೆನಡಾ ವಿರುದ್ಧದ ಪಂದ್ಯದ



ಮೂಲಕ ಪಾಕ್ ವೇಗಿ ಹ್ಯಾರಿಸ್ ರೌಫ್ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಅದು ಕೂಡ ಟಿ20 ಕ್ರಿಕೆಟ್‌ನಲ್ಲಿ 100 ವಿಕೆಟ್‌ಗಳನ್ನು ಕಬಳಿಸುವ ಮೂಲಕ ಎಂಬುದು ವಿಶೇಷ.

ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಕೆನಡಾ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 106 ರನ್ ಕಲೆಹಾಕಿತ್ತು. ಈ ವೇಳೆ 4 ಓವರ್‌ಗಳನ್ನು ಎಸೆದಿದ್ದ ಹ್ಯಾರಿಸ್ ರೌಫ್ 26 ರನ್ ನೀಡಿ 2 ವಿಕೆಟ್ ಕಬಳಿಸಿದ್ದರು.




# ಅತ್ಯಂತ ಕೆಟ್ಟ ದಾಖಲೆ ಬರೆದ ರಿಝ್ವಾನ್

ಕೆನಾಡ ವಿರುದ್ಧದ ಪಂದ್ಯದಲ್ಲಿ ಪಾಕಿಸ್ತಾನ್ ತಂಡ ಜಯ ಸಾಧಿಸಿದೆ. ನ್ಯೂಯಾರ್ಕ್‌ನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಕೆನಢಾ ತಂಡ 106 ರನ್ ಕಲೆಹಾಕಿತ್ತು. ಈ ಗುರಿಯನ್ನು ಬೆನ್ನತ್ತಿದ ಪಾಕಿಸ್ತಾನ್ ಪರ ಮುಹಮ್ಮದ್ ರಿಝ್ವಾನ್ ಅರ್ಧಶತಕ ಬಾರಿಸಿದ್ದರು. ಈ ಹಾಫ್ ಸೆಂಚುರಿ ನೆರವಿನಿಂದ ಪಾಕಿಸ್ತಾನ್ ತಂಡವು 17.3 ಓವರ್‌ಗಳಲ್ಲಿ ಗುರಿ ತಲುಪಿ, 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಟಿ20 ವಿಶ್ವಕಪ್‌ನ 22ನೇ ಪಂದ್ಯದಲ್ಲಿ ಕೆನಡಾ ವಿರುದ್ಧ ಪಾಕಿಸ್ತಾನ್ ತಂಡದ ಆರಂಭಿಕ ಆಟಗಾರ ಮುಹಮ್ಮದ್ ರಿಝ್ವಾನ್ ಅರ್ಧಶತಕ ಬಾರಿಸಿದ್ದರು. ವಿಶೇಷ ಎಂದರೆ ಈ ಅರ್ಧಶತಕದೊಂದಿಗೆ ಟಿ20 ವಿಶ್ವಕಪ್‌ನ ಅತ್ಯಂತ ಕೆಟ್ಟ ದಾಖಲೆಯೊಂದನ್ನು ರಿಝ್ವಾನ್ ತಮ್ಮದಾಗಿಸಿಕೊಂಡಿದ್ದಾರೆ.

ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಕೆನಡಾ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 106 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಪಾಕಿಸ್ತಾನ್ ಪರ ಮುಹಮ್ಮದ್ ರಿಝ್ವಾನ್ ಆಕರ್ಷಕ ಬ್ಯಾಟಿಂಗ್ ಪ್ರದರ್ಶಿಸಿದರು. ರಕ್ಷಣಾತ್ಮಕ ಆಟಕ್ಕೆ ಒತ್ತು ನೀಡಿದ್ದ ಮುಹಮ್ಮದ್ ರಿಝ್ವಾನ್ ಅರ್ಧಶತಕ ಪೂರೈಸಲು ಬರೋಬ್ಬರಿ 52 ಎಸೆತಗಳನ್ನು ತೆಗೆದುಕೊಂಡಿದ್ದರು. ಇದರೊಂದಿಗೆ ಟಿ20 ವಿಶ್ವಕಪ್ ಇತಿಹಾಸದಲ್ಲಿ ಅತ್ಯಂತ ನಿಧಾನವಾಗಿ ಹಾಫ್ ಸೆಂಚುರಿ ಸಿಡಿಸಿದ ಬ್ಯಾಟರ್ ಎಂಬ ಕಳಪೆ ದಾಖಲೆ ರಿಝ್ವಾನ್ ಪಾಲಾಯಿತು. ಇದಕ್ಕೂ ಮುನ್ನ ಈ ಕೆಟ್ಟ ದಾಖಲೆ ಸೌತ್ ಆಫ್ರಿಕಾದ ಡೇವಿಡ್ ಮಿಲ್ಲರ್ ಹೆಸರಿನಲ್ಲಿತ್ತು. 2024ರ ಟಿ20 ವಿಶ್ವಕಪ್‌ನಲ್ಲಿ ನೆದರ್‌ಲೆಂಡ್ಸ್ ವಿರುದ್ಧದ ಪಂದ್ಯದಲ್ಲಿ ಮಿಲ್ಲರ್ 50 ಎಸೆತಗಳಲ್ಲಿ ಅರ್ಧಶತಕ ಬಾರಿಸಿ ಈ ಅನಗತ್ಯ ದಾಖಲೆ ಬರೆದಿದ್ದರು. ಇದೀಗ ಕೆನಡಾ ವಿರುದ್ಧ ನಿಧಾನಗತಿಯ ಬ್ಯಾಟಿಂಗ್‌ನೊಂದಿಗೆ ಮುಹಮ್ಮದ್ ರಿಝ್ವಾನ್ 52 ಎಸೆತಗಳಲ್ಲಿ ಅರ್ಧಶತಕ ಪೂರೈಸಿದ್ದಾರೆ. ಈ ಮೂಲಕ ಟಿ20 ವಿಶ್ವಕಪ್ ಇತಿಹಾಸದಲ್ಲಿ ಹಾಫ್ ಸೆಂಚುರಿ ಸಿಡಿಸಲು ಅತೀ ಹೆಚ್ಚು ಎಸೆತಗಳನ್ನು ತೆಗೆದುಕೊಂಡ ಬ್ಯಾಟರ್ ಎಂಬ ಕಳಪೆ ದಾಖಲೆ ಬರೆದಿದ್ದಾರೆ.



# 'ಕಾದಾಡಿ'ದಲ್ಲಿ ಐಟಂ ಹಾಡಿಗೆ ಕುಣಿದ ಆದಿತ್ಯ ಶಶಿಕುಮಾರ್

ಸುಪ್ರೀಂ ಹೀರೋ ಶಶಿಕುಮಾರ್ ಪುತ್ರ ಅಕ್ಷಿತ್ ಶಶಿಕುಮಾರ್ ಈಗ ಆದಿತ್ಯ ಶಶಿಕುಮಾರ್ ಅಂತ ಹೆಸರು ಬದಲಾಯಿಸಿಕೊಂಡಿದ್ದು, 'ಕಾದಾಡಿ' ಎನ್ನುವ ಚಿತ್ರದಲ್ಲಿ ನಟಿಸಿದ್ದಾರೆ. ಕನ್ನಡ, ತೆಲುಗು,ಹಿಂದಿ ಮತ್ತು ತಮಿಳು ಭಾಷೆಯಲ್ಲಿ ಸಿದ್ದಗೊಂಡಿರುವ ಸಿನಿಮಾವನ್ನು ಸತೀಶ್ ಮಾಲೆಂಪಾಟಿ ನಿರ್ದೇಶಿಸಿ, ಅರುಣಂ ಫಿಲಿಂಸ್ ಮುಖಾಂತರ ನಿರ್ಮಾಣ ಮಾಡಿದ್ದಾರೆ. ಪ್ರಚಾರದ ಸಲುವಾಗಿ ಮೊನ್ನೆಯಷ್ಟೇ ಮೂರನೇ ಹಾಡು ಐಟಂ ಲಿರಿಕಲ್ ವಿಡಿಯೋ ಬಿಡುಗಡೆ ಮಾಡಲಾಗಿದೆ.


ಕೃಷ್ಣಸಾಹಿತ್ಯದ 'ನೂರು ಪುಟದ ಜೀವನ, ಒಂದು ಏಳೆಯ ಕಾಗದ. ಬರೆದುಕೋ ನಂದೇ ಜೀವನ, ತಪ್ಪು ತಿಳಿದುಕೋ, ತಿಳಿದ ಮೇಲೆ ಮರೆತು ತಪ್ಪು ಮಾಡಿದರೆ ಜನ್ಮ ಪಾವನ. ದಂ ಕಿರಿಕಿರಿ, ಗುಂಡಲ್ಲೂ ಕಿರಿಕಿರಿ' ಹಾಡಿಗೆ ಅನನ್ಯ ಭಟ್ ಧ್ವನಿಯಾಗಿದ್ದು, ನಾಯಕನೊಂದಿಗೆ ಬಾಂಬೆ ನಟಿ ಸೋನಿ ಚೇರಿಸ್ಟ ಹೆಜ್ಜೆ ಹಾಕಿದ್ದಾರೆ.

ತ್ಯಾಗಮಯವಾಗುತ್ತಿರುವ ಜನರ ಜೀವನವು ದಿನದ ಅಂತ್ಯದಲ್ಲಿ ಪ್ರತಿಯೊಬ್ಬರು ತ್ಯಾಗಮಯಿರಾಗುತ್ತಾರೆ. ನಾವೆಲ್ಲರೂ ಕಾದಾಡುತ್ತಾ ಒಂದು ದಿನ ಸಾಯುತ್ತೇವೆ. ಆದರೆ ನಮ್ಮ ಜೀವನವನ್ನು ತ್ಯಾಗ ಮಾಡುವ ಮೂಲಕ ಸಮಾಜಕ್ಕೆ ಏನನ್ನಾದರೂ ಕೊಡಬೇಕು. ಮಕ್ಕಳಿಗೆ ಏನಾದರೂ ಆಗಬೇಕು. ನಾವು ದಿನದಿಂದ ದಿನಕ್ಕೆ ಹೋರಾಟ ನಡೆಸುತ್ತಿದ್ದೇವೆ. ಇಂತಹ ಅಂಶಗಳನ್ನು ಥ್ರಿಲ್ಲರ್ ಮೂಲಕ ತೋರಿಸುವ ಪ್ರಯತ್ನ ಮಾಡಲಾಗಿದೆ.

ಲಾವಣ್ಯ ಸಾಹುಕಾರ, ಚಾಂದಿನಿತಮಿಳರಸನ್ ನಾಯಕಿಯರು. ಉಳಿದಂತೆ ಪೋಸಾನಿ, ರವಿಕಾಳೆ, ಮಾರಿಮುತ್ತು, ಪ್ರೇಮ್‌ಮನೋಹರ್, ಶ್ರವಣ್‌ರಾಘವೇಂದ್ರ ಮುಂತಾದವರು ನಟಿಸಿದ್ದಾರೆ. ಆರು ಹಾಡುಗಳಿಗೆ ಭೀಮ್ಸ್ ಸಿಸಿರಿಲಿಯೋ ಸಂಗೀತ ಸಂಯೋಜಿಸಿದ್ದಾರೆ. ಛಾಯಾಗ್ರಹಣ ಡಿ.ಯೋಗಿಪ್ರಸಾದ್, ಕಲೆ ಅರ್ಜುನ್‌ಸೂರಿಸೆಟ್ಟಿ, ಸಂಕಲನ ಪ್ರಕಾಶ್‌ತೋಟ, ನೃತ್ಯ ರಾಜ್‌ಪಿಡಿ-ರಾಜ್‌ಕೃಷ್ಣ, ಸಾಹಸ ಬಿ.ಎಲ್.ಸತೀಶ್-ವಿನ್‌ಚೇನ್‌ಆಂಜಿ-ಬಿಂಬಸಾರ -ರಾಮಕೃಷ್ಣ-ರಾಮಸುಂಕರ ಅವರದಾಗಿದೆ. ಗೋವಾ, ಚಿಕ್ಕಮಗಳೂರು, ಹೈದರಬಾದ್, ಚೆನ್ನೈ ಸುಂದರ ತಾಣಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಅಂದಹಾಗೆ ಸಿನಿಮಾವು ಜುಲೈ ತಿಂಗಳಲ್ಲಿ ತೆರೆಗೆ ಬರುವ ಸಾಧ್ಯತೆ ಇದೆ.



# ಧನುಷ್ ನಟನೆಯ 'ರಾಯನ್' ರಿಲೀಸ್‌ಗೆ ಮುಹೂರ್ತ ಫಿಕ್ಸ್



ಕಾಲಿವುಡ್ ನಟ ಧನುಷ್ ನಟಿಸಿ, ನಿರ್ದೇಶನ ಮಾಡುತ್ತಿರುವ 'ರಾಯನ್' ಸಿನಿಮಾದ ರಿಲೀಸ್ ಡೇಟ್ ಕಾರಣಾಂತರಗಳಿಂದ ಮುಂದೂಡಲಾಗಿತ್ತು. ಈಗ ಫ್ಯಾನ್ಸ್‌ಗೆ ಸಿಹಿಸುದ್ದಿ ಸಿಕ್ಕಿದೆ. 'ರಾಯನ್' ಅಬ್ಬರಕ್ಕೆ ದಿನಾಂಕ ಕೂಡ ನಿಗದಿಯಾಗಿದೆ. 'ರಾಯನ್' ಸಿನಿಮಾ ಇದೇ ಜುಲೈ 26ರಂದು ರಿಲೀಸ್ ಆಗಲಿದೆ. ಈ ಕುರಿತು ಚಿತ್ರತಂಡ ಅನೌನ್ಸ್ ಮಾಡಿದೆ. ಎರಡನೇ ಬಾರಿ ಡೈರೆಕ್ಟರ್ ಕ್ಯಾಪ್ ತೊಟ್ಟಿರುವ ಧನುಷ್ ನಿರ್ದೇಶನದ ರಾಯನ್ ಸಿನಿಮಾ ಮೇಲೆ ಅಭಿಮಾನಿಗಳಿಗೆ ಭಾರೀ ನಿರೀಕ್ಷೆಯಿದೆ. ರಾಯನ್ ರಿಲೀಸ್ ಬಗ್ಗೆ ಅಪ್‌ಡೇಟ್ ಕೊಟ್ಟಿರೋದ್ರಿಂದ ಅಭಿಮಾನಿಗಳಿಗೆ ಖುಷಿಯಾಗಿದೆ. ಈಗ ರಿಲೀಸ್ ಆಗಿರುವ 'ರಾಯನ್' ಸಿನಿಮಾದ ಪೋಸ್ಟರ್‌ನಲ್ಲಿ ಧನುಷ್ ರಗಡ್ ಆಗಿ ಲುಕ್ ಕೊಟ್ಟಿದ್ದಾರೆ. ಇನ್ನೂ ಈ ಚಿತ್ರದಲ್ಲಿ ಎಸ್ ಜೆ ಸೂರ್ಯ, ಸಂದೀಪ್ ಕಿಶನ್, ಅಪರ್ಣಾ ಬಾಲಮುರಳಿ, ವರಲಕ್ಷ್ಮಿ ಶರತ್‌ಕುಮಾರ್, ಪ್ರಕಾಶ್ ರಾಜ್ ನಟಿಸಿದ್ದಾರೆ. ನಿತ್ಯಾ ಮೆನನ್ ಕೂಡ ವಿಶೇಷ ಪಾತ್ರದಲ್ಲಿ ನಟಿಸಿದ್ದಾರೆ. 2017ರಲ್ಲಿ 'ಪಾ ಪಾಂಡಿ' ಚಿತ್ರವನ್ನು ಧನುಷ್ ನಿರ್ದೇಶನ ಮಾಡಿದ್ದರು. ಧನುಷ್‌ಗೆ ಬೆಸ್ಟ್ ಡೈರೆಕ್ಟರ್ ಅವಾರ್ಡ್ ಕೂಡ ಒಲಿದು ಬಂದಿತ್ತು. ಇನ್ನೂ ನಟನೆ, ನಿರ್ದೇಶನದ ಜೊತೆ ಗಾಯಕರಾಗಿಯೂ ಧನುಷ್ ಗುರುತಿಸಿಕೊಂಡಿದ್ದಾರೆ.

# ರಶ್ಮಿಕಾ, ಶ್ರೀಲೀಲಾ ಅಬ್ಬರದ ನಡುವೆ ಕಾಣೆಯಾದ ಕೃತಿ ಶೆಟ್ಟಿ

ಮಂಗಳೂರಿನ ಬೆಡಗಿ ಕೃತಿ ಶೆಟ್ಟಿಗೆ ಅದ್ಯಾಕೋ ಅದೃಷ್ಟಕೈ ಕೊಟ್ಟಂತಿದೆ. 'ಉಪ್ಪೇನ' ಸಿನಿಮಾ ರಿಲೀಸ್ ಬಳಿಕ ಡಿಮ್ಯಾಂಡ್‌ನಲ್ಲಿದ್ದ ನಟಿ ಈಗ ಸಕ್ಸಸ್ ರೇಸ್‌ನಲ್ಲಿ ಹಿಂದೆ ಬಿದ್ದಿದ್ದಾರೆ. ರಶ್ಮಿಕಾ ಮಂದಣ್ಣ, ಶ್ರೀಲೀಲಾ ಹವಾ ನಡುವೆ ಕೃತಿ ಶೆಟ್ಟಿ ಮರೆಯಾಗ್ತಿದ್ದಾರಾ ಎಂಬ ಅನುಮಾನ ಅಭಿಮಾನಿಗಳಲ್ಲಿ ಕಾಡುತ್ತಿದೆ. ಕೃತಿ ಶೆಟ್ಟಿ ಈಗ ಆಗೊಂದು ಈಗೊಂದು ಸಿನಿಮಾ ಮಾಡ್ತಿದ್ದಾರೆ. ಇತ್ತೀಚೆಗೆ ತೆರೆಕಂಡ 'ಮನಮೇಯ್' ಎಂಬ ಸಿನಿಮಾಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಬೆನ್ನಲ್ಲೇ ತೆಲುಗಿನಲ್ಲಿ ಕೃತಿಗೆ ಆಫರ್ಸ್ ಕಮ್ಮಿಯಾಗ್ತಿದೆ ಎಂಬ ಮಾತುಗಳು ಕೂಡ ಕೇಳಿ ಬರುತ್ತಿವೆ. 'ಉಪ್ಪೇನ' ಸಿನಿಮಾ ಸಕ್ಸಸ್ ನಂತರ ಎಲ್ಲಾ ಸಿನಿಮಾಗಳನ್ನು ಒಪ್ಪಿಕೊಂಡರು. ಕಥೆಗೆ ಮಹತ್ವ ಕೊಡೋದ್ರಲ್ಲಿ ನಟಿ ಎಡವಿದ್ದರು ಎಂಬ ಮಾತುಗಳು ಕೇಳಿ ಬರುತ್ತಿವೆ. ಸದ್ಯ ಅವರ ಕೈಯಲ್ಲಿ ಯಾವುದೇ ತೆಲುಗಿನ ಸಿನಿಮಾಗಳು ಇಲ್ಲ ಎನ್ನಲಾಗಿದೆ. ಮಲಯಾಳಂ ಚಿತ್ರ ಬಿಟ್ಟರೇ ಬೇರೆ ಚಿತ್ರಗಳಿಲ್ಲ. ಇನ್ನೂ ರಶ್ಮಿಕಾ ಮಂದಣ್ಣ 6ಕ್ಕೂ ಹೆಚ್ಚು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ರವಿತೇಜ ಜೊತೆಗಿನ ಸಿನಿಮಾ, ಸೈಫ್ ಅಲಿ ಖಾನ್ ಪುತ್ರನ ಜೊತೆಗಿನ ಚಿತ್ರ ಸೇರಿದಂತೆ ಕೆಲವು ಪ್ರಾಜೆಕ್ಟ್‌ಗಳಿವೆ. ಹೀಗಿರುವಾಗ ರಶ್ಮಿಕಾ, ಶ್ರೀಲೀಲಾ ಅಬ್ಬರದ ನಡುವೆ ಕೃತಿ ಶೆಟ್ಟಿಗೆ ಬೇಡಿಕೆ ಕಮ್ಮಿಯಾಗಿದೆ. ಮತ್ತೆ ಹಳೆಯ ಚಾರ್ಮ್‌ಗೆ ನಟಿ ಬರುತ್ತಾರಾ?



# ಕಲ್ಕಿಗೆ ಜೊತೆಯಾದ ವಿಜಯ್ ದೇವರಕೊಂಡ

ಸೌತ್ ಚಿತ್ರರಂಗದ ಬಹುನಿರೀಕ್ಷಿತ ಸಿನಿಮಾ 'ಕಲ್ಕಿ 2898 ಎಡಿ' ರಿಲೀಸ್‌ಗಾಗಿ ಫ್ಯಾನ್ಸ್ ಎದುರು ನೋಡ್ತಿದ್ದಾರೆ. ಪ್ರಭಾಸ್, ದೀಪಿಕಾ ಪಡುಕೋಣೆ, ಬಿಗ್ ಬಿ ಅಂತಹ ಘಟಾನುಘಟಿ ಸ್ಟಾರ್‌ಗಳು ಇರುವ ಸಿನಿಮಾಗೆ ಮತ್ತೊಬ್ಬ ಸ್ಟಾರ್ ನಟನ ಎಂಟ್ರಿಯಾಗಿದೆ. ತೆಲುಗಿನ ರೌಡಿ ಬಾಯ್ ಕೂಡ ಸಾಥ್ ನೀಡುತ್ತಿದ್ದಾರೆ. ಕಲ್ಕಿ ಪ್ರಭಾಸ್‌ಗೆ ವಿಜಯ್ ದೇವರಕೊಂಡ ಈ ಚಿತ್ರದಲ್ಲಿ ಸಾಥ್ ನೀಡಲಿದ್ದಾರೆ. ವಿಶೇಷ ಪಾತ್ರದಲ್ಲಿ ವಿಜಯ್ ಕೂಡ ಕಾಣಿಸಿಕೊಳ್ಳಲಿದ್ದಾರೆ. ಅರ್ಜುನ ಎಂಬ ಪಾತ್ರದ ಮೂಲಕ ಬರುತ್ತಿದ್ದಾರೆ. ಪವರ್‌ಫುಲ್ ಪಾತ್ರಕ್ಕೆ 'ಫ್ಯಾಮಿಲಿ ಸ್ಟಾರ್' ನಟ ಜೀವತುಂಬಲಿದ್ದಾರೆ. ಅಂದಹಾಗೆ, ಜಗತ್ತಿನ ಮೊದಲ ಪ್ರದೇಶ ಮತ್ತು ಕೊನೆಯ ಪ್ರದೇಶ ಕಾಶಿ ಎನ್ನುಮ ಮೂಲಕ ಕಲ್ಕಿ ಟ್ರೈಲರ್ ಶುರುವಾಗುತ್ತೆ. ಜಗತ್ತಿನಿಂದ ಎಲ್ಲವನ್ನೂ ಕಿತ್ತುಕೊಂಡರೆ ಎಲ್ಲವೂ ಇರುತ್ತದೆ ಎನ್ನುವ ಕುತೂಹಲಕರ ಸಂಭಾಷೆಯಣೆಯಿದೆ. 6000 ಹಿಂದಿನ ಶಕ್ತಿ ಮತ್ತೆ ಬಂದಿದೆ. ಅಳಿವು-ಉಳಿವಿಗಾಗಿ ಹೋರಾಡುವವರ ದೃಶ್ಯ ತೋರಿಸಲಾಗಿದೆ. ಭೈರವನಾಗಿ ಯುದ್ಧಕ್ಕೆ ಪ್ರಭಾಸ್ ಸಜ್ಜಾಗಿದ್ದಾರೆ. 2 ಜಗತ್ತಿನ ಹೋರಾಟವನ್ನು ಸೈನ್ಸ್ ಫಿಕ್ಷನ್ ಮೂಲಕ ಅದ್ಭುತವಾಗಿ ತೋರಿಸಿದ್ದಾರೆ. ಯುದ್ಧದಲ್ಲಿ ಇದುವರೆಗೂ ನಾನು ಸೋತಿಲ್ಲ, ಇದನ್ನೂ ಸಹ ನಾನು ಸೋಲಲ್ಲ ಎಂದು ಖಡಕ್ ಆಗಿ ಪ್ರಭಾಸ್ ಡೈಲಾಗ್ ಹೊಡೆದಿದ್ದಾರೆ. ಪ್ರಭಾಸ್ ಜೊತೆ ದೀಪಿಕಾ, ದಿಶಾ ಪಟಾನಿ ಮಿಂಚಿದ್ದಾರೆ.

# ಹಾಟ್ ಆದ ಮೃಣಾಲ್ ನಟಿಯ ಮೈಮಾಟಕ್ಕೆ ಪಡ್ಡೆಹುಡುಗರು ಫಿದಾ



ಬಾಲಿವುಡ್ ಬೆಡಗಿ ಮೃಣಾಲ್ ಠಾಕೂರ್ ಇದೀಗ ಶರ್ಟ್ ಜಾರಿಸಿ ಹಾಟ್ ಆಗಿ ಪೋಸ್ ಕೊಟ್ಟಿದ್ದಾರೆ. 'ಸೀತಾರಾಮಂ' ನಟಿ ಬೋಲ್ಡ್ ಆಗಿ ಕಾಣಿಸಿಕೊಂಡಿರೋದನ್ನು ನೋಡಿ ಫ್ಯಾನ್ಸ್ ಅಚ್ಚರಿ ವ್ಯಕ್ತಪಡಿಸಿದ್ದಾರೆ. ಸದಾ ಸಿನಿಮಾಗಳ ಮೂಲಕ ಸದ್ದು ಮಾಡುತ್ತಿದ್ದ ನಟಿ ಈಗ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡು ಪಡ್ಡೆಹುಡುಗರ ನಿದ್ದೆ ಕದ್ದಿದ್ದಾರೆ. ವಿವಿಧ ಭಂಗಿಯ ಹಾಟ್ ಫೋಟೋಸ್ ಶೇರ್ ಮಾಡಿದ್ದಾರೆ. ಸಖತ್ ಸೆಕ್ಸಿಯಾಗಿ ನಟಿ ಪೋಸ್ ನೀಡಿದ್ದಾರೆ. ಮೃಣಾಲ್ ಮೈಮಾಟಕ್ಕೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಮೃಣಾಲ್ ಲುಕ್‌ಗೆ ಕೆಲವರು ಮೆಚ್ಚುಗೆ ಸೂಚಿಸಿದ್ರೆ, ಇನ್ನೂ ಕೆಲವರು ಹೀಗೆಲ್ಲಾ ಫೋಟೋಶೂಟ್ ಮಾಡಿಸಬೇಡಿ ಎಂದು ಫ್ಯಾನ್ಸ್ ಮನವಿ ಮಾಡಿದ್ದಾರೆ. ಮೃಣಾಲ್ ಠಾಕೂರ್‌ಗೆ ಇದೀಗ ಟಾಲಿವುಡ್, ಕಾಲಿವುಡ್, ಬಾಲಿವುಡ್‌ನಲ್ಲಿ ಭಾರೀ ಬೇಡಿಕೆಯಿದೆ. 'ಸೀತಾರಾಮಂ' ಸಕ್ಸಸ್ ನಂತರ ಸಾಲು ಸಾಲು ಸಿನಿಮಾಗಳು ನಟಿಯ ಕೈಯಲ್ಲಿವೆ. ಸ್ಟಾರ್ ನಟರ ಸಿನಿಮಾಗೆ ಮೃಣಾಲ್‌ನೇ ಬೇಕು ಎನ್ನುವಷ್ಟರ ಮಟ್ಟಿಗೆ ಡಿಮ್ಯಾಂಡ್ ಇದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966